
# ಸಂಪ್ರೀತಿ ಸಮೃದ್ಧಿ

ನಿಮ್ಮ ಮನ ಮನೆಗಳಿಗೆ...

ಮಾಸಿಕ


Sampreethi - Samruddhi | Volume : 8 | Issue : 12 | April 2026 | Pages : 32 | ₹ 20/-
ಸಂಪ್ರೀತಿ ಸಮೃದ್ಧಿ | ಸಂಪುಟ : 8 | ಸಂಚಿಕೆ : 12 | ಏಪ್ರಿಲ್ 2026 | ಪುಟಗಳು : 32 | ₹ 20 ರೂ.

ಸಮಾನತೆ, ಸತ್ಯ ಮತ್ತು ಸತ್ಸಂಸ್ಕಾರಗಳ ಮಹತ್ವವನ್ನು ನೆನಪಿಸುವ

ವಿಶ್ವಗುರು

## ಬಸವೇಶ್ವರ

ಜಯಂತಿಯ ಶುಭಾಶಯಗಳು


ಕನ್ನಡ ಚಿತ್ರರಂಗದ ಅಪ್ರತಿಮ ನಟರು ಮತ್ತು  ಶ್ರೇಷ್ಠ ಗಾಯಕರು,
ನಮ್ಮೆಲ್ಲರ ಪ್ರೀತಿಯ  “ಅಣ್ಣಾವ್ರು
ಡಾ. ರಾಜಕುಮಾರ್

# ಸಂಪ್ರೀತಿ – ಸಮೃದ್ಧಿ

ನಿಮ್ಮ ಮನ ಮನೆಗಳಿಗೆ...

ಮಾಸಿಕ


## ಸಂಪಾದಕೀಯ


**ಏಪ್ರಿಲ್– 2026**

**ಸಂಪುಟ 8, ಸಂಚಿಕೆ 12**

ಸಂಪಾದಕರು

**ಡಾ॥ ಸಿ. ನಂಜುಂಡಯ್ಯ**

**ಚಂದಾ ವಿವರ :**

| | |
|---|---|
| 10 ವರ್ಷಕ್ಕೆ | ರೂ.2000/– |
| 05 ವರ್ಷಕ್ಕೆ | ರೂ.1000/– |
| 02 ವರ್ಷಕ್ಕೆ | ರೂ.500/– |

ಹಣವನ್ನು ಮನಿಯಾರ್ಡರ್, ಬ್ಯಾಂಕ್ ಡ್ರಾಫ್ಟ್ ಮೂಲಕ ಕೆಳಗಿನ ವಿಳಾಸಕ್ಕೆ ಕಳುಹಿಸಬಹುದು.



ಸಂಪಾದಕರು

**ಸಂಪ್ರೀತಿ – ಸಮೃದ್ಧಿ**

ನಂ. 83, ಬಸವಣ್ಣ ದೇವಸ್ಥಾನ ರಸ್ತೆ
ದೊಡ್ಡಸೋಮನಹಳ್ಳಿ,
ಮಾಗಡಿ ತಾಲ್ಲೂಕು,
ಬೆಂಗಳೂರು ದಕ್ಷಿಣ ಜಿಲ್ಲೆ – 562 131.

**#66, ಸಂಪ್ರೀತಿ – ಸದನ ಸರ್ಕಾರಿ ಆಸ್ಪತ್ರೆ ಪಕ್ಕದ ರಸ್ತೆ, ಮಾಗಡಿ – 562 120 ಬೆಂಗಳೂರು ದಕ್ಷಿಣ ಜಿಲ್ಲೆ**



**ಮುದ್ರಕರು**

- **ಕಂಪ್ಯೂಟರ್ ವರ್ಲ್ಡ್**
  ಜಿ.ಟಿ.ವರ್ಲ್ಡ್ ಮಾಲ್ ಹತ್ತಿರ
  ಮಲ್ಲಿಗೆ ತೋಟ, ಮಾಗಡಿ ರಸ್ತೆ,
  ಬೆಂಗಳೂರು – 560 023.

- ಓದುಗರು ತಮ್ಮ ಅಭಿಪ್ರಾಯಗಳನ್ನು ಮತ್ತು ಲೇಖಕರು ಲೇಖನಗಳನ್ನು ಕೆಳಗಿನ ಈ–ಮೇಲ್ ವಿಳಾಸಕ್ಕೆ ಕಳುಹಿಸಬಹುದು.



sampreethisamruddhi@gmail.com

8971608213



ಸಂಪ್ರೀತಿ – ಸಮೃದ್ಧಿ


ಓರ್ವ ವಿದೇಶಿ ವಿದ್ವಾಂಸ ಹೇಳುತ್ತಾನೆ –"Whatever is great good and use full protect it and that is Religion !" ಶ್ರೇಷ್ಠವಾದುದನ್ನು, ಒಳಿತಾದುದನ್ನು ಮತ್ತು ಉಪಯುಕ್ತವಾದುದನ್ನು ರಕ್ಷಿಸುವುದೇ ಧರ್ಮವಾಗಿದೆ. ಜಗತ್ತನ್ನು, ಜೀವನವನ್ನು ಸುರೂಪಗೊಳಿಸುವುದು ಧರ್ಮವೇ ವಿನಾ ಕುರೂಪಗೊಳಿಸುವುದು ಧರ್ಮವಲ್ಲ. ಈ ಜಗತ್ತಿನ ಶಿಲ್ಪಿ ಜಗದೀಶ. ಇದು ದೇವನ ಸುಂದರ ಕಲಾಕೃತಿ. ಈ ಸೃಷ್ಟಿ ಸೌಂದರ್ಯವನ್ನು ಕಾಪಾಡುವುದೇ ಧರ್ಮ. ನಮ್ಮ ಬದುಕು ನಿಸರ್ಗಕ್ಕೆ ಪೂರಕವಾಗಿರಬೇಕೆ ವಿನಾ ಮಾರಕವಾಗಿರಬಾರದು.

**ದಯವಿಲ್ಲದ ಧರ್ಮವದೇವುದಯ್ಯಾ?**
**ದಯವೇ ಬೇಕು ಸಕಲ ಪ್ರಾಣಿಗಳೆಲ್ಲರಲ್ಲಿಯೂ**
**ದಯವೇ ಧರ್ಮದ ಮೂಲವಯ್ಯಾ**
**ಕೂಡಲಸಂಗಯ್ಯನಂತಲ್ಲದೊಲ್ಲನಯ್ಯ**
**ದಯವಿಲ್ಲದಿದ್ದರೆ ಅದು ಧರ್ಮವೇ ಅಲ್ಲ.**
**ಆದುದರಿಂದ ಎಲ್ಲ ಪ್ರಾಣಿಗಳಲ್ಲಿ**

ಎಲ್ಲರಲ್ಲಿ ದಯೆಯನ್ನು ಹೊಂದಿರುವುದೇ ನಿಜವಾದ ಧರ್ಮ. ದಯವಿಲ್ಲದವರನ್ನು ದೇವರೂ ಮೆಚ್ಚಲಾರನು. ಇದು ಮಹಾನುಭಾವಿ ಬಸವಣ್ಣನವರು ಮಾಡಿದ ಧರ್ಮದ ಸುಂದರ ವ್ಯಾಖ್ಯಾನ.ಭಗವಾನ್ಮ ಮಹಾವೀರರು ಕೂಡಾ 'ಅಹಿಂಸಾ ಪರಮೋ ಧರ್ಮಃ' ಎಂದಿರುವರು. ಎಲ್ಲರೊಂದಿಗೆ ನಗುನಗುತ ಪ್ರೀತಿಯಿಂದಿರುವುದು ಧರ್ಮ. ಈ ಪ್ರೀತಿಯು ಮನೆಯನ್ನು ದೇಶವನ್ನು ಕಟ್ಟುತ್ತದೆ. ಈ ಪ್ರೀತಿ, ಈ ಹೃದಯ ಮಾಧುರ್ಯವೇ ಪರಮತಪ, ಫಲ, ಸುಖ, ಮಿತ್ರ, ಯಜ್ಞಎಲ್ಲವೂ ಆಗಿದೆ.

ಈ ಜಗತ್ತನ್ನು ರಚಿಸುವುದು ಎಂಥ ಕಷ್ಟದ ಕೆಲಸ. ಒಂದು ಮರವನ್ನು ಬೆಳೆಸುವುದಕ್ಕೆ ನಾವು ಎಷ್ಟು ಕಷ್ಟ ಪಡುತ್ತೇವೆ. ಸಮಸ್ತ ಸೃಷ್ಟಿಯನ್ನೇ ಹಚ್ಚು ಹಸಿರಾಗಿ ಮಾಡುವ ಆ ನಿಸರ್ಗ ದೇವತೆಯ ತಪಸ್ಸು ಎಷ್ಟು ದೊಡ್ಡದು! ಕಲ್ಪಿಸಲೂ ಸಾಧ್ಯವಿಲ್ಲ. ಈ ಸುಂದರ ಸೃಷ್ಟಿಯನ್ನು ನಿರ್ಮಿಸಿ ಅದರಲ್ಲಿ ಪಕ್ಷಿಗಳಿಗೆ ಪ್ರಾಣಿಗಳಿಗೆ ಹಾಡಲು ಆಡಲು ಹಚ್ಚಿ ಅದನ್ನು ಮಗ್ನವಾಗಿ ನೋಡುತ್ತ ನಿಸರ್ಗದೇವತೆ ಮಹಾಮೌನ ಧ್ಯಾನವನ್ನು ಆದರಿಸುತ್ತಿರುವಳು.

ದೇವನಿರ್ಮಿತವಾದ ಈ ಭವ್ಯ ದಿವ್ಯ ಸೃಷ್ಟಿಯನ್ನು ಪ್ರೀತಿಯಿಂದಪರಿಪಾಲಿಸುವುದು ಕಾಪಾಡುವುದು ಅಹಿಂಸಾ ಧರ್ಮವಾಗಿದೆ.

ಓರ್ವ ವಿದ್ವಾಂಸರು ಹೇಳುತ್ತಾರೆ. –"It takes years and years to build a civilization; but it takes few seconds to destroy it" ಒಂದು ನಾಗರಿಕತೆಯನ್ನು ಕಟ್ಟುವುದಕ್ಕೆ ವರುಷ ವರುಷಗಳೇ ಬೇಕಾಗುತ್ತವೆ. ಆದರೆ ಆ ನಾಗರಿಕತೆಯನ್ನು ನಾಶಮಾಡುವುದಕ್ಕೆ ಕೆಲವೇ ಕೆಲವು ಕ್ಷಣಗಳು ಸಾಕು! ಈ ಜಗತ್ತಿನಲ್ಲಿ ಈಗಿನ ನಾಗರಿಕತೆ ಬೆಳೆಯಲು ಸುಮಾರು ಹತ್ತಾರು ಸಾವಿರ ವರುಷಗಳೇ ಹಿಡಿದಿರಬಹುದು. ಪ್ರತಿಫಲವಾಗಿ ಇಂದು ನಾವು ಭವ್ಯ ವೈಜ್ಞಾನಿಕ, ಸಾಮಾಜಿಕ, ಧಾರ್ಮಿಕ, ಶೈಕ್ಷಣಿಕ ಪ್ರಗತಿಯನ್ನು ಕಾಣುತ್ತಿದ್ದೇವೆ. ಇಂಥ ಸುಂದರ ಸಮಾಜವನ್ನು ನಾಗರಿಕತೆಯನ್ನು ಕೋಮಲ ಹೂವಿನಂತೆ ಕಾಪಾಡಿಕೊಂಡಿರುವುದೇ ನಿಜವಾದ ಧರ್ಮವಲ್ಲವೇ ? ॐ



ಭಾರತದ ಮಹಾನ್ ನಾಯಕ,
ಸಮಾಜ ಸುಧಾರಕ ಮತ್ತು ಸಂವಿಧಾನ ಶಿಲ್ಪಿ



# ಡಾ. ಬಿ.ಆರ್. ಅಂಬೇಡ್ಕರ್

- ಡಾ ಬಿ. ಆರ್ ಅಂಬೇಡ್ಕರ್ ರವರು 14ನೇ ಏಪ್ರಿಲ್, 1891 ಮಧ್ಯಪ್ರದೇಶದ ಮಾಹೋ ಎಂಬ ಮಿಲಿಟರಿ ಕ್ಯಾಂಪ್ ನಲ್ಲಿ ಹುಟ್ಟಿದರು. ಅಂಬೇಡ್ಕರ್ ರವರು ಮೂಲತಃ ಮಹಾರಾಷ್ಟ್ರದ ರತ್ನಗಿರಿ ಜಿಲ್ಲೆಯ ಖೇಡಾ ತಾಲ್ಲೂಕಿನ ಅಂಬೆವಾಡ ಗ್ರಾಮದವರು. ಇವರು ಮಹಾರ ಜಾತಿಯಲ್ಲಿ ಹುಟ್ಟಿದರು. ಈ ಜಾತಿಯವರು ಹೆಚ್ಚಿನ ಜನ ಬ್ರಿಟಿಷ್ ಸರ್ಕಾರದ ಮಿಲಿಟರಿ ಸೇವೆಯಲ್ಲಿ ಉದ್ಯೋಗಕ್ಕಾಗಿ ಸೇರುತ್ತಿದ್ದರು.
- ಇವರ ಅಜ್ಜ ಮಾಲೋಜಿ ಸಕ್ಪಾಲ್ ಅವರು ಬ್ರಿಟಿಷ್ ಈಸ್ಟ್ ಇಂಡಿಯಾ ಕಂಪನಿ ಬಾಂಬೆ ಸೇನೆಯಲ್ಲಿ ಸೇರಿ, ಹವಾಲ್ದಾರರಾಗಿ ನಿವೃತ್ತಿ ಹೊಂದಿದ್ದರು. ಇವರು ಆ ಕಾಲಕ್ಕೆ 19 ಮೆಡಲ್ ಗಳನ್ನು ಗಳಿಸಿದ್ದರು. ಇವರಿಗೆ ಇಬ್ಬರು ಮಕ್ಕಳು ರಾಮಜಿ ಸಕ್ಪಾಲ್, ಮೀರಾ ಸಕ್ಪಾಲ್. ರಾಮಜಿ ಸಕ್ಪಾಲ್ ಅವರ ಹೆಂಡತಿ ಭೀಮಬಾಯಿ. ಇವರು ಠಾಣೆ ಜಿಲ್ಲೆಯ ಮುರಬಾದಕರ್ ಎಂಬ ಅಸ್ಪೃಶ್ಯ ಕುಟುಂಬದವರು.
- ಇವರ ತಂದೆ ಹಾಗೂ ಆರು ಜನ ಚಿಕ್ಕಪ್ಪಂದಿರು, ಸೈನ್ಯದಲ್ಲಿ ಸುಬೇದಾರರಾಗಿದ್ದರು.ರಾಮಜಿ ಮತ್ತು ಭೀಮಬಾಯಿ ರವರು ಇಬ್ಬರು ಕಷ್ಟ ಸಹಿಷ್ಣುಗಳಾದ ಸತಿಪತಿಗಳಾಗಿದ್ದರು. ಇವರಿಗೆ 14 ಮಕ್ಕಳು ಹುಟ್ಟಿದರು. ಈ 14ನೇ ಮಗುವೇ ಅಂಬೇಡ್ಕರ್. ಅಂಬೇಡ್ಕರ್ ಅವರ ಮೊದಲ ಹೆಸರು ಭೀಮರಾವ್ ಆಗಿತ್ತು. ಡಾ. ಅಂಬೇಡ್ಕರರು ನಾನು ನನ್ನ ತಂದೆ ತಾಯಿಯರಿಗೆ 14 ನೇ ರತ್ನನಾಗಿದ್ದೇನೆ ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತಿದ್ದರು.
- ರಾಮಜಿ ಸಕ್ಪಾಲ್ ರವರಿಗೆ 14 ಮಕ್ಕಳಲ್ಲಿ ಬದುಕುಳಿದ್ದಿದ್ದು 5 ಜನ ಮಕ್ಕಳು, ಅವರು ಮಂಜುಳಾ, ತುಳಸಿ, ಬಲರಾಮ, ಆನಂದರಾವ್ ಮತ್ತು ಭೀಮರಾವ್. ಭೀಮರಾವ್ 2 ವರ್ಷದ ಬಾಲಕನಿದ್ದಾಗ ತಂದೆ ನೌಕರಿಯಿಂದ ನಿವೃತ್ತಿ ಹೊಂದಿದರು. ಇವರು 14 ವರ್ಷಗಳವರೆಗೆ ಮಿಲಿಟರಿ ಶಾಲೆಯಲ್ಲಿ ಮುಖ್ಯೋಪಾಧ್ಯಯರಾಗಿ ಸೇವೆ ಸಲ್ಲಿಸಿದ್ದರು. ಇವರು ಮರಾಠಿ, ಹಿಂದಿ ಭಾಷೆಯಲ್ಲಿ ಪ್ರಬುದ್ಧ ಜ್ಞಾನ ಹೊಂದಿದ್ದರು.

- ಜೊತೆಗೆ ಆಂಗ್ಲ ಭಾಷೆಯನ್ನು ಬಲ್ಲವರಾಗಿದ್ದರು. ಮಕ್ಕಳಲ್ಲಿ ದೇಶಭಕ್ತಿ, ಜ್ಞಾನ, ಹಾಗೂ ಧರ್ಮದ ಬಗ್ಗೆ ತಿಳಿಹೇಳಿಕೊಡುವಲ್ಲಿ ಸಫಲರಾದರು. ಮುಂದೆ ಭೀಮರಾವ್ ರವರು ಉತ್ತಮ ಸಂಸ್ಕೃತಿ ಹೊಂದಲು ತಂದೆಯವರು ಹೇಳಿಕೊಟ್ಟ ನೀತಿ ಪಾಠ ಸಹಾಯಕವಾಯಿತು. ಇವರು ಕಬೀರ ಪಂಥದವರು, ಕಬೀರರ ಧೋಹೆಗಳು, ರಾಮಾಯಣ, ಮಹಾಭಾರತದ ಕತೆಗಳನ್ನು ಮಕ್ಕಳಿಗೆ ಮುಂಜಾನೆ ಮತ್ತು ಸಾಯಂಕಾಲ ಹೇಳಿಕೊಡುತ್ತಿದ್ದರು.
- ರಾಮಜಿ ಸಕ್ಪಾಲ್ ರವರು ಮಿಲಿಟರಿ ಸೇವೆಯಿಂದ ನಿವೃತ್ತಿಯಾದ ನಂತರ ಡಾಪೋಲಿಗೆ ಬಂದರು. ಆದರೆ ಕೆಲವೇ ದಿನಗಳಲ್ಲಿ ಮಿಲಿಟರಿ ಕ್ವಾರ್ಟಸ್‌ನಲ್ಲಿ ಅವರಿಗೆ ಸೇವೆ ಸಿಕ್ಕ ಕಾರಣ 'ಸಾತಾರ'ಕ್ಕೆ ಕುಟುಂಬ ವರ್ಗಾಯಿಸಿದರು. ಭೀಮರಾವ್ ಪ್ರಾಥಮಿಕ ಶಿಕ್ಷಣ ಸಾತಾರದಲ್ಲಿ ಪ್ರಾರಂಭವಾಯಿತು. ಭೀಮರಾವ್ ಆರು ವರ್ಷದ ಬಾಲಕನಿದ್ದಾಗ ಅವರ ತಾಯಿ ಮರಣ ಹೊಂದುತ್ತಾರೆ.
- ಈ ಕಾರಣಕ್ಕಾಗಿ ಭೀಮರಾವ್ ರು ತನ್ನ ತಾಯಿಯ ಮಮತೆ ತನ್ನ ಅತ್ತೆಯಾದ ಮೀರಾಳಲ್ಲಿ ಕಂಡುಕೊಳ್ಳುತ್ತಾರೆ. ಮೀರಾ ಕರುಣೆಯ ಮೂರ್ತಿಯಾಗಿದ್ದಳು, ಗೂನುಬೆನ್ನಿನಿಂದಾಗಿ ಮದುವೆ ಯಾಗದೆ ತನ್ನ ಅಣ್ಣನ ಮಕ್ಕಳ ಪಾಲನೆ ಪೋಷಣೆಯಲ್ಲಿಯೇ ಸರ್ವಸ್ವವನ್ನೂ ಕಂಡುಕೊಳ್ಳುವಳು. ಭೀಮರಾವ್ ರವರಿಗೆ ಪ್ರಾಥಮಿಕ ಶಾಲೆಯಲ್ಲಿಯೇ ಅಸ್ಪೃಶ್ಯತೆಯ ಅನುಭವವಾಗುತ್ತದೆ. ಶಿಕ್ಷಕರು ಮತ್ತು ಸಹಪಾಠಿಗಳು ಇವರು ದಲಿತ ಜಾತಿಗೆ ಸೇರಿದವರೆಂಬ ಕಾರಣಕ್ಕಾಗಿ ಸೇರುತ್ತಿರಲ್ಲಿಲ್ಲ.
- ಅದಕ್ಕಾಗಿ ತರಗತಿಯ ಹೊರಗಡೆ ಕುಳಿತುಕೊಂಡು ಕಲಿಯಬೇಕಾಯಿತು. ಪ್ರಾಥಮಿಕ ಶಾಲೆಯಲ್ಲಿ ಎಲ್ಲರ ಅಸಹ್ಯದಿಂದಾಗಿ ಶಿಕ್ಷಣದಲ್ಲಿ ಅವರಿಗೆ ಹೆಚ್ಚು ಒಲವೇ ಇರಲಿಲ್ಲ. ಧ್ಯಾನ ಮಾಡುವುದು, ಮೇಕೆಯೊಡನೆ ಆಟವಾಡುವುದು ಅವರ ಹವ್ಯಾಸಗಳಾಗಿದ್ದವು. ಈ ಮಧ್ಯ ರಾಮಜಿ ಸಕ್ಪಾಲ್ ರವರು ಸಂಸಾರದ ನಿರ್ವಹಣೆಗಾಗಿ ಇನ್ನೊಂದು ಮದುವೆಯಾದರು.
- ಮಲತಾಯಿ ತನ್ನ ತಾಯಿಯ ಬಟ್ಟೆ ಹಾಗೂ ಒಡವೆಗಳನ್ನು ಹಾಕಿಕೊಂಡಾಗ, ಅದಕ್ಕಾಗಿ ತಂದೆ, ಅತ್ತೆಯೊಂದಿಗೆ ಜಗಳವಾಡುತ್ತಿದ್ದರು. ಸೋದರತ್ತೆ ವಾತ್ಸಲ್ಯದಿಂದ ಮಲತಾಯಿಯ ಅನಿವಾರ್ಯತೆಯ ಬಗ್ಗೆ ತಿಳಿ ಹೇಳಿದರು ಆದ್ರೂ ಸಹ ಸೋದರತ್ತೆಯ ಮಾತನ್ನು ತಪ್ಪಾಗಿ ಅರ್ಥೈಸಿಕೊಂಡು ಈ ಮನೆಯಲ್ಲಿ ಬದುಕುವುದು ಬೇಡ ಎಂದು ನಿರ್ಧರಿಸಿ ತನ್ನ ರೊಟ್ಟಿಯನ್ನು ತಾನೇ ಸಂಪಾದಿಸಿಕೊಳ್ಳಬೇಕೆಂದು ನಿರ್ಧರಿಸಿದರು.
- ತನ್ನ ವಯಸ್ಸಿನವರು ಬಾಂಬೆಯ ಬಟ್ಟೆಯ ಮಿಲ್ಲಿನಲ್ಲಿ ಕಾರ್ಮಿಕರಾಗಿ ದುಡಿಯಬೇಕೆಂದು ನಿರ್ಧರಿಸಿ ಬಾಬ್ ಗೆಗೋಗಳು ಬೇಕಾಗುವ ಹಣವನ್ನು ತನ್ನ ಅತ್ತೆಯ ಪರ್ಸ್ ನ್ನು ಮುರು ದಿನ ರಾತ್ರಿ ಎದ್ದು ಹಣವನ್ನು ಕದಿಯಲು ಪ್ರಯತ್ನಿಸುತ್ತಾರೆ ಆದ್ರೆ ನಾಲ್ಕನೇ ದಿನ ರಾತ್ರಿ ಪರ್ಸ್ ಕದ್ದು ಅದ್ರಲ್ಲಿ ಕೇವಲ ಅರ್ಧ ಆಣೆ ಇದ್ದು, ಬಾಂಬೆಗೆ ರೈಲಿನ ಟಿಕೇಟು ಮೂರು ಆಣೆ ಇರುತ್ತದೆ ಕದ್ದ ಹಣದಿಂದ ಬಾಂಬೆಗೆ ಹೋಗಲು ಸರಿಹೋಗುವುದಿಲ್ಲ.
- ಇದರಿಂದ ನೊಂದು ತನ್ನ ನಿರ್ಧಾರ ಬದಲಿಸಿ ಹೆಚ್ಚಿಗೆ ಓದಬೇಕೆಂದು ನಿರ್ಧರಿಸಿ ಓದುವ ಆಸೆ ಹೆಚ್ಚಿಸಿಕೊಳ್ಳುತ್ತಾರೆ. ಸತಾರ ಸರಕಾರಿ ಶಾಲೆಯಲ್ಲಿ ಪ್ರಾಥಮಿಕ ತರಗತಿಯಲ್ಲಿ ಓದುತ್ತಿರುವಾಗ ಮಹಾರ ಎಂಬ ಅಸ್ಪೃಶ್ಯರದವರೆಂಬ ಕಾರಣಕ್ಕಾಗಿ ಹೆಚ್ಚು ಕಡಿಮೆ ಎಲ್ಲ ಶಿಕ್ಷಕರು ಇವರನ್ನು ಅಸಹ್ಯವಾಗಿ ನೋಡುತ್ತಿದ್ದರು. ಯಾರೂ ಇವರ ಪ್ರತಿಭೆ ಗುರುತಿಸಲಿಲ್ಲ.
- ಆದರೆ ಅಲ್ಲಿನ ಶಿಕ್ಷಕರಲ್ಲಿ ಒಬ್ಬರಾದ ಫೆಂಡಸೆ ಅಂಬೇಡ್ಕರ್ ಎಂಬ ಶಿಕ್ಷಕರು ಈ ಬಾಲಕನ ಪ್ರತಿಭೆ,ಕಲಿಯುವ ಹಂಬಲ,ಸೂಕ್ಷ್ಮಬುದ್ಧಿಶಕ್ತಿಯನ್ನು ಗುರುತಿಸಿ ಇವರಿಗೆ ಪ್ರೋತ್ಸಾಹಿಸಿದರು. ಜಾತಿಯಲ್ಲಿ ಆ ಶಿಕ್ಷಕರು ಬ್ರಾಹ್ಮಣರಾಗಿದ್ದರೂ ಕೂಡ ತಾವು ಊಟಕ್ಕೆ ತಂದಿದ್ದ ಬುತ್ತಿಯಲ್ಲಿ ಭೀಮರವರಿಗೆ ಒಂದಿಷ್ಟು ಕೊಟ್ಟು ಪ್ರೀತಿಯಿಂದ ಊಟ ಮಾಡಿಸುತ್ತಿದ್ದರು.

- ಇದೇ ಫೆಂಡೆಸೆ ಅಂಬೇಡ್ಕರ್ ಭೀಮರಾವರವರ ಹೆಸರನ್ನು ತಮ್ಮ ಅಡ್ಡ ಹೆಸರಾದ ಅಂಬೇಡ್ಕರ್ ಎಂಬ ಹೆಸರನ್ನು ಅವರ ಅಡ್ಡ ಹೆಸರಿಗೆ ಬದಲಿಸಿ ಕೊಟ್ಟರು ಅಂದರೆ ಹಾಜರಿಯಲ್ಲಿ ಅವರ ಹೆಸರು ಭೀಮರಾವ್ ರಾಮಜಿ ಅಂಬೆವಾಡ್ಕರ್ ಎಂದು ಇದ್ದು, ಶಿಕ್ಷಕರು ಅದನ್ನು ಭೀಮರಾವ್ ರಾಮಜಿ ಅಂಬೇಡ್ಕರ್ ಎಂದು ತಿದ್ದಿದರು ಅಂದಿನಿಂದ ಭೀಮರಾವ್ ಅಂಬೇಡ್ಕರ್ ಆದರು.
- ಪ್ರಾಥಮಿಕ ಶಿಕ್ಷಣ ಹಲವಾರು ನೋವು ಮತ್ತು ಅವಮಾನಗಳಿಂದ ಸಾತಾರದಲ್ಲಿ ಮುಗಿಸಿ, ಮಾಧ್ಯಮಿಕ ಶಿಕ್ಷಣಕ್ಕಾಗಿ ಬಾಂಬೆಯ ಸರಕಾರಿ ಪ್ರೌಢ ಶಾಲೆಯಾದ ಎಲಿಫಿನ್ ಸ್ಟನ್ ಹೈಸ್ಕೂಲಿಗೆ ಸೇರಲು ನಿರ್ಧರಿಸುತ್ತಾರೆ. ಸಾತರದಂತೆ, ಇವರಿಗೆ ಹೆಚ್ಚು ಶೋಷಣೆ ಅನ್ಯಾಯ ಚುಚ್ಚು ಮಾತು ಅಪಮರ್ಯಾದೆ ಇರಕ್ಕಿಲ್ಲ ಎಂಬ ಭಾವನೆಯೊಂದಿಗೆ ಬಾಂಬೆಗೆ ಹೋಗಿ ಕಾರ್ಮಿಕರ ಬಡಾವಣೆ ಪರೇಲ ಎಂಬಲ್ಲಿ ಒಂದು ಕೋಣೆಯನ್ನು ಬಾಡಿಗೆಗೆ ಹಿಡಿದು ಶಾಲೆಗೆ ಸೇರಿಸುತ್ತಾರೆ.
- ಆದರೆ ಶಾಲೆಗೆ ಸೇರುವ ಸಂಧರ್ಭದಲ್ಲಿಯೇ ಇವರಿಗೆ ಅಸ್ಪೃಶ್ಯತೆಯ ಅನುಭವವಾಗುತ್ತದೆ. ಶಾಲೆಯಲ್ಲಿ ಮೊದಲನೆಯ ಭಾಷೆ ಮರಾಠಿಯಾಗಿಯೂ,ಎರಡನೆಯ ಭಾಷೆ ಸಂಸ್ಕೃತ ಕಲಿಯಲು ಇಚ್ಛಿಸುತ್ತಾರೆ. ಆದರೆ ಸಂಸ್ಕೃತ ಶಿಕ್ಷಕರು ಇವರಿಗೆ ಸಂಸ್ಕೃತ ಕಲಿಸಲು ನಿರಾಕರಿಸುತ್ತಾರೆ.ಅದಕ್ಕಾಗಿಯೇ ಅನಿವಾರ್ಯವಾಗಿ ಪಾರ್ಸಿ ಭಾಷೆಯನ್ನು ಕಲಿಸಲು ನಿರ್ಧರಿಸುತ್ತಾರೆ.
- ಒಂಬತ್ತನೆಯ ತರಗತಿಯಲ್ಲಿಯೂ ಇವರಿಗೆ ಅಸ್ಪೃಶ್ಯತೆಯು ಸಿಗುತ್ತದೆ. ಶಿಕ್ಷಕರು ಬೋರ್ಡ್ ಮೇಲೆ ಹಾಕಲಾಗಿದ್ದ ಬೀಜಗಣಿತದ ಲೆಕ್ಕ ಶಾಲೆಯ ಯಾವ ವಿದ್ಯಾರ್ಥಿ ಕೂಡ ಬಿಡಿಸದಿದ್ದಾಗ ಭೀಮರಾವ್ ರು ಬಿಡಿಸಲು ಬರುತ್ತಾರೆ. ಶಾಲೆಯ ಶಿಕ್ಷಕರು ಅನುಮತಿ ನೀಡುತ್ತಾರೆ. ಆದರೆ ವಿದ್ಯಾರ್ಥಿಗಳು ತಮ್ಮ ಊಟದ ಬುತ್ತಿ ಬೋರ್ಡಿನ ಹಿಂದುಗಡೆ ಇಟ್ಟಿರುವುದರಿಂದ ಮಹಾರ ವಿದ್ಯಾರ್ಥಿ ಬೋರ್ಡ್ ಮುಟ್ಟಿದರೆ ಬುತ್ತಿ ಅಸ್ಪೃಶ್ಯವಾಗುತ್ತದೆ ಎಂದು ನಿರಾಕರಿಸಿದರು.
- ಇಂತಹ ಕಹಿ ಅನುಭವಗಳ ಮಧ್ಯೆಯೇ ಡಾ. ಅಂಬೇಡ್ಕರ್ 1907ರಲ್ಲಿ 10ನೆ ತರಗತಿಯಲ್ಲಿ ಪಾಸಾಗುತ್ತಾರೆ. ಒಟ್ಟು 750 ಅಂಕಗಳಿಗೆ 282 ಅಂಕ ಪಡೆದರು. ಅಸ್ಪೃಶ್ಯರಲ್ಲಿಯೇ ಇವರು ಇಷ್ಟು ಅಂಕಗಳನ್ನು ಪಡೆದು ಪಾಸಾದ ಮೊದಲನೇ ವಿದ್ಯಾರ್ಥಿ ಯಾಗುತ್ತಾರೆ. ಅಸ್ಪೃಶ್ಯರ ವರ್ಗದವರು ಈ ಬಾಲಕನಿಗೆ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲು ಆಗಿನ ಸಮಾಜ ಸುಧಾರಕರಾದ ಎಸ್ ಕೆ ಭೋಲೆಯವರು ನಿರ್ಧರಿಸುತ್ತಾರೆ.
- ಸರಕಾರಿ ಶಾಲೆಯ ನಿವೃತ್ತ ಶಿಕ್ಷಕರಾದ ಕೆ ಎ ಕೆಲಸ್ಕರ್ ರವರು ಈ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸುತ್ತಾರೆ. ಕೆ ಎ ಕೆಲಸ್ಕರ್ ರವರು ಅಂಬೇಡ್ಕರ್ ರವರನ್ನು ತುಂಬು ಹೃದಯದಿಂದ ಅಭಿನಂದಿಸಿ, ನೀವು ನಿಮ್ಮ ಸಮಾಜದ ಮತ್ತು ಭಾರತದ ಸುಧಾರಕರಾಗಬೇಕೆಂದು ಹರಸುತ್ತಾರೆ. ಮತ್ತು ಉನ್ನತ ವ್ಯಾಸಂಗಕ್ಕೆ ತಮ್ಮ ಕೈಲಾದ ಸಹಾಯ ಮಾಡುವೆವೆಂದು ಪ್ರೋತ್ಸಾಹಿಸುತ್ತಾರೆ. ತಾವೇ ಬರೆದ ಭಗವಾನ್ ಬುದ್ಧನ ಚರಿತ್ರೆಯ ಪುಸ್ತಕವನ್ನು ಭೀಮರಾವರವರಿಗೆ ಕಾಣಿಕೆ ನೀಡುತ್ತಾರೆ. ಡಾ. ಅಂಬೇಡ್ಕರ್ ರವರು ಬೌದ್ಧ ಧರ್ಮಕ್ಕೆ ಒಲಿಯಲು ಈ ಪುಸ್ತಕವೇ ಪ್ರೋತ್ಸಾಹ ಕೊಡುತ್ತದೆ.
- ಅಂಬೇಡ್ಕರ್ ಅವರು 10 ನೇ ತರಗತಿ ಪಾಸಾದ ನಂತರ ಇವರ ಮನೆಯವರು ಡಾಪೋಲಿಯ ಬಿಕ್ಕು ವಾಲಂಗಕರ್‌ರವ ಎರಡನೆಯ ಪುತ್ರಿ ರಮಾಬಾಯಿಯವರೊಂದಿಗೆ ಮದುವೆ ಮಾಡುತ್ತಾರೆ. ಆಗ ಅವರಿಗೆ 17 ವರ್ಷ ರಮಾಬಾಯಿಯವರಿಗೆ 9 ವರ್ಷ ವಯಸ್ಸಾಗಿತ್ತು.
- ಮುಂದಿನ ಅಭ್ಯಾಸಕ್ಕಾಗಿ ಎಲಿಫಿನ್ ಸ್ಟನ್ ಸೇರಿದ ಅಂಬೇಡ್ಕರ್ 1912 ರಲ್ಲಿ ಎಲಿಫಿನಸ್ಟನ್ ಕಾಲೇಜಿನಿಂದ ಬಿಎ ಮುಗಿಸುತ್ತಾರೆ. ಇವರಿಗೆ ಕೆ.ಎ ಕೆಲಸ್ಕರ್‌ರವರು ಪಿಯುಸಿ ಮತ್ತು ಬಿ ಎ ವ್ಯಾಸಂಗಕ್ಕಾಗಿ ಬರೊಡದ ಮಹಾರಾಜರಿಂದ ತಿಂಗಳಿಗೆ 25 ರೂಪಾಯಿಗಳ ಶಿಕ್ಷಣ ವೇತನವನ್ನು ಕೊಡಿಸುತ್ತಾರೆ.

- ಬಿ ಎ ಓದುವಾಗ ಪ್ರೊ ಮುಲ್ಲರ್ ಎಂಬುವರು ಹೆಚ್ಚು ಪ್ರೋತ್ಸಾಹವನ್ನು ಕೊಟ್ಟಿರುತ್ತಾರೆ. ಅದಕ್ಕಾಗಿ ಡಾ. ಅಂಬೇಡ್ಕರ್ ರವರಿಗೆ ಇವರು ಆದರ್ಶರಾಗಿರುತ್ತಾರೆ. ಮೊದಲೇ ಸಯ್ಯಾಜಿರಾವ್ ಗಾಯಕವಾಡರೊಂದಿಗೆ ಮಾಡಿಕೊಂಡ ಒಪ್ಪಂದಂತೆ ಬಿ ಎ ಮುಗಿದ ನಂತರ ಬರೋಡಾದ ಮಹಾರಾಜರ ಆಸ್ಥಾನದಲ್ಲಿ ಮಿಲಿಟರಿ ಲೆಫ್ಟಿನೆಂಟ್ ಆಗಿ ನೇಮಕವಾಗುತ್ತಾರೆ.ಆದರೆ ಅವರು ಅಲ್ಲಿ ಹೆಚ್ಚು ಕಾಲ ಕೆಲಸ ಮಾಡಲಿಲ್ಲ.
- ಕೇವಲ 15 ದಿನಗಳ ಕೆಲಸ ಮಾಡಿದರು,ತಂದೆ ಅನಾರೋಗ್ಯದಿಂದಿದ್ದಾರೆ ಎಂಬ ಟೆಲಿಗ್ರಾಮ್ ಬಂದಾಗ ಅವರು ಬರೋಡಾದಿಂದ ಬಾಂಬೆಗೆ ಬರುತ್ತಾರೆ.ತಂದೆ ಅಂತಿಮ ಕ್ಷಣ ಎಣಿಸುತ್ತಿದ್ದರು. ಬಂದ ಮಗನ ಮೈ ಮೇಲೆ ಕೈ ಎಳೆದು ಏನೋ ಹೇಳಲು ತಡವರಿಸಿ ಏನೂ ಹೇಳಲಾಗದೆ, ಫೆಬ್ರವರಿ 2 1913ಕ್ಕೆ ಪ್ರಾಣಬಿಟ್ಟರು. ತಂದೆ ಅಂತ್ಯಕ್ರಿಯೆಗಳನ್ನು ಮುಗಿಸಿದ ಡಾ. ಅಂಬೇಡ್ಕರರು ಮುಂದೆ ಏನು ಎಂಬ ಪ್ರಶ್ನೆಹಾಕಿಕೊಂಡು ಉನ್ನತ ವ್ಯಾಸಂಗ ಮಾಡಲು ನಿರ್ಧರಿಸುತ್ತಾರೆ.
- ಇದೇ ಸಂಧರ್ಭದಲ್ಲಿ ಬರೋಡಾದ ಮಹಾರಾಜರು ಯೋಗ್ಯ ವಿದ್ಯಾರ್ಥಿಗಳಿಗೆ ಅಮೇರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯಗಳಲ್ಲಿ ಓದಲು ಶಿಷ್ಯವೇತನ ಘೋಷಣೆ ಮಾಡುತ್ತಾರೆ. ಶಿಕ್ಷಕರಾದ ಕೆ. ಎ ಕೆಲಸ್ಕರ್ ರವರ ಜೊತೆಗೆ ಬರೋಡದ ಮಹಾರಾಜರಲ್ಲಿ ಬಂದು ಅಮೇರಿಕಾದಲ್ಲಿ ಉನ್ನತ ವ್ಯಾಸಂಗಕ್ಕಾಗಿ ಶಿಷ್ಯವೇತನ ಪಡೆದು ಅಮೇರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯದಲ್ಲಿ ಓದಲು 1913ಕ್ಕೆ ಹೋಗುತ್ತಾರೆ.
- ಅಲ್ಲಿ ಅರ್ಥಶಾಸ್ತ್ರ,ಸಮಾಜಶಾಸ್ತ್ರ,ಅತಿಹಾಸ,ತತ್ವಜ್ಞಾನ,ತರ್ಕಶಾಸ್ತ್ರ, ರಾಜ್ಯಶಾಸ್ತ್ರದಲ್ಲಿ ಅಧ್ಯಯನ ಮಾಡುತ್ತಾರೆ. 1915ರಲ್ಲಿ ಪ್ರಾಚೀನ ಭಾರತದ ವಾಣಿಜ್ಯ ಪ್ರಬಂದ ಮಂಡಿಸಿ ಎಂ ಎ ಪದವಿ ಪಡೆದರು. ಅದೇ ವರ್ಷ ಅಂತಾರಾಷ್ಟ್ರೀಯ ಸಮಾಜ ಶಾಸ್ತ್ರೀಯ ವಿಚಾರ ಸಂಕಿರಣದಲ್ಲಿ ಭಾರತೀಯ ಜಾತಿಗಳು ಎಂಬ ಪ್ರಬಂಧ ಮಂಡಿಸುತ್ತಾರೆ.
- 1916ರಲ್ಲಿ ಭಾರತದಲ್ಲಿ ರಾಷ್ಟ್ರೀಯ ಉತ್ಪನ್ನ ಎಂಬ ಪ್ರಬಂಧ ಮಾಫಿಸಿ ಅದೇ ವಿಶ್ವವಿದ್ಯಾಲಯದಿಂದ ಪಿಎಚ್ ಡಿ ಪದವಿಯನ್ನು ಪಡೆದರು. 8 ವರ್ಷದ ನಂತರ ಇಂಗ್ಲೆಂಡಿನ ಪ್ರಕಾಶನ ಸಂಸ್ಥೆ ಎಸ್ ಪಿ ಅಂಡ್ ಸನ್ಸ್, ಭಾರತದಲ್ಲಿ ರಾಷ್ಟ್ರೀಯ ಹಣ ಕಾಸಿನ ವಿಕಾಸ ಎಂಬ ಶೀರ್ಷಿಕೆಯಲ್ಲಿ ಪುಸ್ತಕವೊಂದು ಪ್ರಕಟಿಸಿತು. ಅಮೇರಿಕಾದಲ್ಲಿ ಇವರ ಮೇಲೆ ಪ್ರಭಾವ ಬೀರಿದ ಶಿಕ್ಷಕರೆಂದರೆ ಎಡ್ವಿನ್ ಕ್ಯಾನಾನ್, ಆರ್ ಎ ಸಲಿಗಮ್,ಜಾನ್ ಡಿವೆ.
- ಅಮೇರಿಕಾದಲ್ಲಿ ಎಂ ಎ,ಪಿಎಚ್ ಡಿ,ಪಡೆದ ನಂತರ ಉನ್ನತ ವ್ಯಾಸಂಗ ಇಂಗ್ಲೆಂಡಿನಲ್ಲಿ ಮುಂದುವರೆಸಲು ಅಂಬೇಡ್ಕರರು ಅಮೇರಿಕಾದಿಂದ ಇಂಗ್ಲೆಂಡಿಗೆ ಹೋಗುತ್ತಾರೆ. ಅಲ್ಲಿ ಲಂಡನ್ನಿನ ಅರ್ಥಶಾಸ್ತ್ರ ರಾಜಕೀಯಶಸ್ತ್ರ ವಿಶ್ವವಿದ್ಯಾಲಯದಲ್ಲಿ ಡಿ ಎಸ್ ಸಿ ಪದವಿಗಾಗಿ ನೋಂದಾಯಿಸಿಕೊಳ್ಳುತ್ತಾರೆ, ಅಲ್ಲದೆ ಗ್ರೇಸ್ ಇನ್ ಕಾಲೇಜಿನಲ್ಲಿ ಕಾನೂನು ಪದವಿಗೆ ಹೆಚ್ಚುವರಿಯಾಗಿ ಸೇರುತ್ತಾರೆ.
- ಆದರೆ 1916ರ ಹೊತ್ತಿಗೆ ಸಯ್ಯಾಜಿರಾವ್ ಗಾಯಕವಾಡ ರ ಶಿಷ್ಯವೇತನ ಅವಧಿ ಮುಗಿದಿದೆ ಹಿಂದಕ್ಕೆ ಮರಳಿ ಬರಲು ಹೇಳಿದಾಗ ಅಂಬೇಡ್ಕರ್ ರವರಿಗೆ ತೀರ ನೋವಾಗುತ್ತದೆ. ಆದರೂ ಅನಿವಾರ್ಯವಾಗಿ ತಮ್ಮ ವ್ಯಾಸಂಗ ಅರ್ಧಕ್ಕೆ ನಿಲ್ಲಿಸಿ ಬರುತ್ತಾರೆ ಬರುವಾಗ ಅಂಬೇಡ್ಕರರು ತಮ್ಮ ಗುರುಗಳಿಗೆ ವಿನಂತಿಸಿ ತಮ್ಮ ಅಡ್ಮಿಷನ್ ರದ್ದು ಮಾಡದಂತೆ ಕೋರಿ ನಾಲ್ಕು ವರ್ಶದ ನಂತರ ಮರಳಿ ಬರುವುದಾಗಿ ಕೋರಿರುತ್ತಾರೆ.
- ಪೂರ್ವ ನಿರ್ಧರಿತ ಒಪ್ಪಂದದಂತೆ,ಡಾ ಅಂಬೇಡ್ಕರ್ ರು ಬರೊಡದ ಮಹಾರಾಜರ ಆಸ್ಥಾನದಲ್ಲಿ ಸೈನ್ಯದ ಕಾರ್ಯದರ್ಶಿಗಳಾಗಿ ಕೆಲಸಕ್ಕೆ ಸೇರಿದರು. ಮಹಾರಾಜರಿಗೆ ತಿಳಿಯದಂತೆ ಅಲ್ಲಿಯೇ ಆಸ್ಥಾನಿಕ ಹಿರಿಯ ಮಂತ್ರಿಗಳು ಇವರೊಂದಿಗೆ ಅಸ್ಪೃಶ್ಯ ಆಚರಣೆ ಮಾಡುತ್ತಿದ್ದರು.ಸಮಾನ್ಯ ಸಿಪಾಯಿ ಕೂಡ ಇವರ ಫೈಲುಗಳನ್ನು ಮುಟ್ಟಿಸಿಕೊಳ್ಳುತ್ತಿರಲಿಲ್ಲ, ಉಳಿಯಲು ಆಸ್ಥಾನದಲ್ಲಿ ನಿವೇಶನ ನೀಡಲಿಲ್ಲ ಮತ್ತು ಉಳಿದಿದ್ದ ಪಾರ್ಸಿ ಹೊಟೇಲ್ ನಿಂದ ಇವರನ್ನು ದಬ್ಬಿ ಹೊರಹಾಕಿದರು.

- ಅನಿವಾರ್ಯವಾಗಿ ಅಲ್ಲಿ ಕೆಲಸ ಮಾಡಲಾಗದೆ ಬಾಂಬೆಗೆ ಬಂದರು. ಬಂದು ಕೆಲವು ದಿನಗಳಲ್ಲಿ ಅವರ ಮಲತಾಯಿ ಮರಣಹೊಂದುತ್ತಾರೆ. ಅಂಬೇಡ್ಕರರು ಸಿಡ್ಯಾಮ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆಗೆ ಸೇರುತ್ತಾರೆ. ಈ ಸರಕಾರಿ ಕಾಲೇಜಿನಲ್ಲಿಯೂ ಕೂಡ ಇವರ ಜೊತೆಗೆ ಅಸ್ಪೃಶ್ಯರ ಆಚರಣೆ ಮಾಡುತ್ತಾರೆ.
- ಇವರ ಸಹಪಾಠಿಗಳು, ಪಾಠಮಾಡಿ ಉಪನ್ಯಾಸಕರಿಗಾಗಿ ಕುಡಿಯಲು ಇಟ್ಟ ನೀರಿನ ಪಾತ್ರೆಯಿಂದ ಅಂಬೇಡ್ಕರರು ನೀರನ್ನು ಕುಡಿದಾಗ ಗುಜರಾತ್ ನ ಉಪನ್ಯಾಸಕರೊಬ್ಬರು ಆಕ್ಷೇಪಿಸುತ್ತಾರೆ. ಮುಂದೆ 1920ರಲ್ಲಿ ಮುಖನಾಯಕ ಎಂಬ ಪತ್ರಿಕೆಯನ್ನು ಪ್ರಕಟಿಸಿದರು. ಈ ಅವಧಿಯಲ್ಲಿ ಅಂಬೇಡ್ಕರ್ ರವರಿಗೆ ಕೊಲ್ಲಾಪುರದ ಸಾಹೋ ಮಹಾರಾಜರು ಅಂಬೇಡ್ಕರವರ ಉನ್ನತ ವ್ಯಾಸಂಗಕ್ಕೆ ಶಿಷ್ಯವೇತನ ನೀಡಲು ಮುಂದಾಗುತ್ತಾರೆ.
- ಹೇಗೂ ಅಂಬೇಡ್ಕರ್ ರವರು ಕಾಲೇಜಿನಲ್ಲಿ ಉಪನ್ಯಾಸ ಮಾಡಿ ಕೂಡಿಟ್ಟ ಸ್ವಲ್ಪ ಹಣ, ಸಾಹು ಮಹಾರಾಜರಿಂದ ಶಿಷ್ಯವೇತನ ಹಾಗೂ ಆತ್ಮೀಯ ಪಾರ್ಸಿ ಗೆಳೆಯ ನವಲಭೆತನಿಂದ ಸ್ವಲ್ಪ ಹಣ ಸಾಲ ಪಡೆದು ಅಂಬೇಡ್ಕರರವರು ಉನ್ನತ ವ್ಯಾಸಂಗಕ್ಕೆ ಲಂಡನ್ನಿಗೆ ಹೋದರು. ಅಲ್ಲಿ 1920ರಲ್ಲಿ ಲಂಡನ್ ಸ್ಕೂಲ್ ಆಫ್ ಏಕನಿಮಿಕ್ಸ್ ಅಂಡ್ ಪೊಲಿಟಿಕಲ್ ಸೈನ್ಸ್ ವಿಶ್ವವಿದ್ಯಾಲಯದಲ್ಲಿ ಎಂ ಎಸ್ ಸಿ ಪದವಿಗಾಗಿ ನೊಂದಾಯಿಸಿಕೊಂಡು ಹಗಲು ರಾತ್ರಿ ಅಧ್ಯಯನ ಮಾಡುತ್ತಾರೆ.
- ಸ್ವಲ್ಪ ಹಣವಿರುವುದರಿಂದ ಅತ್ಯಧಿಕ ಕಷ್ಟ ಪಟ್ಟು ಅರ್ಧ ಬ್ರೆಡ್ ಒಂದು ದಿನಕ್ಕೆ ಊಟ ಮಾಡಿ ಲಂಡನ್ನಿನ ಮ್ಯೂಸಿಯಂ ಎಂಬ ಗ್ರಹಾಲಯದಲ್ಲಿ ದಿನದ 18 ಗಂಟೆಗಳ ಕಾಲ ಅದ್ಯಯನ ಮಾಡಿ, 1921 ರಲ್ಲಿ ಪ್ರೊ ಎಡ್ವಿನ್ ಕ್ಯಾನನ ರವರ ಮಾರ್ಗದರ್ಶನದಲ್ಲಿ ಬ್ರಿಟಿಷ ಭಾರತದಲ್ಲಿ ಸಾಮ್ರಾಜ್ಯಶಾಹಿಯ ಹಣಕಾಸಿನ ಪ್ರಾಂತೀಯ ವಿಕೇಂದ್ರೀಕರಣ. ಎಂಬ ಪ್ರಬಂಧ ಮಂಡಿಸಿ, ಎಂ ಎಸ್ ಸಿ ಪದವಿಪಡೆಯುತ್ತಾರೆ.
- ಇವರು ಇದೇ ರೀತಿ ವಿದ್ಯಾರ್ಜನೆ ಮಾಡಿ 1921ರಲ್ಲಿ ಡಿ.ಎಸ್ ಸಿ ಪದವಿಗಾಗಿ ನೊಂದಾಯಿಸಿಕೊಂಡು 1922 ರಲ್ಲಿ ಹಣದ ಸಮಸ್ಯೆ ಎಂಬ ಪ್ರಬಂಧ ಮಂಡಿಸಿ ಡಿ ಎಸ್ ಸಿ ಪದವಿ ಪಡೆಯುತ್ತಾರೆ. ಅದೇ ವರ್ಷ ಗ್ರೇಸ್ ಇನ್ ಕಾಲೇಜಿನಿಂದ ಎಲ್ ಎಲ್ ಡಿ ಪಡೆಯುತ್ತಾರೆ. 1923 ರಲ್ಲಿ ಜರ್ಮನಿಯ ಬಾನ್ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದಲ್ಲಿ ಉನ್ನತ ಪದವಿಗಾಗಿ ನೊಂದಾಯಿಸಿಕೊಂಡು 6 ತಿಂಗಳವರೆಗೆ ಅಭ್ಯಾಸ ಮಾಡುತ್ತಾರೆ.
- ಆರ್ಥಿಕ ಕಡುಬಡತನದಿಂದ ವ್ಯಾಸಂಗವನ್ನು ಮಧ್ಯದಲ್ಲಿಯೇ ನಿಲ್ಲಿಸಿ ಭಾರತಕ್ಕೆ ಬಂದು ವಕೀಲ ವೃತ್ತಿಯನ್ನು ಪ್ರಾರಂಭಿಸುತ್ತಾರೆ. ಕೆಲವು ದಿನಗಳ ಕಾಲ ಟ್ಯಾಕ್ಸ್ ಪ್ರ್ಯಾಕ್ಟಿಶನರ್ ಆಗಿಯೂ ಕೆಲಸ ಮಾಡುತ್ತಾರೆ. ಸಾಮಾಜಿಕ ಸೇವೆಯಲ್ಲಿ ಕಾಲಜಿಯುಳ್ಳ ಇವರು ಸಾಮಾಜಿಕ ಸೇವೆಗಾಗಿ ತಮ್ಮ ಬದುಕನ್ನು ಗುರುತಿಸಿಕೊಳ್ಳುತ್ತಾರೆ.
- ದಲಿತ ವರ್ಗದವರನ್ನು ಜಾಗೃತರನ್ನಾಗಿ ಮಾಡಲು ಅವರಲ್ಲಿ ಶಿಕ್ಷಣದ ಪ್ರಸಾರ ಮಾಡಲು ಸಂಸ್ಕೃತಿಯ ಬಗ್ಗೆ ತಿಳಿಸಲು ಆರ್ಥಿಕ ಸೌಕರ್ಯ ಮಾಡಲು ಹಾಗೂ ಅವರ ಸಮಸ್ಯೆಗಳಿಗೆ ಸ್ಪಂದಿಸುವುದು ಇವರ ಉದ್ದೇಶವಾಗಿತ್ತು. ಅದೇ ರೀತಿ ಬಹಿಷ್ಕೃತ ಭಾರತ ಎಂಬ ಪತ್ರಿಕೆಯನ್ನು ಪ್ರಾರಂಭಿಸುತ್ತಾರೆ. ಸಾಮಾಜಿಕ ಹೋರಾಟದ ಜೀವನ ಪ್ರಾರಂಭಿಸಿದ ಇವರು 1927ರಲ್ಲಿ ಮಹಾಡದ ಚೌಡರ ಕೆರೆಯ ನೀರನ್ನು ಮುಟ್ಟುವ ಚಳುವಳಿಯನ್ನು ಹಮ್ಮಿಕೊಳ್ಳುತ್ತಾರೆ.
- ತನ್ನ 10 ಸಾವಿರ ಅನುಯಾಯಿಗಳೊಂದಿಗೆ ಚೌಡರ ಕೆರೆಯ ನೀರನ್ನು ಮುಟ್ಟಿಸಿ ಬಹುದಿನಗಳಿಂದ ನಿಷೇಧಿಸಿದ ಈ ಕೆರೆಯಿಂದ ನೀರು ಕುಡಿಯುವ ಹಕ್ಕು ಒತ್ತಾಯಿಸಿದರು. 1927 ರಲ್ಲಿ ಶ್ರೇಣಿ ಪದ್ದತಿಯ ವರ್ಣಾಶ್ರಮ ಹಾಗೂ ಸ್ತ್ರಿದಮನ ಮಸ್ಥಿದ ಮನಸ್ಮೃತಿಯನ್ನು ಸುತ್ತು ಹಾಕುತ್ತಾರೆ. 1930 ತನ್ನ 15 ಸಾವಿರ ಅನುಯಾಯಿಗಳೊಂದಿಗೆ ನಾಸಿಕದ ಕಾಳರಾಂ ದೇವಾಲಯದ ಪ್ರವೇಶ ಚಳುವಳಿಯನ್ನು ಮಾಡುತ್ತಾರೆ.
- 1927ರಲ್ಲಿ ಇವರಿಗೆ ಮುಂಬಯಿಯ ಶಾಸಕಾಂಗದ ಸದಸ್ಯರಾಗಿ ಬ್ರಿಟಿಷ್ ಸರ್ಕಾರ ನೇಮಿಸುತ್ತದೆ. 1930 ರಿಂದ 1932 ವರೆಗೆ ಲಂಡನ್ನಿನಲ್ಲಿ ನಡೆಯುವ ದುಂಡು ಮೇಜಿನ ಸಮ್ಮೇಳನದಲ್ಲಿ ದಲಿತರ ಪ್ರತಿನಿಧಿಯಾಗಿ ಭಾಗವಹಿಸಿ ದಲಿತರಿಗೆ




**ಸಮೃದ್ಧಿ ಸುಜ್ಞಾನ**
'ಕಠಿಣ ಪರಿಶ್ರಮ ಎಂದಿಗೂ ಆಯಾಸವನ್ನು ಉಂಟು ಮಾಡುವುದಿಲ್ಲ, ತೃಪ್ತಿಯನ್ನು ಕೊಡುತ್ತದೆ!

ಪ್ರತ್ಯೇಕ ಮತದಾನದ ಸೌಲಭ್ಯ ಕಲ್ಪಿಸಿಕೊಟ್ಟು ಬಹುದಿನಗಳಿಂದ ಆಳ್ವಿಕೆ ಮಾಫಿಯಾ ಅಧಿಕಾರದಿಂದ ದೂರವಿದ್ದ ದಲಿತರಿಗೆ ಆಳ್ವಿಕೆ ಮಾಡುವ ಅಧಿಕಾರವನ್ನು ದೊರಕಿಸಿಕೊಡುತ್ತಾರೆ.

- ಇಂಗ್ಲೆಂಡಿನ ಪ್ರಧಾನಿಯಾದ ಮ್ಯಾಕ್ ಡೊನಾಲ್ಡ್ ಕೋಮುಆದೇಶದ ಮೂಲಕ ಈ ಅಧಿಕಾರವನ್ನು ದಲಿತರಿಗೆ ನೀಡುತ್ತಾರೆ. ಆದ್ರೆ ಗಾಂಧೀಜಿ ದಲಿತರಿಗೆ ಪ್ರತ್ಯೇಕ ಮತದಾನ ಬೇಡ ಹಿಂದೂ ಧರ್ಮ ಒಡೆದು ಹೋಗುತ್ತದೆಂದು ಪುಣೆಯ ಯರವಾಡ ಜೈಲಿನಲ್ಲಿ ಅಮರಣಾಂತರ ಉಪವಾಸ ಸತ್ಯಾಗ್ರಹ ಮಾಡುತ್ತಾರೆ. ಅಂತಿಮವಾಗಿ ಗಾಂದೀಜಿ ಮತ್ತು ಅಂಬೇಡ್ಕರ್ ರವರ ನಡುವೆ ಸಂಧಾನ ನಡೆಸಿ ಪ್ರತ್ಯೇಕ ಮತ ಕ್ಷೇತ್ರದ 71 ಸೀಟುಗಳ ಬದಲ್ಲಾಗಿ 148 ಸೀಟು ಗಳ ಜಂಟಿ ಮತದಾನ ಪದ್ದತಿ ನೀಡಿ ದಲಿತರಿಗೆ ಮೀಸಲಾತಿ ನೀಡಲಾಯಿತು. ಇದು ಸೆಪ್ಟೆಂಬರ್ 24 1932 ರಲ್ಲಿ ನಡೆದಿದ್ದು ಇದನ್ನು ಪುನಾ ಒಪ್ಪಂದ ಎಂದು ಕರೆಯಲಾಯಿತು.
- ಡಾ ಅಂಬೇಡ್ಕರ ರವರು ಅಸ್ಪೃಶ್ಯರಿಗಾಗಿ ಮತ್ತು ಅವರ ಸಾಮಾಜಿಕ ಆರ್ಥಿಕ ಪ್ರಗತಿಗಾಗಿ ನಿರಂತರವಾದ ಹೋರಾಟ ಬ್ರಿಟಿಷ್ ಮತ್ತು ವರ್ಣವ್ಯವಸ್ಥೆಯ ವಿರುದ್ಧ ನಡೆಸಿದರು. 1935ರಲ್ಲಿ ಯೌಲ್ಲ ಸಮ್ಮೇಳನದಲ್ಲಿ ಅಂಬೇಡ್ಕರರವರು ತಾನು ಹಿಂದೂ ಧರ್ಮದಲ್ಲಿ ಇರುವುದಿಲ್ಲ, ನಾನು ಹಿಂದುವಾಗಿ ಹುಟ್ಟಿದ್ದು ಅನಿಶ್ಚಿತವಾಗಿ ಆದರೆ ಹಿಂದುವಾಗಿ ಸಾಯುವುದಿಲ್ಲ ಎಂದು ಪ್ರತಿಜ್ಞೆ ಮಾಡುತ್ತಾರೆ.
- ಅದೇ ವರ್ಷ 1935 ರಲ್ಲಿ ಅವರ ಪತ್ನಿ ರಮ್ಮ ಬಾಯಿಯವರು ತೀರಿಕೊಳ್ಳುತ್ತಾರೆ. ಡಾ ಅಂಬೇಡ್ಕರ್ ರವರಿಗೆ ಒಟ್ಟು 5 ಮಕ್ಕಳು ಹುಟ್ಟಿದ್ದು ಯಶ್ವಂತರಾವ್ ಅಂಬೇಡ್ಕರರನ್ನು ಬಿಟ್ಟರೆ ಉಳಿದವರೆಲ್ಲ ತೀರಿಕೊಳ್ಳುತ್ತಾರೆ. ಅಸ್ಪೃಶ್ಯರಿಗೆ ಅಧಿಕಾರ ಪಡೆದು 1936ರಲ್ಲಿ ಇಂಡಿಪೆಂಡೆಂಟ್ ಲೇಬರ್ ಪಾರ್ಟಿ ಸ್ಥಾಪಿಸಿ, ಪ್ರಾಂತೀಯ ಶಾಸಕಾಂಗದಲ್ಲಿ ನಡೆದ ಚುನಾವಣೆಯಲ್ಲಿ 17 ಸ್ಥಾನಗಳಿಗೆ ಅಭ್ಯರ್ಥಿಗಳನ್ನು ಹಾಕುತ್ತಾರೆ.
- ಅದರಲ್ಲಿ 15 ಅಭ್ಯರ್ಥಿಗಳು ಗೆಲ್ಲುತ್ತಾರೆ. ದಲಿತರಿಗೆ ಶಿಕ್ಷಣದ ಅವಶ್ಯಕತೆಯನ್ನು ಗಮನಿಸಿ 1946ರಲ್ಲಿ ಪೀಪಲ್ಸ್ ಎಜುಕೇಶನ್ ಇನ್ಸ್ಟಿಟ್ಯೂಶನ್ ಸ್ಥಾಪಿಸಿದರು. 1946ರಲ್ಲಿ ಸಂವಿಧಾನ ರಚನಾ ಸಭೆಗೆ ಬಂಗಾಳ ಪ್ರಾಂತದಿಂದ ಆಯ್ಕೆಯಾಗಿ ಮುಂದೆ 1947ರಲ್ಲಿ ಕರಡು ಸಮಿತಿ ಅಧ್ಯಕ್ಷರಾಗಿ ನೇಮಕ ಹೊಂದಿ, ಸತತವಾಗಿ ಮೂರು ವರ್ಷಗಳವರೆಗೆ ಹಗಲು ರಾತ್ರಿ ಸಂವಿಧಾನ ಬರೆದು 1950ರಲ್ಲಿ ಮುಗಿಸುತ್ತಾರೆ. ಅದಕ್ಕಾಗಿ ಇವರನ್ನು ಸಂವಿಧಾನದ ಶಿಲ್ಪಿ ಎಂದು ಪರಿಗಣಿಸಲಾಗಿದೆ.
- 1947 ರಲ್ಲಿ ಕಾನೂನು ಮಂತ್ರಿಯಾಗಿ ಪಂಡಿತ ಜವಹಾರಲಾಲ್ ನೆಹರೂ ಮಂತ್ರಿ ಮಂಡಲದಲ್ಲಿ ಇವರು ಪ್ರಧಾನ್ ಮಂತ್ರಿಗೆ ಆತ್ಮೀಯರಾಗುತ್ತಾರೆ. ನೆಹರೂ ಕಲ್ಪಿಸಿದ ಸಮಾಜವಾದಿ ಪ್ರಜಾಸತ್ತಾತ್ಮಕ ರಾಜ್ಯವ್ಯವಸ್ಥೆ ಡಾ ಅಂಬೇಡ್ಕರ್ ರವರಿಂದಲೇ ಪ್ರಭಾವಿತರಾಗಿದ್ದರು. ನೆಹರುಜಿ ಹಾಕಿಕೊಂಡ ಪಂಚ ವಾರ್ಷಿಕ ಯೋಜನೆಗೆ ಅಂಬೇಡ್ಕರರವರು ಮಾರ್ಗದರ್ಶಿಗಳಾಗಿದ್ದರು. ಮತ್ತು ಭಾಕ್ರಾನಂಗಲ್ ಅಣೆಕಟ್ಟು ಕಟ್ಟಲು ಸಲಹೆ ನೀಡಿದವರೆ ಅಂಬೇಡ್ಕರರವರು.
- ಅಂಬೇಡ್ಕರವರು ಭಾರತದ ನೀರಾವರಿ ಯೋಜನೆಯ ಜನಕನಾಗಿದ್ದು.ಉತ್ತರ ಭಾರತ ಮತ್ತು ದಕ್ಷಿಣ ಭಾರತ ನದಿಗಳ ಜೋಡಣೆಗೆ 1952 ರಲ್ಲಿ ಸಲಹೆ ನೀಡಿದರು.ನೆಹರೂರವರು ವಿದೇಶಿ ಗಣ್ಯರಿಗೆ ಇವರನ್ನು ಪರಿಚಯಿಸುವಾಗ ಇವರು ಡಾ ಅಂಬೇಡ್ಕರ್, ನನ್ನ ಮಂತ್ರಿ ಮಂಡಲದ ವಜ್ರವಾಗಿದ್ದಾರೆ,ಎಂದು ಪರಿಚಯಿಸುತ್ತಿದ್ದರು.
- ನೆಹರು ರವರ ಸಹಕಾರ ಪಡೆದು ಅಂಬೇಡ್ಕರ್ ದೇಶದ ಮಹಿಳಾ ವಿಮೋಚನೆಯನ್ನು ಮನು ರವಾರ ಮನಸ್ಮೃತಿಯ ಮೂಲಕ ಶೋಷಿತ ಮಹಿಳೆಗೆ ಬಿಡುಗಡೆ ಗೊಳಿಸಲು ದ ಹಿಂದೂ ಕೋಡ್ ಬಿಲ್ ನ್ನು ರಚನೆ ಮಾಡಿ ಪಾರ್ಲಿಮೆಂಟಿನಲ್ಲಿ ಮಂಡಿಸಿದ್ದರು. ಸಂಪ್ರದಾಯವಾದಿಗಳಿಂದ ಕೂಡಿದ ಪಾರ್ಲಿಮೆಂಟ್ ನ ಸಭೆಯಲ್ಲಿ ಮಹಿಳೆಗೆ ಹಿಂದೂ ಕೋಡ್ ಬಿಲ್ ನಲ್ಲಿ ಕೇಳಲಾದ ಹಕ್ಕುಗಳನ್ನು ನಿರಾಕರಿಸಿತು.

- ಹಿಂದೂ ಕೋಡ್ ಬಿಲ್ ನಲ್ಲಿ ಪ್ರಮುಖ ನಾಲ್ಕು ಅಂಶಗಳು ಇದ್ದವು 1. ಮಹಿಳೆಯು ಕೂಡ ತನ್ನ ಪತಿಯನ್ನು ಆಯ್ಕೆಮಾಡುವ ಹಕ್ಕು 2. ಪುರುಷರ ಹಾಗೆ ವಿಚ್ಛೇಧಿಸುವ ಹಕ್ಕು 3. ತಂದೆಯ ಆಸ್ತಿಯಲ್ಲಿ ಗಂಡುಮಕ್ಕಳ ಸಮನಾಗಿ ಹೆಣ್ಣುಮಗಳಿಗೂ ಆಸ್ತಿ ಹಕ್ಕು 4.ಪಿತ್ರಾರ್ಜಿತ ಆಸ್ತಿಯಲ್ಲಿ ಗಂಡು ಮಕ್ಕಳ ಜೊತೆಯಲ್ಲಿ ಹೆಣ್ಣುಮಕ್ಕಳಿಗೂ ಮತ್ತು ವಿಧವೆ ಸೊಸೆಗೂ ಸಮ ಪಾಲು ಹಕ್ಕು.
- ಕೊನೆಗೆ ಹಿಂದೂ ಕೋಡ್ ಬಿಲ್ ಪಾಸಾಗದ ಕಾರಣ ಅಂಬೇಡ್ಕರ್ ರವರು ಕಾನೂನು ಮ್ಯಾಟ್ರಿ ಪದವಿಗೆ ರಾಜೀನಾಮೆ ನೀಡಿದರು. 1950 ರಲ್ಲಿ ಅಮೆರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯ ಭಾರತ ಸಂವಿಧಾನ ರಚಿಸಿದ್ದಕ್ಕಾಗಿ ಇವರನ್ನು ಸಂವಿಧಾನ ಶಿಲ್ಪಿ,ಆಧುನಿಕ ಭಾರದ ನಿರ್ಮಾಪಕ, ಸಮಾಜದ ಪ್ರವರ್ತಕ, ಎಂದು ಪರಿಗಣಿಸಿ, ಡಾಕ್ಟರ್ ಆಫ್ ಲಾ ಪದವಿ ನೀಡಿತು.
- 1953ರಲ್ಲಿ ಆಂಧ್ರಪ್ರದೇಹದ ಉಸ್ಮಾನಿಯ ವಿಶ್ವವಿದ್ಯಾಲಯ ಸಂವಿಧಾನದ ಸೇವೆಯನ್ನು ಪರಿಗಣಿಸಿ ಡಾಕ್ಟರ್ ಆಫ್ ಲಿಟರೇಚರ ಎಂಬ ಗೌರವ ಪದವಿಯನ್ನು ನೀಡಿತು. 1951ರಿಂದ ರಾಜ್ಯಸಭಾ ಸದಸ್ಯರಾಗಿ ಆಯ್ಕೆಯಾದರು ಸಕ್ರಿಯ ರಾಜಕೀಯದಿಂದ ದೂರ ಉಳಿದು ಡಾ ಅಂಬೇಡ್ಕರ್ ರವರು ಬೌದ್ಧ ಧರ್ಮದ ಆಚಾರ ಮತ್ತು ಪ್ರಚಾರಕ್ಕಾಗಿ ಜೀವನವನ್ನು ಅರ್ಪಿಸಿಕೊಂಡರು.
- 1951 ರಲ್ಲಿ ಜಾಗತಿಕ ಬೌದ್ಧ ಸಮ್ಮೇಳನ ರಂಗುನದಲ್ಲಿ ನಡೆಯಿತು, ಅದರಲ್ಲಿ ಭಾಗವಹಿಸಿದರು. 1954ರಲ್ಲಿ ಕಟ್ಮೊಂಡಾದಲ್ಲಿ ನಡೆದ ಜಾಗತಿಕ ಬೌದ್ಧ ಸಮ್ಮೇಳನದಲ್ಲಿ ಭಾಗವಹಿಸಿದರು. 1951ರಲ್ಲಿ ಭಾರತೀಯ ಬೌದ್ಧ ಸಂಘಟನೆಯಲ್ಲಿ ಬುದ್ಧ ಮತ್ತು ಮಾರ್ಕ್ಸ್ ಕುರಿತು ಪ್ರಬಂಧ ಮಂಡಿಸಿದರು. 1955ರಲ್ಲಿ ಭಾರತೀಯ ಬೌದ್ಧ ಮಹಾಸಭೆ ಸ್ಥಾಪಿಸಿದರು.
- ಬದುಕಿನ ಕೊನೆಯ ದಿನಗಳಲ್ಲಿ ಡಾ ಅಂಬೇಡ್ಕರ್ ರು ಬೌದ್ಧ ಧರ್ಮ ಸ್ವೀಕಾರದ ನಿರ್ಧಾರಮಾಡಿ ಅಕ್ಟೋಬರ್ 14 1956ರಲ್ಲಿ ತನ್ನ 5ಲಕ್ಷ ಅನುಯಾಯಿಗಳೊಂದಿಗೆ ಪತ್ನಿ ಸವಿತಾ ಅಂಬೇಡ್ಕರ್ ಜೊತೆಗೆ ನಾಗ ಜನತೆಯ ಮೂಲ ನಾಡಾದ ನಾಗಪುರದಲ್ಲಿ ಬೌದ್ಧ ಧರ್ಮ ಸ್ವೀಕಾರಮಾಡಿ, ಹಿಂದುವಾಗಿ ಸಾಯಲಾರೆ ಎಂಬ ಪ್ರತಿಜ್ಞೆ ಪೂರ್ಣಗೊಳಿಸಿದರು.
- ಇವರಿಗೆ ಬರ್ಮಾದ ಬೌದ್ಧ ಬಂತೆ, ವೀರ ಚಂದ್ರಮಣಿ ಬೌದ್ಧಧೀಕ್ಷೆ ನೀಡಿದರು. ಮುಂದೆ ಡಿಸೆಂಬರ್6 1956ರಲ್ಲಿ ದೆಹಲಿಯ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು. ಡಿಸೆಂಬರ್7ಕ್ಕೆ ಮುಂಬಯಿಯ ದಾದರಿನಲ್ಲಿ ಬೌದ್ಧ ಧರ್ಮದ ನಿಯಮದ ಪ್ರಕಾರ ಮಹಾಪರಿನಿರ್ವಾಣದ ವಿಧಿಯನ್ನು ಅಂತ್ಯಕ್ರಿಯೆಯಲ್ಲಿ ಮಾಡಲಾಯಿತು. ॐ



ಸಮಾನತೆ, ಸತ್ಯ ಮತ್ತು ಸತ್ಸಂಸ್ಕಾರಗಳ ಮಹತ್ವವನ್ನು ನೆನಪಿಸುವ

# ಶ್ರೀ ಬಸವೇಶ್ವರ ಜಯಂತಿ



ಶ್ರೀ ಬಸವೇಶ್ವರ (ಶ್ರೀ ಬಸವ ಅಥವಾ ಬಸವಣ್ಣನವರು) ಶರಣ ಶರಣೆಯರ ಲಿಂಗಾಯತ ಧರ್ಮದ ಪ್ರತಿಪಾದಕರು. ಬಸವಣ್ಣನವರು 12 ನೇಯ ಶತಮಾನದ ಭಕ್ತಿ ಪಂಥದ ಪ್ರಮುಖರಲ್ಲಿ ಒಬ್ಬರು. ಬಸವಣ್ಣನವರು ಮತ್ತು ಶರಣ ಶರಣೆಯರಾದ ಅಲ್ಲಮಪ್ರಭು, ಅಕ್ಕಮಹಾದೇವಿ, ಚೆನ್ನಬಸವಣ್ಣ ಮೊದಲಾದ ನೂರಾರು ಶರಣ ಶರಣೆಯರು ವಚನಗಳ ಮೂಲಕ ಭಕ್ತಿಪಥ ಮತ್ತು ಜೀವನದ ಬಗ್ಗೆ ಹೊಸ ದೃಷ್ಟಿ ಬೀರಿದರು. ಬಸವಣ್ಣನವರು 1134 ರಲ್ಲಿ ಈಗಿನ ಬಿಜಾಪುರ ಜಿಲ್ಲೆಯಲ್ಲಿರುವ ಬಸವನ ಬಾಗೇವಾಡಿ ಗ್ರಾಮದಲ್ಲಿ (ಬಸವಣ್ಣನವರ ತಾಯಿಯ ತವರು ಮನೆಯಾದ ಇಂಗಳೇಶ್ವರ ಗ್ರಾಮದಲ್ಲಿ ಜನಿಸಿದರು ಎಂಬ ಪ್ರತೀತಿ ಇದೆ.), ಶ್ರೀ ಮಾದರಸ ಮತ್ತು ಮಾದಲಾಂಬಿಕೆ ದಂಪತಿಗಳಿಗೆ ಜನಿಸಿದರು. ಬಸವಣ್ಣ ಚಿಕ್ಕಂದಿನಿಂದಲೂ ವೈದಿಕ ಸಂಸ್ಕೃತಿಯ ಕರ್ಮಾಚರಣೆಗಳ ವಿರೋಧಿಯಾಗಿದ್ದರು. ಅಕ್ಕ ನಾಗಮ್ಮ ಮತ್ತು ಭಾವ ಶಿವಸ್ವಾಮಿಯ ಜೊತೆಯಲ್ಲಿ ಬಾಲ್ಯವನ್ನು ಕಳೆದರು.

ಅವರ 8ನೇ ವಯಸ್ಸಿನಲ್ಲಿ ಬ್ರಾಹ್ಮಣ ಸಂಪ್ರದಾಯದಂತೆ ಬಸವಣ್ಣನವರಿಗೆ ಜನಿವಾರ ಹಾಕಲು ಬಂದಾಗ, ಬಸವಣ್ಣನವರು ತನಗಿಂತ ಹಿರಿಯಳಾದ ಅಕ್ಕ ನಾಗಮ್ಮನಿಗೆ ಕೊಡಲು ಕೇಳುತ್ತಾನೆ, ಆಗ ಇದು ಪುರುಷರಿಗೆ ಮಾತ್ರ ಕೊಡುವಂತಹುದು ಆದ್ದರಿಂದ ಅಕ್ಕನಿಗೆ ಕೊಡಲು ಬರುವುದಿಲ್ಲ ಅಂತ ನುಡಿದಾಗ, ಬಸವಣ್ಣ ಪುರುಷ/ಮಹಿಳೆ ಅಸಮಾನತೆಯನ್ನು ವಿರೋಧಿಸಿ ಮನೆಯಿಂದ ನಿರ್ಗಮಿಸಿ ಕೂಡಲಸಂಗಮಕ್ಕೆ ಹೊರಡುತ್ತಾರೆ.

**ಧಾರ್ಮಿಕ ಬೆಳವಣಿಗೆ**

ಬಸವೇಶ್ವರರು ಹನ್ನೆರಡು ವರ್ಷಗಳ ಕಾಲ ಕೂಡಲ ಸಂಗಮದಲ್ಲಿ ಅಧ್ಯಯನ ಮಾಡುತ್ತಾ ಕಳೆದರು. ಅವರ ದೃಷ್ಟಿಯಲ್ಲಿ ದೇವನು ಒಬ್ಬ ಮತ್ತು ಅವನು ಮಾನವಲ್ಲಿದ್ದಾನೆಯೇ ಹೊರತು ಗುಡಿ-ಗುಂಡಾರಗಳಲ್ಲಿ ಅಲ್ಲ. ಕೆಲಸ ಮಾಡಿ ಜೀವನ ನಡೆಸಬೇಕು, ಆಲಸಿ ಜೀವನ ಸಲ್ಲ, ಸುಳ್ಳು ಹೇಳುವುದು, ವಂಚಿಸುವುದು, ಕೊಲೆ-ಸುಲಿಗೆ ಮಾಡುವುದು, ಪ್ರಾಣಿಬಲಿ ನೀಡುವುದು, ಪರಧನ ಹರಣ, ಪರಸ್ತ್ರೀ ವ್ಯಾಮೋಹ ಹೊಂದುವುದು ಘೋರ ಅಪರಾಧ. ಕೆಲಸದಲ್ಲಿ ಮೇಲು ಅಥವಾ ಕೀಳು ಎಂಬುದಿಲ್ಲ. ಪುರುಷನಂತೆ ಮಹಿಳೆಗೂ ವಿದ್ಯಾಭ್ಯಾಸದ ಮತ್ತು ತನ್ನ ಜೀವನವನ್ನು ರೂಪಿಸಿಕೊಳ್ಳುವ ಹಕ್ಕಿದೆ. ಹೀಗೆ ಸಮಾನತೆ, ಕಾಯಕ, ದಾಸೋಹ ತತ್ವಗಳನ್ನು ಸ್ವೀಕರಿಸುವ ಮತ್ತು ಆಚರಿಸುವ ಯಾರು ಬೇಕಾದರೂ

ಶಿವಶರಣರಾಗ ಬಹುದು ಎಂದು ಬಸವಣ್ಣವರು ಸಾರಿದರು. ಪೊಳ್ಳು ದೇವರುಗಳನ್ನು ಸ್ತುತಿಸುತ್ತಿದ್ದ ಮತ್ತು ಪುರೋಹಿತಶಾಹಿಯಿಂದ ನಿರಂತರವಾಗಿ ವಂಚನೆಗೊಳಗಾಗುತ್ತಿದ್ದ ಜನತೆಗೆ ಬಸವಣ್ಣನವರು ಹೊಸ ಜೀವನ ನೀಡಿದರು. ಜಾತಿ, ಮತ, ಲಿಂಗಗಳ ಭೇದವನ್ನು ತಿರಸ್ಕರಿಸಿದ ಬಸವಣ್ಣನವರು ಸಾಮಾಜಿಕ ಕ್ರಾಂತಿಗೆ ಕಾರಣವಾದರು. ಬಸವಣ್ಣನವರನ್ನು ಜಗಜ್ಯೋತಿ ಬಸವೇಶ್ವರ, ಕ್ರಾಂತಿಯೋಗಿ ಬಸವಣ್ಣ, ಭಕ್ತಿ ಭಂಡಾರಿ ಬಸವಣ್ಣ, ಮಹಾಮಾನವತಾ ವಾದಿ ಎಂದೂ ಕರೆಯಲಾಗುತ್ತದೆ. ಮಾನವಿಯತೆ. ಕಾಯಕ ನಿಷ್ಠೆ ಧರ್ಮದ ಬುನಾದಿಯಾಗ ಬೇಕು ಎಂದು ಬಲವಾಗಿ ನಂಬಿದ್ದ ಬಸವಣ್ಣ ತಮ್ಮ ವಚನಗಳ ಮೂಲಕ ಕಾಯಕವೇ ಕೈಲಾಸ, ದಯವೇ ಧರ್ಮದ ಮೂಲವಯ್ಯ, ಅಯ್ಯ ಎಂದರೆ ಸ್ವರ್ಗ ಎಲವೂ ಎಂದರೆ ನರಕ ಎಂದು ಸಾರುವ ಮೂಲಕ ತಮ್ಮ ಮಾನವಾತಾ ವಾದಕ್ಕೆ ಸಾಹಿತ್ಯದ ಸ್ಪರ್ಶ ನೀಡಿದರು. ಕನ್ನಡ ಸಾಹಿತ್ಯಕ್ಕೆ ವಚನಗಳ ಮೂಲಕ ಅಪೂರ್ವ ಕೊಡುಗೆ ಅಪಾರ ಇದುವರೆಗೆ ಸುಮಾರು 1500 ವಚನಗಳನ್ನು ಸಂಗ್ರಹಿಸಿಡಲಾಗಿದೆ. ಬಸವಣ್ಣನವರ ಪ್ರೇರಣೆಯಿಂದ ಹರಿಜನ ಮತ್ತು ಬ್ರಾಹ್ಮಣ ಕುಟುಂಬಗಳ ನಡುವೆ ನಡೆದ ಅನುಲೋಮ ವಿವಾಹ ಕಲ್ಯಾಣದ ಕ್ರಾಂತಿಗೆ ಮುನ್ನುಡಿಯಾಯಿತು. ಇವರು ಷಟ್ ಸ್ಥಲ ವಚನ, ಕಾಲಜ್ಞಾನ ವಚನ, ಮಂತ್ರಗೋಪ್ಯ, ಶಿಖಾರತ್ನ ವಚನ ಎಂಬ ಗ್ರಂಥಗಳನ್ನು ಬರೆದಿದ್ದಾರೆ. ಇವರನ್ನು ಕುರಿತಂತೆ ಕನ್ನಡ, ತೆಲುಗು, ಸಂಸ್ಕೃತ, ತಮಿಳು, ಮರಾಠಿ ಮತ್ತು ಹಿಂದಿ ಭಾಷೆಗಳಲ್ಲಿ ಪುರಾಣಗಳು ರಚನೆಯಾಗಿವೆ. ಬಾಗೇವಾಡಿ ಕಪ್ಪಡಿಸಂಗಮ, ಕಲ್ಯಾಣ ಪಟ್ಟಣಗಳಲ್ಲಿ ಇವರ ಸ್ಮಾರಕಗಳಿವೆ. ಬೆಳಗಾಂ ಜಿಲ್ಲೆಯ ಅರ್ಜುನವಾಡದ ಶಿಲಾಶಾಸನದಲ್ಲಿ ಉಲ್ಲೇಖಿತವಾಗಿರುವ ಸಂಗಣಬಸವ ಎಂಬ ಹೆಸರು ವಚನಕಾರ ಬಸವಣ್ಣನವರದ್ದೇ ಎಂದು ವಿದ್ವಾಂಸರು ಊಹಿಸಿದ್ದಾರೆ. "ನಮನ" ಪ್ರೊ. ಚಿದಾನಂದ ಮೂರ್ತಿ ಯವರಂಥ ಹಿರಿಯರು ಕೆಲವು ಗೌರವಾನ್ವಿತ ಸಂಪ್ರದಾಯ ಪರಾಯಣ ಮಠಾಧಿಪತಿಗಳೂ ವೀರಶೈವ ಧರ್ಮದ ಪ್ರತ್ಯೇಕ ಅಸ್ತಿತ್ವಯಿವನ್ನೊಪ್ಪದೆ ಅದು ಹಿಂದೂ ಧರ್ಮದ ಒಂದು ಭಾಗವೆಂದು ಘಂಟಾಯಿಘೋಷವಾಗಿ ಸಾರಿದ್ದಾರೆ.

**ಸಾಮಾಜಿಕ ಸಮಾನತೆ**

**ಅಣ್ಣ ಬಸವಣ್ಣ**

**ಇವನಾರವ ಇವನಾರವ ಇವನಾರವ ನೆಂದಿನಸದಿರಯ್ಯಾ**
**ಇವ ನಮ್ಮವ ಇವ ನಮ್ಮವ ಇವ ನಮ್ಮವ ನೆಂದಿನಸಯ್ಯಾ**
**ಕೂಡಲಸಂಗಮದೇವಾ ನಿಮ್ಮ ಮಹಾಮನೆಯ ಮಗನೆಂದೆನಿಸಯ್ಯ.**

ಶೂದ್ರರಾದ ರೈತಾಪಿ ಜನರು, ಕಾಯಕಜೀವಿಗಳು, ಮಹಿಳೆಯರು ಮತ್ತು ಪಂಚಮರು ಈ ದೇಶದಲ್ಲಿ ಸಹಸ್ರಾರು ವರ್ಷಗಳಿಂದ ಮನುಧರ್ಮದ ಪುರುಷ ಪ್ರಧಾನವಾದ ವರ್ಣ ವ್ಯವಸ್ಥೆಯಿಂದಾಗಿ ಪಡಬಾರದ ಕಷ್ಟಪಟ್ಟಿದ್ದಾರೆ. ಮೇಲ್ವರ್ಗ ಮತ್ತು ಮೇಲ್ಜಾತಿಯ ಅನುತ್ಪಾದಕ ಪುರುಷರಿಗಾಗಿಯೇ ಬದುಕಿನ ಎಲ್ಲ ಸುಖಭೋಗಗಳು ಮೀಸಲಾಗಿದ್ದವು. ಇವರು ಮಾತ್ರ ಜನಿವಾರ ಧರಿಸುವ ಹಕ್ಕನ್ನು ಪಡೆದಿದ್ದರು. ಜನಿವಾರ ಧರಿಸುವ ಬ್ರಾಹಣ ಓದಿರಬಹುದು, ಬರೆದಿರಬಹುದು ಆದರೆ ಕಾಯಕಜೀವಿಯಾಗಿ ಉತ್ಪಾದನೆಯಲ್ಲಿ ತೊಡಗಿಲ್ಲ. ಉತ್ಪಾದನೆಯ ಅನುಭವದಿಂದ ಬರುವ ಜ್ಞಾನವನ್ನು ಹಿಂದಿನ ಕಾಲದಲ್ಲಿ ಅವನೆಂದೂ ಪಡೆಯಲಿಲ್ಲ. ಕ್ಷತ್ರಿಯ ಕಾದಿರಬಹುದು ಆದರೆ ಉತ್ಪಾದನೆಯಲ್ಲಿ ತೊಡಗಲಿಲ್ಲ. ವೈಶ್ಯ ವಸ್ತುಗಳ ಮಾರಾಟ ಮಾಡಿರಬಹುದು, ಕೃಷಿಭೂಮಿಯ ಒಡೆಯನೂ ಆಗಿರಬಹುದು ಆದರೆ ಸ್ವತಃ ಉತ್ಪಾದನೆ ಮಾಡಲಿಲ್ಲ. ಈ ಮೂರೂ ವರ್ಣದವರಿಗೂ ಜನಿವಾರ ಇದೆ.

ಆದರೆ ಉತ್ಪಾದನೆಯಲ್ಲಿ ತೊಡಗಿದ ಕಾಯಕ ಜೀವಿಗಳಿಗೆ ಮತ್ತು ಪಂಚಮರಿಗೆ ಜನಿವಾರ ಇಲ್ಲ. ಯಾರಿಗೆ ಜನಿವಾರ ಇತ್ತೋ ಅವರು ದುಡಿಯದೆ ಸುಖ ಜೀವನವನ್ನು ಅನುಭವಿಸಿದರು. ಯಾರಿಗೆ ಜನಿವಾರ ಇದ್ದಿದ್ದಿಲ್ಲವೂ ಅವರು ದುಡಿದೂ ಕಷ್ಟ ಜೀವನವನ್ನು ಅನುಭವಿಸಿದರು. ಅಂತೆಯೆ ಬಸವಣ್ಣನವರು ಕಟ್ಟ ಕಡೆಗೆ ಮನುಷ್ಯನ ಕಡೆಗೆ ಬಂದರು ಈ ಅನ್ಯಾಯದ ವಿರುದ್ಧ ಸಿಡಿದೆದ್ದರು. "ಜಾತಿ ಸಂಕರವಾದ ಬಳಿಕ ಕುಲವನರಸುವರೆ ?" ಎಂದು ಪ್ರಶ್ನಿಸಿ ಕಾಯಕಜೀವಿಗಳ ಕೇಂದ್ರಿತ ಶರಣ ಸಂಕುಲವನ್ನು ಸೃಷ್ಟಿಸಿದರು. ವಿವಿಧ ಕಾಯಕಗಳ ಶೂದ್ರರಿಗೆ, ಮಹಿಳೆಯರಿಗೆ ಮತ್ತು ಪಂಚಮರಿಗೆ ಮೊದಲ ಬಾರಿಗೆ ಶಿಕ್ಷಣ ನೀಡುವ ವ್ಯವಸ್ಥೆ ಮಾಡಿದರು. ಅವರೆಲ್ಲ ಅನುಭವ ಮಂಟಪದಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು. ಭಾರತದಲ್ಲಿ ವಿವಿಧ ಜಾತಿಗಳ ಕಾಯಕಜೀವಿಗಳು ಮೊದಲ ಬಾರಿಗೆ ಜಾತಿಯನ್ನು ಮೀರಿ ಒಂದು ವರ್ಗವಾಗಿದ್ದು ಶರಣ ಸಂಕುಲದಲ್ಲಿ ಎಂಬುದು ಹೆಮ್ಮೆಯ ವಿಚಾರವಾಗಿದೆ.

ಅವರೆಲ್ಲ ತಮ್ಮ ಕಾಯಕಗಳ ಹೆಸರುಗಳನ್ನು ಅಭಿಮಾನದಿಂದ ಉಳಿಸಿಕೊಂಡರು. ಆದರೆ ಆ ಕಾಯಕಗಳ ಒಳಗೆ ಇದ್ದ ಜಾತಿ ವಿಷವನ್ನು ಹೊರ ಹಾಕಿದರು. ಹೀಗೆ ಶರಣರಲ್ಲಿ ಸಮಗಾರ, ಮಾದಾರ, ಮೇದಾರ, ಡೋಹರ, ಅಂಬಿಗ ಮುಂತಾದ ಪದಗಳು ಜಾತಿ ಸೂತಕವನ್ನು ಕಳೆದುಕೊಂಡು ಕಾಯಕ ಸೂಚಕಗಳಾಗಿ ಉಳಿದವು.

**ವಚನಗಳು**

**ಅಡವಿಯಲೊಬ್ಬ ಕಡು ನೀರಡಿಸಿ,**

**ಅಭ್ಯಾಸವೆನ್ನ ವರ್ತಿಸಿತ್ತಯ್ಯಾ,**

**ಸಂಕ್ಷಿಪ್ತ ಪರಿಚಯ ಸಂಪಾದಿಸಿ**

ವಿಶ್ವಗುರು ಬಸವಣ್ಣನವರು ಪರಮಾತ್ಮನ ಕರುಣೆಯ ಕಂದರಾಗಿ ಅವತರಿಸಿ, ಲೋಕಕ್ಕೆ ಹೊಸ ಧರ್ಮವೊಂದನ್ನು ಕೊಟ್ಟರು. ಇಂಗಳೇಶ್ವರ ಬಾಗೇ ವಾಡಿಯಲ್ಲಿ ಶೈವ ಬ್ರಾಹ್ಮಣ ದಂಪತಿಗಳಾದ ಮಾದರಸ–ಮಾದಲಾಂಬಿಕೆಯರ ಮಗನಾಗಿ ಆನಂದನಾಮ ಸಂವತ್ಸರದಲ್ಲಿ ವೈಶಾಖಮಾಸದ ಅಕ್ಷಯ ತೃತೀಯದಂದು (ದಿ. ಎಪ್ರಿಲ್ 30 1134 ) ರೋಹಿಣಿ ನಕ್ಷತ್ರದಲ್ಲಿ ಜನಿಸಿ ಯಾವುದೇ ಅಂಧಶ್ರದ್ಧೆ ಜಡ ಸಂಪ್ರದಾಯಗಳನ್ನೊಪ್ಪದ ಸತ್ಯಾನ್ವೇಷಕರಾಗಿ ಹೆತ್ತವರನ್ನು, ಬಂಧು ಬಾಂಧವರನ್ನು ತೊರೆದು ವಿದ್ಯಾಕಾಂಕ್ಷಿಯಾಗಿ ಕೂಡಲ ಸಂಗಮದ ಗುರುಕುಲಕ್ಕೆ ಬಂದರು.

ಶಾಸ್ತ್ರಾಧ್ಯಯನ, ಯೋಗಾಭ್ಯಾಸಗಳಲ್ಲಿ ಬಾಲ್ಯವನ್ನು ಕಳೆದು ತಾರುಣ್ಯಕ್ಕೆ ಕಾಲಿರಿಸಿದರು. ಜನರಲ್ಲಿ ಮನೆ ಮಾಡಿಕೊಂಡಿದ್ದ ಮೌಢ್ಯತೆ, ಕಂದಾಚಾರ, ಜಾತೀಯತೆಗಳನ್ನು ಕಂಡು ಮನನೊಂದು ಪರಿಹಾರವನ್ನು ಅರಸತೊಡಗಿದರು. ಒಂದು ದಿನ (ದಿ.14ನೇ ಜನವರಿ 1155) ಪರಮಾತ್ಮನ ದಿವ್ಯ ದರ್ಶನವಾಯಿತು; ಅನುಗ್ರಹಿತರಾದರು. ಬ್ರಹ್ಮ–ವಿಷ್ಣು–ಮಹೇಶ್ವರರೆಂಬ ತ್ರಿಮೂರ್ತಿಗಳನ್ನು ಮೀರಿದ ಸೃಷ್ಟಿಕರ್ತನೇ ಶ್ರೇಷ್ಠವೆಂದು ಘೋಷಿಸಿ ಆ ದೇವನನ್ನು ಲಿಂಗದೇವ ಎಂದು ಕರೆದರು. ನಿರಾಕಾರ ದೇವನಿಗೆ ಮನುಷ್ಯರ, ಪ್ರಾಣಿಗಳ ಆಕಾರ ಕೊಡುವುದು ಸರಿಯಲ್ಲ ಎಂಬ ಭಾವ ತಳೆದು, ದೇವನ ಸಾಕಾರ ಕೃತಿಯೇ ಬ್ರಹ್ಮಾಂಡ, ಇದು ಗೋಲಾಕಾರದಲ್ಲಿದೆ.

ಆದ್ದರಿಂದ ಲಿಂಗದೇವನನ್ನು ವಿಶ್ವದಾಕಾರದಲ್ಲಿ ಪೂಜಿಸುವುದು ಸರಿ ಎಂದು ಇಷ್ಟಲಿಂಗದ ಪರಿಕಲ್ಪನೆ ಕೊಟ್ಟರು. ದೇವರ ಕುರುಹಾದ ಇಷ್ಟಲಿಂಗವು ಮಾನವನ ಜಾತಿ, ವರ್ಣ, ವರ್ಗ ಭೇದಗಳನ್ನು ಕಳೆದು ಶರಣನನ್ನಾಗಿ ಮಾಡುವ ಸಾಧನವಾಗಬೇಕೆಂದು ಅದನ್ನು ಗಣ ಲಾಂಛನವನ್ನಾಗಿ ಮಾಡಿದರು. ಪರಮಾತ್ಮನ ದಿವ್ಯಾನುಭವ ಪಡೆದು, ನವ ಸಮಾಜ ನಿರ್ಮಾಣದ ರೂಪುರೇಷೆಗಳನ್ನು ತಮ್ಮ ಮನದಲ್ಲಿ ಹೊಂದಿ ಕಲ್ಯಾಣದ ಕಾರ್ಯಕ್ಷೇತ್ರವನ್ನು ಪ್ರವೇಶಿಸಿದರು. ಸೋದರ ಮಾವನ ಮಗಳು ನೀಲಾಂಬಿಕೆಯನ್ನು ವಿವಾಹವಾಗಿ ಕರಣಿಕ ಕಾಯಕ ಕೈಗೊಂಡರು.

ಅಲ್ಲಿಂದ ಮುಂದೆ ಭಂಡಾರಿಯಾಗಿ, ಪ್ರಧಾನಿ(ದಂಡನಾಯಕ)ಯಾಗಿ ಕಾಯಕ ನಿರ್ವಹಿಸಿದರು. ಅನುಭವ ಮಂಟಪ ಸ್ಥಾಪಿಸಿ ಧರ್ಮ ಪ್ರಚಾರ ಮಾಡಿದರು. ಎಲ್ಲರ ಮನೆ, ಮನಗಳ ಬಾಗಿಲಿಗೂ ಧರ್ಮಗಂಗೆ ಹರಿಯುವಂತೆ ಮಾಡಿದರು. ಇಷ್ಟಲಿಂಗವೆಂಬ ಗಣಲಾಂಛನವನ್ನು ಧರಿಸಿ ಲಿಂಗಾಯತರಾದ ಎಲ್ಲ ಶರಣ ಬಂಧುಗಳನ್ನು ಸಮಾನ ಭಾವದಿಂದ ಕಂಡರು. ಹುಟ್ಟಿನಿಂದ ಬ್ರಾಹ್ಮಣರಾಗಿ, ಸಂಸ್ಕಾರದಿಂದ ಶರಣರಾದ ಮಧುವರಸರ ಮಗಳನ್ನು ಹುಟ್ಟಿನಿಂದ ಸಮಗಾರರಾಗಿ ಸಂಸ್ಕಾರದಿಂದ ಶರಣರಾದ ಹರಳಯ್ಯನವರ ಮಗನಿಗೆ ಕೊಟ್ಟು ವಿವಾಹ ಮಾಡಲು ಪ್ರೇರಣೆ ನೀಡಿದರು.

ಈ ವಿವಾಹದಿಂದ ಸಂಪ್ರದಾಯವಾದಿಗಳು ಸಿಡಿದೆದ್ದು ಬಿಜ್ಜಳ ಮಹಾರಾಜನನ್ನು ಬಸವಣ್ಣನವರ ವಿರುದ್ಧ ಪ್ರೇರೇಪಿಸಿ ಧರ್ಮಗುರು ಬಸವಣ್ಣನವರಿಗೆ ಗಡಿಪಾರು ಶಿಕ್ಷೆ ನೀಡುವಂತೆ ಮಾಡಿದರು. ಧರ್ಮಪಿತರು ಗಡಿಪಾರು ಶಿಕ್ಷೆ ಸ್ವೀಕರಿಸಿ ಕಲ್ಯಾಣದಿಂದ ಹೊರಟ ನಂತರ ಹರಳಯ್ಯ, ಮಧುವರಸ, ಶೀಲವಂತರ ಬಂಧನವಾಗಿ ಅವರು ವರ್ಣಾಂತರ ವಿವಾಹದಲ್ಲಿ ಭಾಗಿಯಾದುದ ಕ್ಕಾಗಿ ಕಣ್ಣು ಕೀಳಿಸುವ ಶಿಕ್ಷೆ, ಎಳೆ ಹೊಟ್ಟೆ ಶಿಕ್ಷೆಗೆ ಒಳಗಾಗಿ ಪ್ರಾಣ ಬಿಡಬೇಕಾಯಿತು. ಜಾತಿವಾದಿಗಳು ವಚನ ಸಾಹಿತ್ಯವನ್ನು ನಾಶಮಾಡಲು ಸನ್ನದ್ಧರಾದಾಗ ವೀರಮಾತೆ ಅಕ್ಕನಾಗಲಾಂಬಿಕೆ , ಚಿನ್ಮಯಜ್ಞಾನಿ ಚೆನ್ನಬಸವಣ್ಣ, ವೀರ ಗಣಾಚಾರಿ ಮಡಿವಾಳ ಮಾಚಯ್ಯನವರು ವೀರಾಗ್ರಣಿಗಳಾಗಿ ಕಾದಾಡಿ ವಚನ ವಾಙ್ಮಯ ನಿಧಿಯನ್ನು ಉಳಿಸಿಕೊಟ್ಟರು. ಅದಿಂದು ನಮ್ಮೆಲ್ಲರ, ಕರ್ನಾಟಕದ, ಭಾರತದ, ವಿಶ್ವದ ಹೆಮ್ಮೆಯ ಆಸ್ತಿಯಾಗಿದೆ. ಇಂತಹ ಮಹಾನ್ ನೇತಾರರಾದ ಬಸವಣ್ಣನವರು ಲಿಂಗಾಯತ ಧರ್ಮದ ಸಂಸ್ಥಾಪಕರು; ಧರ್ಮಪಿತರು, ಮಂತ್ರಪುರುಷರು. 62 ವರ್ಷ 3 ತಿಂಗಳು 2 ದಿವಸಗಳ ಕಾಲ ಇಳೆಯಲ್ಲಿ ಬಾಳಿದ ಬಸವಣ್ಣನವರು ನಳನಾಮ ಸಂವತ್ಸರದ ಶ್ರಾವಣ ಶುದ್ಧ ಪಂಚಮಿಯಂದು (ದಿ. ಜುಲೈ 7 1196) ಉರಿಯುಂಡ ಕರ್ಪುರದಂತೆ ಲಿಂಗೈಕ್ಯರಾದರು.

ಮಂಗಳವೇಡದ ರಾಜ ಬಿಜ್ಜಳನ ಆಸ್ಥಾನದಲ್ಲಿ ಮಂತ್ರಿಯಾದ ಬಸವಣ್ಣ ಹಲವಾರು ಜನಪರ ಮತ್ತು ಸಮಾಜ ಸುಧಾರಣೆ ಕ್ರಮಗಳನ್ನು ಕೈಗೊಂಡರು. ಕಾಯಕವೇ ಕೈಲಾಸ ವೆಂದು ಸಾರಿ, ಜನರನ್ನು ದುಡಿದು ಬದುಕುವ ಪಥದಲ್ಲಿ ಮುನ್ನೆಡೆಸಿದರು. ಜಾತಿ, ಲಿಂಗ, ಭಾಷೆ ಭೇದವಿಲ್ಲದೆ, ಶರಣ ತತ್ವದಲ್ಲಿ, ಸಮಾನತೆಯಲ್ಲಿ ಮತ್ತು ಕಾಯಕ ನಿಷ್ಠೆಯಲ್ಲಿ ನಂಬಿಕೆಯುಳ್ಳವರನ್ನು ನಿಜವಾದ " ಶಿವಶರಣ " ರೆಂದು ಕರೆದರು.

**"ಇವನಾರವ, ಇವನಾರವ ಎಂದೆನ್ನದಿರಯ್ಯ ಇವ ನಮ್ಮವ, ಇವ ನಮ್ಮವ ಎಂದೆನ್ನಿರಯ್ಯ"**

**ಎಂದು, ಸಮಾಜದ ಎಲ್ಲ ವರ್ಗದ ಜನರನ್ನು ಒಂದುಗೂಡಿಸಿದ ಬಸವಣ್ಣ, ಜಾತೀಯತೆಯ ವಿರುದ್ಧ ಸಮರ ಸಾರಿದರು.**

**"ಹೊಲೆಯನೆಂಬುವವನು ಊರ ಹೊರಗಿಹನೇ? ಊರ ಒಳಗಿಲ್ಲವೇ? ಎಂದು ಪ್ರಶ್ನಿಸಿ,**

ಅಸ್ಪೃಶ್ಯತೆಯ ಹೆಸರಿನಲ್ಲಿ ಊರ ಹೊರಗೆ ಇರಿಸಲಾದ ದಲಿತರನ್ನು ಕರೆತಂದು ಸಮಾಜದ ಭಾಗವನ್ನಾಗಿ ಮಾಡಿದರು. ದೇವಾಲಯ, ಕುಡಿಯುವ ನೀರಿನ ಭಾವಿ-ಕೆರೆಗಳನ್ನು ಬಳಸಲು ಇವರಿಗೂ ಸಮಾನ ಹಕ್ಕಿದೆಯಂದು ತೋರಿಸಿದರು.

"ಉಳ್ಳವರು ಶಿವಾಲಯ ಮಾಡುವವರು ನಾನೇನು ಮಾಡಲಿ ಬಡವನಯ್ಯ ಎನ್ನ ಕಾಲೇ ಕಂಭ, ದೇಹವೇ ದೇಗುಲ ಶಿರವೇ ಹೊನ್ನ ಕಲಶವಯ್ಯ ಕೂಡಲ ಸಂಗಮ ದೇವ ಕೇಳಯ್ಯ ಸ್ಥಾವರಕ್ಕಳಿವುಂಟು, ಜಂಗಮಕ್ಕಳಿವಿಲ್ಲ" ಎಂದ ಬಸವಣ್ಣ ಪುರೋಹಿತಶಾಹಿ ವ್ಯವಸ್ಥೆ ಮತ್ತು ಧರ್ಮದ ಹೆಸರಿನಲ್ಲಿ ಜನಸಾಮಾನ್ಯರ ಶೋಷಣೆಯನ್ನು ಖಂಡಿಸಿದ್ದಾರೆ.

ಬಸವ ಕಲ್ಯಾಣದಲ್ಲಿ ಬಸವಣ್ಣನವರು ಶರಣರ ಜೊತೆ ಸೇರಿ ಅನುಭವ ಮಂಟಪ ಸ್ಥಾಪಿಸಿದರು. ಅನುಭವ ಮಂಟಪವು ವಿಶ್ವ ಮಾನವ ಸಂದೇಶ ಮತ್ತು ವಿಚಾರಗಳ ಬಗೆಗೆ ಮುಕ್ತವಾಗಿ ಚರ್ಚಿಸಬಹುದಾದ ವೇದಿಕೆಯಾಗಿದ್ದು, ಭಾರತದಾದ್ಯಂತ ಅನೇಕ ಕಡೆಗಳಿಂದ ಜನರನ್ನು ಸೆಳೆಯಿತು. ಇದೇ ಸಮಯದಲ್ಲೇ ಕನ್ನಡ ಭಾಷೆಯಲ್ಲಿ ಜನಸಾಮಾನ್ಯರಿಗಾಗಿ ವಚನಗಳ ರಚನೆ ಆರಂಭವಾಯಿತು. ಸಮಾಜ ಸುಧಾರಣೆ ಮತ್ತು ಧಾರ್ಮಿಕ ವಿಷಯಗಳ ಬಗೆಗೆ ಸುಂದರ ಮತ್ತು ಸರಳ ಬೋಧನೆಗಳುಳ್ಳ ಸಣ್ಣ ಪದ್ಯಗಳಿಗೆ ವಚನಗಳೆಂದು ಹೆಸರು. ॐ



**ಮನೆ ಮದ್ದು :**

ನೆಲ್ಲಿಕಾಯಿಯನ್ನು ಆಗಾಗ ಸೇವಿಸುವುದರಿಂದ ಕೂದಲು ಬೇಗ ಬೆಳ್ಳಗಾಗುವುದಿಲ್ಲ.



### ಕನ್ನಡ ಚಿತ್ರರಂಗದ ಅಪ್ರತಿಮ ನಟರು ಮತ್ತು ಶ್ರೇಷ್ಠ ಗಾಯಕರು, ನಮ್ಮೆಲ್ಲರ ಪ್ರೀತಿಯ

## "ಅಣ್ಣಾವ್ರು"

# ಡಾ. ರಾಜ್ ಕುಮಾರ್

ಅಣ್ಣಾವ್ರು ಎಂದೇ ಖ್ಯಾತರಾದ ಕನ್ನಡ ಚಲನಚಿತ್ರರಂಗ ಮತ್ತು ರಂಗಭೂಮಿಯ ಮೇರುನಟ. ಕರ್ನಾಟಕದ ಅತ್ಯಂತ ಜನಪ್ರಿಯ ವ್ಯಕ್ತಿಗಳಲ್ಲಿ ಪ್ರಮುಖರು. ನಟನೆ, ಗಾಯನ ಮತ್ತು ಚಿತ್ರ ನಿರ್ಮಾಣದ ಮೂಲಕ. ವರನಟ, ನಟಸಾರ್ವಭೌಮ ಮೊದಲಾದ ಬಿರುದುಗಳು ಮತ್ತು ಮೈಸೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಹಾಗೂ ಹಂಪಿ ವಿಶ್ವವಿದ್ಯಾಲಯದಿಂದ ನಾಡೋಜ ಪದವಿಯನ್ನು ಪಡೆದ ಮೊದಲ ನಟ ಇವರು. ಭಾರತೀಯ ಚಿತ್ರರಂಗ ನೂರು ವರ್ಷ ಪೂರೈಸಿದ ಸಂದರ್ಭದಲ್ಲಿ ಫೋರ್ಬ್ಸ್ ಪತ್ರಿಕೆಯು ಪ್ರಕಟಿಸಿರುವ 25 ಅತ್ಯದ್ಭುತ ನಟನೆಗಳ ಪಟ್ಟಿಯಲ್ಲಿ ಡಾ. ರಾಜ್ ಕುಮಾರ್ ಅವರ ಬಂಗಾರದ ಮನುಷ್ಯ ಚಿತ್ರದ ನಟನೆಯೂ ಒಂದಾಗಿದೆ.

**ಜೀವನ**

- ನಟಸಾರ್ವಭೌಮ ಡಾ. ರಾಜ್ಕುಮಾರ್ (ಜನನ: ಏಪ್ರಿಲ್ 24, 1929 – ಮರಣ: ಏಪ್ರಿಲ್ 12, 2006) ಕನ್ನಡ ಚಿತ್ರರಂಗದ ಧ್ರುವತಾರೆ ಎಂದೇ ಹೆಸರಾದ ಪ್ರಸಿದ್ಧ ನಟ, ಗಾಯಕ. 1954–2005ರವರೆಗೆ 5 ದಶಕದಗಳ ಚಿತ್ರರಂಗದ ಬದುಕಿನಲ್ಲಿ, 200 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಾಯಕನಾಗಿ ನಟಿಸಿದ ಹೆಗ್ಗಳಿಕೆ ಡಾ. ರಾಜ್ ರದ್ದು.
- ಕೇವಲ ನಟರಾಗಿ ಉಳಿಯದೆ ಹಿನ್ನೆಲೆ ಗಾಯಕರಾಗಿ ಸಹ ಹೆಸರು ಮಾಡಿದ್ದಾರೆ. ನಟಸಾರ್ವಭೌಮ ಬಿರುದು, 1973 ರಲ್ಲಿ ಮೈಸೂರು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಹಾಗೂ ಹಂಪಿ ವಿಶ್ವವಿದ್ಯಾಲಯದಿಂದ ನಾಡೋಜ ಪದವಿಯನ್ನು ಪಡೆದಿದ್ದಾರೆ. ಭಾರತ ಸರ್ಕಾರದಿಂದ ಪದ್ಮಭೂಷಣ ಪ್ರಶಸ್ತಿ ಮತ್ತು ಚಿತ್ರರಂಗದಲ್ಲಿನ ಜೀವಮಾನದ ಸಾಧನೆ ಗಾಗಿ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿಗಳು ಸಹ ಲಭಿಸಿವೆ.
- ಕರ್ನಾಟಕ ಸರ್ಕಾರದಿಂದ ಕರ್ನಾಟಕ ರತ್ನ ಪಡೆದ ಎರಡನೆಯ ವ್ಯಕ್ತಿ 2000ನೇ ವರ್ಷದಲ್ಲಿ ಕುಖ್ಯಾತ ದಂತಚೋರ ವೀರಪ್ಪನ್ನಿಂದ ಅಪಹರಣವಾಗಿದ್ದ ರಾಜ್ ಕುಮಾರ್, 108 ದಿನಗಳ ನಂತರ ಬಿಡುಗಡೆಯಾಗಿದ್ದರು. 2006 ಏಪ್ರಿಲ್ 12ರಂದು ಬೆಂಗಳೂರಿನಲ್ಲಿ, ಹೃದಯಾಘಾತದಿಂದ ಮರಣ ಹೊಂದಿದರು.

## ಹಿನ್ನೆಲೆ



ಕನ್ನಡ ರಂಗಭೂಮಿಯ ಹೆಸರಾಂತ ಪ್ರತಿಭೆ ಸಿಂಗನಲ್ಲೂರು ಪುಟ್ಟಸ್ವಾಮಯ್ಯ ಮತ್ತು ಲಕ್ಷ್ಮಮ್ಮ ದಂಪತಿಗಳ ಹಿರಿಯ ಮಗನಾಗಿ, ಚಾಮರಾಜನಗರ ಜಿಲ್ಲೆಯ ಗಡಿಭಾಗದಲ್ಲಿರುವ ದೊಡ್ಡ ಗಾಜನೂರಿನಲ್ಲಿ 1929ರ ಏಪ್ರಿಲ್ 24ರಂದು ರಾಜ್ಕುಮಾರ್ ಹುಟ್ಟಿದರು. ನಾಮಕರಣಗೊಂಡ ಹೆಸರು ಮುತ್ತುರಾಜು (ಮುತ್ತಣ್ಣ).

ಡಾ. ರಾಜ್ ಅವರಿಗೆ ವರದರಾಜ್ ಎಂಬ ಸಹೋದರರೂ, ಶಾರದಮ್ಮ ಎಂಬ ತಂಗಿಯೂ ಇದ್ದರು. 1953 ಜೂನ್ 25ರಂದು ಪಾರ್ವತಿಯುವರೊಡನೆ ಲಗ್ನವಾಯಿತು. ಪಾರ್ವತಿಯುವರು ಮುಂದೆ ಪಾರ್ವತಮ್ಮ ರಾಜ್ಕುಮಾರ್ ಎಂದೇ ಕನ್ನಡದ ಜನತೆಗೆ ಚಿರ ಪರಿಚಿತರಾಗಿ ಕನ್ನಡ ಚಿತ್ರರಂಗದ ಪ್ರಮುಖ ಚಿತ್ರ ನಿರ್ಮಾಪಕರಲ್ಲೊಬ್ಬರಾದರು. ಅವರು ವಜ್ರೇಶ್ವರಿ ಸಂಸ್ಥೆಯ ಅಡಿಯಲ್ಲಿ ಹಲವಾರು ಕನ್ನಡ ಚಲನಚಿತ್ರಗಳನ್ನು ನಿರ್ಮಿಸಿದ್ದಾರೆ. ಡಾ. ರಾಜ್ ದಂಪತಿಗಳಿಗೆ 5 ಜನ ಮಕ್ಕಳು. ಮೂರು ಜನ ಗಂಡು ಮಕ್ಕಳು ಮತ್ತು ಇಬ್ಬರು ಹೆಣ್ಣು ಮಕ್ಕಳು. ಗಂಡು ಮಕ್ಕಳಾದ ಶಿವರಾಜ್ಕುಮಾರ್, ರಾಘವೇಂದ್ರ ರಾಜ್ಕುಮಾರ್ ಮತ್ತು ಪುನೀತ್ ರಾಜ್ಕುಮಾರ್ ಕನ್ನಡ ಚಿತ್ರರಂಗದ ನಾಯಕ ನಟರು. ಹೆಣ್ಣು ಮಕ್ಕಳು ಪೂರ್ಣಿಮಾ ಹಾಗು ಲಕ್ಷ್ಮಿ. ಹಿರಿಯ ಅಳಿಯ ಪಾರ್ವತಮ್ಮನವರ ತಮ್ಮನಾದ ಗೋವಿಂದರಾಜು ಹಾಗು ಕಿರಿಯ ಅಳಿಯ ಚಿತ್ರನಟ ರಾಮ್ಕುಮಾರ್. ಒಟ್ಟು ಹನ್ನೆರಡು ಮೊಮ್ಮಕ್ಕಳಿದ್ದು, ಶಿವರಾಜ್ಕುಮಾರ್ ಪುತ್ರಿಯಾದ ನಿವೇದಿತಾ, ಅಂಡಮಾನ್ ಮುಂತಾದ ಕೆಲವು ಚಿತ್ರಗಳಲ್ಲಿ ಬಾಲನಟಿಯಾಗಿ ನಟಿಸಿದ್ದಾಳೆ. ಕರ್ನಾಟಕದ ಮಾಜಿ ಮುಖ್ಯಮಂತ್ರಿ ಎಸ್. ಬಂಗಾರಪ್ಪ ಅವರು ಡಾ. ರಾಜ್ ಅವರ ಬೀಗರು. ಬಂಗಾರಪ್ಪನವರ ಪುತ್ರಿಯಾದ ಗೀತಾ, ಶಿವರಾಜ್ಕುಮಾರ್ ಅವರ ಪತ್ನಿ.

## ರಂಗಭೂಮಿ ಮತ್ತು ತಂದೆಯ ಪ್ರಭಾವ

- ಬೇಡರ ಕಣ್ಣಪ್ಪ ಚಿತ್ರದಲ್ಲಿ ನಾಯಕನಾಗಿ ನಟಿಸುವ ಮುನ್ನ ಡಾ. ರಾಜ್ ಅವರ ಹೆಸರು ಮುತ್ತುರಾಜ ಎಂದಿತ್ತು. ಮುತ್ತುರಾಜನ ತಂದೆ ಸಿಂಗಾನಲ್ಲೂರು ಪುಟ್ಟಸ್ವಾಮಯ್ಯರವರು ಎಂದರೆ 1930–1950 ಕಾಲದಲ್ಲಿ ಕನ್ನಡ ರಂಗಭೂಮಿಯ ದೊಡ್ಡ ಹೆಸರು. ರೌದ್ರ ಪಾತ್ರಗಳಿಗೆ ಹೆಸರಾಗಿದ್ದ ಪುಟ್ಟಸ್ವಾಮಯ್ಯರವರು ಗುಬ್ಬಿ ಕಂಪನಿಯಲ್ಲಿ ಕಲಾವಿದರಾಗಿದ್ದರು. ಬಡತನದಿಂದಾಗಿ ಮುತ್ತುರಾಜ್ ವಿದ್ಯಾಭ್ಯಾಸ ನಾಲ್ಕನೆ ತರಗತಿಗೆ ನಿಂತಿತು.

- ಗುಬ್ಬಿ ಕಂಪನಿಯೇ ವಿಶ್ವವಿದ್ಯಾನಿಲಯವಾಯಿತು. ತಂದೆಯನ್ನು ನೆರಳಿನಂತೆ ಹಿಂಬಾಲಿಸಿದ ಮುತ್ತುರಾಜ್ಗೆ ಅವರಿಂದಲೇ ತರಬೇತಿಯಾಯಿತು. ನಾಟಕಗಳಲ್ಲಿ ಸಣ್ಣ ಪುಟ್ಟ ಪಾತ್ರ ನಿರ್ವಹಿಸುತ್ತಿದ್ದರು. ಡಾ.ರಾಜ್ಕುಮಾರ್ ಜೀವನದಲ್ಲಿ ತಂದೆ ಬೀರಿರುವ ಪ್ರಭಾವ ಅಪಾರ.ಫಾಲ್ಕೆ ಪ್ರಶಸ್ತಿ ಪ್ರಕಟವಾದಾಗ ಅವರು ಮೊದಲು ನೆನಪಿಸಿಕೊಂಡದ್ದು ತಂದೆ ಹೇಳಿದ ಮಾತುಗಳನ್ನೇ, "ಇಂತಹ ಸಾಧನೆ ನಿನ್ನಿಂದ ಸಾಧ್ಯ" ಎಂದು ಪುಟ್ಟಸ್ವಾಮಯ್ಯ ಮಗನ ಭವಿಷ್ಯವನ್ನು ಅಂದೇ ನುಡಿದಿದ್ದರು. ಅದು ನಿಜವಾಯಿತು.
- "ನನ್ನ ತಂದೆ ರಂಗದ ಮೇಲೆ ಹುರಿ ಮೀಸೆ ತಿರುಗಿಸುತ್ತಾ, ಆರ್ಭಟಿಸುತ್ತಾ ರಂಗ ಪ್ರವೇಶಿಸಿದರೆಂದರೆ ಎಂತಹವರಿಗೂ ಒಂದು ಬಾರಿ ನಡುಕ ಬರುತ್ತಿತ್ತು" ಎಂದು ತಂದೆಯವರ ಅಭಿನಯವನ್ನು ಬಣ್ಣಿಸುವ ರಾಜ್ಕುಮಾರ್ ಅವರಿಗೆ ತಂದೆಯ ಅಭಿನಯ ಬಲುಪ್ರಿಯ. "ನಾನೂ ಅದೇ ರೀತಿ ಮಾಡಬೇಕೆಂದು ಭಕ್ತ ಪ್ರಹ್ಲಾದ ಚಿತ್ರದಲ್ಲಿ ಹಿರಣ್ಯ ಕಶಿಪು ಪಾತ್ರದಲ್ಲಿ ಅವರಂತೆ ಅಭಿನಯಿಸಲು ಸಾಧ್ಯವೇ ಎಂದು ಪ್ರಯತ್ನಿಸಿದೆ, ಆದರೆ ಬರಲಿಲ್ಲ" ಎಂದು ಹೇಳಿದ್ದಾರೆ.
- ಗುಬ್ಬಿ ಕಂಪನಿಯಲ್ಲಿ ಪುಟ್ಟಸ್ವಾಮಯ್ಯನವರು ಅಭಿನಯಿಸುತ್ತಿದ್ದಾಗ ಮುತ್ತುರಾಜುವಿಗೆ "ಕೃಷ್ಣಲೀಲಾ" ಎಂಬ ನಾಟಕದಲ್ಲಿ ಸಣ್ಣ ಪಾತ್ರ ದೊರಕಿತು. ಕೆಲ ದಿನಗಳ ನಂತರ ಪುಟ್ಟಸ್ವಾಮಯ್ಯನವರು ಗುಬ್ಬಿ ಕಂಪನಿ ತೊರೆದು ಎಂ.ವಿ.ಸುಬ್ಬಯ್ಯ ನಾಯ್ಡು ಅವರ ಶ್ರೀ ಸಾಹಿತ್ಯ ಸಾಮ್ರಾಜ್ಯ ನಾಟಕ ಮಂಡಳಿಗೆ ಸೇರಿದಾಗ ಅಕಸ್ಮಾತ್ತಾಗಿ ಮುತ್ತುರಾಜ್ಗೆ "ಅಂಬರೀಷ" ನಾಟಕದಲ್ಲಿ ಅಂಬರೀಷನ ತಮ್ಮ ರಮಾಕಾಂತನ ಪಾತ್ರ ದೊರಕಿತು.
- ಅನಂತರ "ಕುರುಕ್ಷೇತ್ರ" ನಾಟಕದಲ್ಲಿ ತಂದೆ ಭೀಮನ ಪಾತ್ರವಾದರೆ ಮಗ ಅರ್ಜುನನ ಪಾತ್ರ. ರಾಜ್ಕುಮಾರ್ಗೆ ಇದು ರಂಗ ತಾಲೀಮು. 1951ರಲ್ಲಿ ತಂದೆ ಪುಟ್ಟಸ್ವಾಮಯ್ಯನವರ ನಿಧನ. ಬಂದೆರಗಿದ ಅಘಾತದಿಂದ ತತ್ತರಿಸಿದ ಮುತ್ತುರಾಜ್, ಮತ್ತೆ ಗುಬ್ಬಿ ಕಂಪನಿ ಸೇರಿ "ಭೂ ಕೈಲಾಸ" ನಾಟಕದಲ್ಲಿ ಅಭಿನಯಿಸಿದರು. ಗುಬ್ಬಿ ಕಂಪನಿ ಅಲ್ಲದೆ, ಶ್ರೀ ಸಾಹಿತ್ಯ ಮಂಡಲಿ, ಶೇಷಾಚಾರ್ಯರ ಶೇಷಕಮಲ ನಾಟಕ ಮಂಡಳಿಯಲ್ಲಿಯೂ ರಾಜ್ಕುಮಾರ್ ಒಂದು ವರ್ಷ ಸೇವೆ ಸಲ್ಲಿಸಿದ್ದಾರೆ.

**ಚಿತ್ರರಂಗಕ್ಕೆ ನಾಯಕನಾಗಿ ಪಾದಾರ್ಪಣೆ**


- 1942ರಲ್ಲಿ ಬಿಡುಗಡೆಯಾದ ಭಕ್ತ ಪ್ರಹ್ಲಾದ ಚಿತ್ರದಲ್ಲಿ ನಟನಾಗಿಯೂ, 1952ರಲ್ಲಿ ಬಿಡುಗಡೆಯಾದ ಶಂಕರ್ಸಿಂಗ್ ನಿರ್ದೇಶನದ ಶ್ರೀ ಶ್ರೀನಿವಾಸ ಕಲ್ಯಾಣ ಚಿತ್ರದಲ್ಲಿ ಸಪ್ತರ್ಷಿಗಳಲ್ಲಿ ಒಬ್ಬರಾಗಿ ಅಭಿನಯಿಸಿದ್ದ ಮುತ್ತುರಾಜ್, ರಂಗಭೂಮಿಯಲ್ಲಿ ಸಕ್ರಿಯರಾಗಿದ್ದರು.
- 1953ರಲ್ಲಿ ಆಗಷ್ಟೆ ಮದುವೆಯಾಗಿದ್ದ ಮುತ್ತುರಾಜ್ ದಂಪತಿಗಳು ನಂಜನಗೂಡಿನಿಂದ ಮೈಸೂರಿಗೆ ಹೊರಡಲು ರೈಲ್ವೆ ನಿಲ್ದಾಣದಲ್ಲಿದ್ದರು. ಅದೇ ಸಮಯಕ್ಕೆ ಹೆಚ್.ಎಲ್.ಎನ್.ಸಿಂಹ ಕೂಡ ಮೈಸೂರಿಗೆ ಹೋಗಲು ಅಲ್ಲಿಗೆ ಬಂದಿದ್ದರು. ಅವರು ಮುತ್ತುರಾಜ್ರವರನ್ನು ಚಿಕ್ಕಂದಿನಿಂದ ನೋಡಿದ್ದರು. ಅಂದು ರೈಲ್ವೆ ನಿಲ್ದಾಣದಲ್ಲಿ ಆ ದಂಪತಿಗಳನ್ನು ಕಂಡು ಪ್ರೀತಿಯಿಂದ ಮಾತನಾಡಿಸಿ, ಯೋಗಕ್ಷೇಮ ವಿಚಾರಿಸಿದರು.
- ಸಿಂಹ ಕಣ್ಣಪ್ಪನ ಪಾತ್ರಕ್ಕೆ ಹೊಸ ನಟನನ್ನು ಹುಡುಕುತ್ತಿದ್ದ ಸಮಯ. ಅಂದು ಕಟ್ಟುಮಸ್ತಾದ ಆಳು ಮುತ್ತರಾಜ್ರವರನ್ನು ಕಂಡ ತಕ್ಷಣ "ಇವನನ್ನೇ ಕಣ್ಣಪ್ಪನಾಗಿ ಏಕೆ ಮಾಡಬಾರದು" ಎಂಬ ಭಾವನೆ ಮೂಡಿತ್ತು. ಮುತ್ತುರಾಜ್ ಬಳಿ ವಿಳಾಸವನ್ನು ಪಡೆದು, ದಂಪತಿಗಳಿಗೆ ಶುಭ ಕೋರಿ ಸಿಂಹ ಬೀಳ್ಕೊಟ್ಟಿದ್ದರು. ಮೇಲಿನ ಘಟನೆ ನಡೆದ ಕೆಲ ದಿನಗಳಲ್ಲಿ ಮೈಸೂರಿನ ಟೌನ್ಹಾಲಿನಲ್ಲಿ ಬೇಡರ ಕಣ್ಣಪ್ಪ ನಾಟಕ ಪ್ರದರ್ಶನವಿತ್ತು. ಅದರಲ್ಲಿ ಮುತ್ತುರಾಜ್ ಕಣ್ಣಪ್ಪನ ಪಾತ್ರ


ವಹಿಸುತ್ತಾರೆ ಎಂದು ಸಿಂಹರವರಿಗೆ ತಿಳಿಯಿತು. ಆ ದಿನ, ಅರ್ಧಗಂಟೆ ನಾಟಕ ನೋಡಿ, ಮುತ್ತುರಾಜ್ರವರ ತನ್ಮಯತೆಯ ಅಭಿನಯ ಕಂಡು ಸಿಂಹ ಸಂತೋಷ ಪಟ್ಟರು. ಗುಬ್ಬಿ ಕರ್ನಾಟಕ ಫಿಲಂಸ್ ನಿರ್ಮಿಸುತ್ತಿದ್ದ ಬೇಡರ ಕಣ್ಣಪ್ಪ ಚಿತ್ರದಲ್ಲಿನ ಕಣ್ಣಪ್ಪನ ಪಾತ್ರಕ್ಕೆ ಈತನೇ ಸರಿಯಾದ ವ್ಯಕ್ತಿ ಎಂದುಕೊಂಡು ನಿರ್ಮಾಪಕ ಎ.ವಿ.ಎಂ. ಚೆಟ್ಟಿಯಾರ್ ಅವರನ್ನು ಸಂಪರ್ಕಿಸಿ, ಆ ಚಿತ್ರದ ಸಹ ನಿರ್ಮಾಪಕರಾಗಿದ್ದ ಗುಬ್ಬಿ ವೀರಣ್ಣನವರಿಗೆ ಈ ವಿಷಯ ತಿಳಿಸಿ ಅವರನ್ನು ಒಪ್ಪಿಸಿದರು.

- ನಂತರ ಮುತ್ತುರಾಜ್ ಜಿ.ವಿ.ಅಯ್ಯರ್ ಹಾಗು ನರಸಿಂಹರಾಜು ಇವರುಗಳನ್ನು 'ಸ್ಕ್ರೀನ್ ಟೆಸ್ಟ್'ಗೆ ಮದರಾಸಿಗೆ ಬರಲು ಆಹ್ವಾನಿಸಿದರು.ನಿರ್ದೇಶಕ ಎಚ್.ಎಲ್.ಎನ್.ಸಿಂಹ ಅವರಿಂದ ಮುತ್ತುರಾಜ್ಗೆ–ರಾಜಕುಮಾರ್ ಎಂಬ ಹೊಸ ಹೆಸರಿನ ನಾಮಕರಣವಾಯಿತು. ರಾಜಕುಮಾರ್ ಬೇಡರ ಕಣ್ಣಪ್ಪ ಚಿತ್ರದ ನಾಯಕನಾಗಿ ಅಭಿನಯಿಸಿದರು.
- ಚಿತ್ರವು 1954ರ ಮೇ ತಿಂಗಳಲ್ಲಿ ಆಗಿನ ಮೈಸೂರು ರಾಜ್ಯದಲ್ಲಿ ಎಲ್ಲೆಡೆ ಬಿಡುಗಡೆಗೊಂಡಿತು. ಬೇಡರ ಕಣ್ಣಪ್ಪ ಚಿತ್ರ ರಾಷ್ಟ್ರಪ್ರಶಸ್ತಿ ಪಡೆದ ಪ್ರಥಮ ಚಿತ್ರವಾಗಿ ಕನ್ನಡ ಚಿತ್ರರಂಗದಲ್ಲಿಯೇ ಒಂದು ಮೈಲಿಗಲ್ಲಾಯಿತು. ಮದರಾಸು 'ಸ್ಕ್ರೀನ್ ಟೆಸ್ಟ್' ನೋಡಿದ ನಿರ್ಮಾಪಕ ಎ.ವಿ.ಎಂ.ಚೆಟ್ಟಿಯಾರ್ ಅವರು ಹೆಚ್.ಎಲ್.ಎನ್.ಸಿಂಹ ಅವರ ಬಳಿ ಹೋಗಿ " ಈ ಉದ್ದ ಮೂಗಿನ ಮತ್ತು ಹಲ್ಲು ಹುಬ್ಬು ಇರುವವರನ್ನು ಹಾಕಿಕೊಂಡು ಏನು ಚಿತ್ರ ಮಾಡುತ್ತೀಯ ಎಂದು ಕೇಳಿದ್ದರಂತೆ. ಆದರೆ ಹೆಚ್.ಎಲ್.ಎನ್.ಸಿಂಹ ಅವರು ನಿರ್ಮಾಪಕರಿಗೆ ಎ.ವಿ.ಎಂ.ಚೆಟ್ಟಿಯಾರ್, ಇವರೇ ಸರಿಯಾದ ವ್ಯಕ್ತಿಗಳು ಎಂದು ಹೇಳಿ ಒಪ್ಪಿಸಿದ್ದರು.

**ಕನ್ನಡ ರಂಗಭೂಮಿ ಮತ್ತು ಸಿನೆಮಾಕ್ಕೆ ಡಾ. ರಾಜ್ ಕೊಡುಗೆ (ಪಿ.ಹೆಚ್.ಡಿ ನಿಬಂಧ)**

- ಬೆಂಗಳೂರಿನ ಬಸವನಗುಡಿಯಲ್ಲಿರುವ ವಿಜಯ ಕಾಲೇಜಿನಲ್ಲಿ ಕನ್ನಡ ಉಪನ್ಯಾಸಕರಾದ ಡಿ. ಗುರುಮೂರ್ತಿ ಹಾರೋಹಳ್ಳಿ ಅವರು "ಕನ್ನಡ ರಂಗಭೂಮಿ ಮತ್ತು ಸಿನೆಮಾಕ್ಕೆ ಡಾ. ರಾಜ್ ಕೊಡುಗೆ" ಕುರಿತ ಸಂಶೋಧನಾತ್ಮಕ ಪ್ರಬಂಧ ಮಂಡಿಸಿ, ಮೈಸೂರು ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಪಡೆದಿದ್ದಾರೆ. ಈ ಸಂಶೋಧನೆಯ ಸಮಯದಲ್ಲಿ, ಡಾ. ರಾಜ್ ಅವರನ್ನು ಹಲವಾರು ಬಾರಿ ಸಂದರ್ಶಿಸಿದ್ದಾರೆ.
- 1997ರಲ್ಲಿ ಪ್ರಾರಂಭಿಸಿದ ಸಂಶೋಧನೆಯನ್ನು ನಾಲ್ಕುವರ್ಷಗಳ ಕಾಲ ಡಾ. ಮಳಲಿ ವಸಂತಕುಮಾರ್ ಅವರ ಮಾರ್ಗದರ್ಶನದಲ್ಲಿ ನಡೆಸಿದ ಗುರುಮೂರ್ತಿ 2001ರಲ್ಲಿ ಪಿ.ಹೆಚ್.ಡಿ ಪದವಿ ಪಡೆದರು. ॐ





# ಮುಸ್ಸಂಜೆ

ಹೆಕ್ಟರ್ ಹ್ಯೂ ಮುನ್ರೋ
ಅನುವಾದ. ಕೆ.ಆರ್.ಗಂಗಾಧರ

ಲಂಡನ್ ನಗರದ ಸುಂದರ ಹೈಡ್ ಪಾರ್ಕ್, ಸಂಜೆ ಗಂಟೆ ಸುಮಾರು 6.30, ಮುಸ್ಸಂಜೆಯ ಚಂದಿರನ ಕ್ಷೀಣ ಬೆಳಕು ಹಾಗೂ ಇಳಿ ಹೊತ್ತಿನ ಸಂಜೆಯ ಬೆಳಕಿನ ಮಿಶ್ರಣದ ವಾತಾವರಣ. ದೂರದ ಬೀದಿ ದೀಪಗಳಿಂದಲೂ ಒಂದಷ್ಟು ಬೆಳಕು ಹರಿದು ಬರುತ್ತಿತ್ತು. ಪಾರ್ಕ್ ನ ಮೂಲೆಯೊಂದರ ಬೆಂಚಿನಲ್ಲಿ ನಾರ್ಮನ್ ಗಾರ್ಟ್ಸಬಿ ಆಸೀನನಾಗಿದ್ದ. ಪಾರ್ಕ್ ನಲ್ಲಿ ಜನರ ಇರುವಿಕೆ ಕಡಿಮೆಯಿತ್ತು. ಅಲ್ಲಲ್ಲಿ ಒಂದಷ್ಟು ಜೀವನದಲ್ಲಿ ಸಾಕಷ್ಟು ಸೋತು ಹೋದಂತೆ ಕಾಣುತ್ತಿದ್ದ ಜನರು ಏಕಾಂಗಿಯಾಗಿ ಅತ್ತಿತ್ತ ತಿರುಗಾಡುತ್ತಾ, ಕೆಲವರು ಉಳಿದ ಬೆಂಚುಗಳಲ್ಲಿ ಆಸೀನರಾಗುತ್ತಾ ತಮ್ಮದೇ ಧ್ಯಾನಲೋಕದಲ್ಲಿ ತಲ್ಲೀನರಾಗಿದ್ದರು.

ನಾರ್ಮನ್ ಕುಳಿತಿದ್ದ ಬೆಂಚಿನ ಇನ್ನೊಂದು ಬದಿಯಲ್ಲಿ ಓರ್ವ ಹಿರಿಯ ವ್ಯಕ್ತಿ ಆಸೀನನಾಗಿದ್ದ. ಆತ ಜೀವನದಲ್ಲಿ ಸೋತು ಹೋದವನಂತೆ ಕಂಡರೂ ಸೋಲನ್ನು ಒಪ್ಪಿಕೊಳ್ಳಲು ನಿರಾಕರಿಸುವವನಂತೆ ಕಾಣುತ್ತಿದ್ದ. ಆತ ಮಾಸಿದ ಬಟ್ಟೆಗಳನ್ನು ಧರಿಸಿದ್ದ, ಅವುಗಳು ಹೊಸತೂ ಅಲ್ಲ, ಹಳತೂ ಅಲ್ಲ ಎಂಬಂತಿತ್ತು. ಸ್ವಲ್ಪ ಹೊತ್ತು ಕುಳಿತ ಆ ವ್ಯಕ್ತಿ ಅಲ್ಲಿಂದ ಎದ್ದು ಹೊರಟಿದ್ದ. ಆತನನ್ನು ಕಂಡಾಗ ಆತನ ಬಗ್ಗೆ ಆತನ ಮನೆಯಲ್ಲಾಗಲಿ, ಹೊರಗಡೆಯಲ್ಲಾಗಲಿ ಯಾರೂ ಕಾಳಜಿ ವಹಿಸುತ್ತಿಲ್ಲವೆಂದೇ ಅನಿಸುತಿತ್ತು. ಆತನ ಆಕೃತಿ ಆ ಮಂದ ಬೆಳಕಿನಲ್ಲಿ ನಿಧಾನವಾಗಿ ಕಣ್ಮರೆಯಾಗುತ್ತಾ ಇದ್ದ ಹಾಗೆ ತನ್ನ ಬೆಂಚಿನ ಇನ್ನೊಂದು ಕೊನೆಯನ್ನು ಇನ್ನೋರ್ವ ಯುವ ತರುಣನೊಬ್ಬ ಆಕ್ರಮಿಸಿದ್ದ. ಆತ ಚೆನ್ನಾಗಿ ಬಟ್ಟೆ ಬರೆ ಧರಿಸಿದ್ದರೂ ಆತನ ಮುಖ ಸಂತೋಷದಿಂದ ಇರುವಂತೆ ಕಾಣಲಿಲ್ಲ. ಆತ ಯಾವುದೋ ಗಾಢವಾದ ತೊಂದರೆಗೆ ಸಿಲುಕಿ ಬೇಸರಗೊಂಡಂತೆ ಕಂಡುಬಂದ. ಜೊತೆಗೆ ತನಗೆ ಕೇಳುವಂತೆ ಕೆಲವೊಂದು ಅಸಹನೆಯ ಮಾತುಗಳನ್ನು ಗೊಣಗುತ್ತಿದ್ದ.

ಆತನ ತೊಂದರೆಗಳಿಗೆ ಯಾರಾದರೂ ಒಂದಿಷ್ಟು ಅನುಕಂಪ ತೋರಿಸಬಹುದೆಂಬ ನಿರೀಕ್ಷೆಯಲ್ಲಿದ್ದ. ಆತನಲ್ಲಿ, ನೀನು ಯಾವುದೋ ತೊಂದರೆಯಲ್ಲಿ ಸಿಲುಕಿರಬೇಕಲ್ಲವೇ? ಎಂದು ನಾರ್ಮನ್ ಕೇಳಿದ. 'ನಾನು ಅನುಭವಿಸುತ್ತಿರುವ ತೊಂದರೆಯಲ್ಲಿ ನೀವು ಸಿಲುಕಿದ್ದರೂ ಕೂಡ ಮಾನಸಿಕ ಸಂತೋಷ ಹೊಂದಿರಲು ಸಾಧ್ಯವಿಲ್ಲ. ನಾನೊಂದು ನನ್ನ ಜೀವನದಲ್ಲಿ ಇಷ್ಟರ ತನಕ ಮಾಡದಂತಹ ಒಂದು ಕ್ಷುಲ್ಲಕ ತಪ್ಪು ಮಾಡಿಕೊಂಡೆ' ಎಂದ ಯುವಕ. ಕೆಲವೊಂದು ಬಾರಿ ಹೀಗಾಗುತ್ತೆ ಎಂದು ಹೇಳುತ್ತಾ ಆತನ ಬಗ್ಗೆ ನಾರ್ಮನ್ ಅಷ್ಟೊಂದು ಆಸಕ್ತಿ ತೋರಿಸಲಿಲ್ಲ.

ಈಗ ಯುವಕನೇ ತಾನು ಸಿಲುಕಿದ ತೊಂದರೆಯನ್ನು ವಿವರಿಸಲು ಆರಂಭಿಸಿದ. 'ನಾನು ಇಂದು ಅಪರಾಹ್ನ ಲಂಡನ್ ಗೆ ಬಂದಿದ್ದೆ. ಬರ್ಕ್ ಶಯರ್ ಚೌಕದಲ್ಲಿರುವ ಪೆಟಗಾನಿಯನ್ ಹೋಟೆಲಿನಲ್ಲಿ ಉಳಿದುಕೊಳ್ಳುವುದು ನನ್ನ ಉದ್ದೇಶವಾಗಿತ್ತು.ನಾನು ಅಲ್ಲಿಗೆ ಹೋದಾಗ ಅಲ್ಲಿ ಆ ಹೋಟೆಲನ್ನು ಮುರಿದು ಹಾಕಿ ಸಿನಿಮಾ ಥಿಯೇಟರ್ ಒಂದನ್ನು ನಿರ್ಮಾಣ ಮಾಡುತ್ತಿದ್ದರು. ನನ್ನನ್ನು ಅಲ್ಲಿಗೆ ಕರೆದೊಯ್ದ ಟಾಕ್ಸಿ ಚಾಲಕ ನನ್ನನ್ನು ಸ್ವಲ್ಪ ದೂರದಲ್ಲಿದ್ದ ಇನ್ನೊಂದು ಹೋಟೇಲಿಗೆ ಕರೆದೊಯ್ದ. ಆ ಹೋಟೆಲಿನಲ್ಲಿ ಕೊಠಡಿ ಪಡೆದುಕೊಂಡ ನಾವು ನನ್ನ ವಿಳಾಸವನ್ನು ನಮೂದಿಸಿ ನನ್ನ ಮನೆಗೊಂದು ಪತ್ರ ಬರೆದು ಆ ದಿನದ ಬಳಕೆಗೆ ಸೋಪ್ ಒಂದನ್ನು ಕೊಳ್ಳುವುದಕ್ಕಾಗಿ ಹೊರಗಡೆ ಪೇಟೆಗೆ ಬಂದೆ. ಮನೆಯಿಂದ ಹೊರಡುವಾಗ ಸೋಪನ್ನು ಬ್ಯಾಗಿನಲ್ಲಿ ಹಾಕಲು ಮರೆತಿದ್ದೆ. ಹೋಟೆಲಿನ ಸೋಪನ್ನು ಬಳಸುವುದನ್ನು ನಾನು ಇಷ್ಟ ಪಡುತ್ತಿರಲಿಲ್ಲ. ಹೊರಗಡೆ ಅಂಗಡಿಯೊಂದರಲ್ಲಿ ಸೋಪು ಕೊಂಡುಕೊಂಡ ನಾನು ಲಂಡನ್ ನಗರದಲ್ಲಿ ಒಂದಷ್ಟು ಸುತ್ತಾಡಿ, ಬಾರ್ ಒಂದರಲ್ಲಿ ಒಂದಷ್ಟು ಕುಡಿದು ನಾನು ತಂಗಿದ್ದ ಹೋಟೆಲಿಗೆ ಹಿಂದಿರುಗಬೇಕೆನ್ನುವಷ್ಟರಲ್ಲಿ ನಾನು ತಂಗಿದ್ದ ಹೋಟೆಲಿನ ವಿಳಾಸ ನನಗೆ ಮರೆತು ಹೋಗಿತ್ತು. ಲಂಡನ್ ನಗರಕ್ಕೆ ಹೊಸತಾಗಿ ಬಂದ ಹಾಗೂ ಲಂಡನ್ನಿನಲ್ಲಿ ಪರಿಚಯಸ್ಥರಾರು ಇಲ್ಲದ ನನಗೆ ಇದು ತುಂಬಾ ಇಕ್ಕಟ್ಟಿನ ಪರಿಸ್ಥಿತಿಯಾಗಿತ್ತು. ನಾನು ಉಳಿದುಕೊಂಡಿದ್ದ ಹೋಟೆಲಿನ ವಿಳಾಸ ನೀಡಿ ನನ್ನ ಮನೆಗೆ ಪತ್ರ ಬರೆದಿದ್ದೆ, ಆದರೆ ಅದು ತಲುಪುವುದು ಒಂದು ದಿನ ಕಳೆದ ಮೇಲಷ್ಟೆ ಆದುದರಿಂದ ಫೋನ್ ಮೂಲಕ ವಿಳಾಸ ಪಡೆಯಲು ಸಾಧ್ಯವಿರಲಿಲ್ಲ. ನಾನು ಹೋಟೆಲಿನಿಂದ ಹೊರಗೆ ಬರುವಾಗ ಹೆಚ್ಚಿನ ಹಣ ಕಿಸೆಗೆ ಹಾಕಿಕೊಂಡಿರಲಿಲ್ಲ. ಇದ್ದ ಹಣ ಸೋಪ್ ಮತ್ತು ಡ್ರಿಂಕ್ಸ್ ಗಾಗಿ ಖರ್ಚಾಗಿತ್ತು. ಈ ಪರಿಸ್ಥಿತಿಯಲ್ಲಿ ನಾನಿದ್ದೆ. ಈ ರಾತ್ರಿ ಎಲ್ಲಿ ತಂಗುವುದು ಎಂಬುವುದೇ ನನಗೆ ತಿಳಿಯುತ್ತಿಲ್ಲ'. ಇಷ್ಟು ಹೇಳುತ್ತಾ ಆ ಯುವಕ ಒಂದು ಅಸಹಾಯಕತೆಯ ನಿಟ್ಟುಸಿರು ಬಿಡುತ್ತಾನೆ. 'ಇದೊಂದು ಕಟ್ಟು ಕಥೆಯೆಂದು ನೀವು ತಿಳಿಯುವ ಸಾಧ್ಯತೆ ಇದೆ ಅಲ್ಲವೇ' ಎಂದು ನಾರ್ಮನ್ ಜೊತೆ ತನ್ನ ಸಂಕಷ್ಟವನ್ನು ಹೇಳಿಕೊಳ್ಳುತ್ತಾನೆ.

ತನಗೂ ಇಂತಹುದೇ ಒಂದು ಸನ್ನಿವೇಶ ವಿದೇಶದ ನಗರದಲ್ಲಿ ಉಂಟಾಗಿತ್ತು. ಆದರೆ ಆ ಹೋಟೆಲ್ ಕಾಲುವೆಯೊಂದರ ಪಕ್ಕದಲ್ಲಿದ್ದುದು ನೆನಪಿನಲ್ಲಿದ್ದುದರಿಂದ ಆ ಕಾಲುವೆಯ ಪಕ್ಕದಲ್ಲೆ ಚಲಿಸುತ್ತಾ ತನ್ನ ಹೋಟೆಲಿಗೆ ತಲುಪಲು ಸಾಧ್ಯವಾಯಿತೆಂದು ನಾರ್ಮನ್ ಹೇಳಿದಾಗ ಯುವಕ ಒಂದಿಷ್ಟು ಉಲ್ಲಸಿತನಾದ. ವಿದೇಶದ ನಗರವಾಗುತ್ತಿದ್ದರೆ ಪರವಾಗಿರಲಿಲ್ಲ. ನಮ್ಮನ್ನು ಕರೆಸಿಕೊಂಡವರ ಸಹಾಯ ಪಡೆಯಬಹುದಾಗಿತ್ತು. ಆದರೆ ಇಲ್ಲಿ ನನ್ನದೇ ನಾಡಿನಲ್ಲಿ ನಾನು ಪರಕೀಯನಾಗಿದ್ದೇನೆ. ನನ್ನ ಈ ತೊಂದರೆಯನ್ನು ಅರ್ಥೈಸಿಕೊಂಡು ನನಗೆ ಸಹಾಯ ಮಾಡುವ ಸಜ್ಜನನೊಬ್ಬ ಸಿಗುವ ತನಕ ನನಗೆ ಥೇಮ್ಸ್ ನದಿಯ ದಂಡೆಯೇ ಗತಿ ಎಂದು ತನ್ನನಿಸ್ಸಹಾಯಕತೆಯನ್ನು ತೋಡಿಕೊಳ್ಳುತ್ತಾ ನಾರ್ಮನ್ ನಿಂದ ಪರೋಕ್ಷವಾಗಿ ಸಹಾಯ ಬಯಸಿದ. ಹಾಗೂ ತಾನು ಬಯಸುತ್ತಿರುವ ಸಜ್ಜನ ಈ ನಾರ್ಮನ್ ಆಗಬಹುದೇ ಎಂಬ ನಿರೀಕ್ಷೆಯನ್ನು ಮನಸ್ಸಿನಲ್ಲೇ ಕಲ್ಪಿಸಿಕೊಂಡ.

'ನಿನ್ನ ಸಂಕಷ್ಟದ ಕಥೆಯೇನೋ ನಂಬುವಂತಿದೆ. ಆದರೆ ನಿನ್ನ ಕಥೆಯ ಲೋಪವೇನೆಂದರೆ ನೀನು ಕೊಂಡುಕೊಂಡ ಸೋಪನ್ನು ನನಗೆ ತೋರಿಸದೇ ಇರುವುದು' ಎಂದು ನಾರ್ಮನ್ ಅಂದಾಗ ಯುವಕ ಕುಳಿತಲ್ಲಿಂದಲೇ ಸ್ವಲ್ಪ ಮುಂದಕ್ಕೆ ಜರುಗಿ ತನ್ನ ಓವರ್ ಕೋಟಿನ ಪಾಕೆಟ್ ಗಳಲ್ಲಿ ತಡಕಾಡಿ ಅದು ಸಿಗದಿದ್ದಾಗ ತಕ್ಷಣ ಎದ್ದುನಿಂತು ಅದನ್ನು ನಾನೆಲ್ಲೋ ಕಳೆದುಕೊಂಡಿರಬೇಕು ಎಂದ. ಹೋಟೆಲ್ ವಿಳಾಸವನ್ನು ಹಾಗೂ ಕೊಂಡುಕೊಂಡ ಸೋಪು ಹೀಗೆ ಎರಡನ್ನು ಒಂದೇ ಹೊತ್ತಿನಲ್ಲಿ ಕಳೆದುಕೊಳ್ಳುವುದು ನಿನ್ನ ಬೇಜವಾಬ್ದಾರಿತನವನ್ನು ತೋರಿಸುತ್ತದೆ ಎಂದು ನಾರ್ಮನ್ ಹೇಳಿದಾಗ ಆ ಯುವಕ ಒಂದು ರೀತಿಯ ಸಿಟ್ಟು ಹಾಗೂ ಜಂಬವನ್ನು ವ್ಯಕ್ತಪಡಿಸುತ್ತಾ ಅಲ್ಲಿಂದ ಕಾಲ್ಕಿತ್ತ. ಸೋಪು ಕೊಂಡುಕೊಳ್ಳಲು

ಹೋಟೆಲಿನಿಂದ ಹೊರಗಡೆ ಬಂದೆ ಎಂಬ ವಿಚಾರ ಕಥೆಯ ಒಂದು ನಂಬುವಂತಹ ಸನ್ನಿವೇಶವಾದರೂ ಆತ ಒಂದು ಸೋಪನ್ನು ಆ ಕಥೆಗೆ ಪೂರಕವಾಗುವಂತೆ ತೋರಿಸುತ್ತಿದ್ದರೆ ಆತ ಈ ವೃತ್ತಿಯಲ್ಲಿ ಖಂಡಿತಾ ನಿಷ್ಠಾವಂತ ಎನಿಸಿಕೊಳ್ಳುತ್ತಿದ್ದ ಎಂದು ನಾರ್ಮನ್ಗೆ ಅನಿಸಿತು. ಇಂತಹ ವೃತ್ತಿಯಲ್ಲಿ ಬುದ್ಧಿವಂತಿಕೆಯ ಜೊತೆ ಸಾಕಷ್ಟು ಸಾಂದರ್ಭಿಕ ಮುನ್ನೆಚ್ಚರಿಕೆಗಳನ್ನು ತೆಗೆದುಕೊಂಡರೆ ಮಾತ್ರ ಆತ ಯಶಸ್ವಿಯಾಗಬಲ್ಲ ಎಂದು ನಾರ್ಮನ್ಗೆ ಅನಿಸಿತ್ತು.

ಈ ಯೋಚನೆಗಳೊಂದಿಗೆ ನಾರ್ಮನ್ ತಾನು ಕುಳಿತ ಬೆಂಚಿನಿಂದ ಎದ್ದು ನಿಂತಾಗ ಆತನಿಗೊಂದು ಆಶ್ಚರ್ಯ ಕಾದಿತ್ತು. ಆ ಯುವಕ ಕುಳಿತಲ್ಲೇ ಕೆಳಗೆ ಒಂದು ಹೊಸ ಸೋಪು ಪ್ಯಾಕೇಟ್ ಬಿದ್ದಿರುವುದು ಗಮನಿಸಿದ. ಖಂಡಿತಾ ಇದು ಯುವಕನ ಓವರ್ ಕೋಟ್ ಪಾಕೇಟ್ ನಿಂದಲೇ ಬಿದ್ದಿರಬೇಕು. ಯುವಕನ ಸಂಕಷ್ಟದ ಕಥೆಯನ್ನು ಈಗ ಸಂಪೂರ್ಣವಾಗಿ ನಂಬಿದ ನಾರ್ಮನ್ ತಕ್ಷಣ ಆ ಯುವಕನ ಹುಡುಕಾಟಕ್ಕಾಗಿ ಆತ ಅಲ್ಲಿಂದ ತೆರಳಿದ ದಿಕ್ಕಿನತ್ತ ವೇಗವಾಗಿ ಹೆಜ್ಜೆ ಹಾಕಿದ. ಆ ರಸ್ತೆಯ ಕೊನೆಯಲ್ಲಿ ಯಾವುದೋ ಅನಿಶ್ಚಿತ ಭಾವನೆಯೊಂದಿಗೆ ಆ ಯುವಕ ನಿಂತಿದ್ದ. ನಾರ್ಮನ್ ಆತನನ್ನು ಕರೆದಾಗ ಯಾವುದೋ ಒಂದು ಪಂಥಾಹ್ವಾನದ ಮುಖಚರ್ಯೆಯೊಂದಿಗೆ ತೀಕ್ಷ್ಣವಾಗಿ ನಾರ್ಮನ್ ನನ್ನು ದಿಟ್ಟಿಸಿ ನೋಡುತ್ತಾನೆ. ಆತನಿಗೆ ಈ ಸೋಪು ಪ್ಯಾಕೆಟನ್ನು ತೋರಿಸುತ್ತಾ, ನಿನ್ನ ಕಥೆಯ ಪ್ರಾಮುಖ್ಯವಾದ ಸಾಕ್ಷಿ ಇಲ್ಲಿದೆ ನಿಸ್ಸಂಶಯವಾಗಿ ಅದು ನಿನ್ನ ಓವರ್ ಕೋಟ್ ಪ್ಯಾಕೆಟ್ ನಿಂದ ಬಿದ್ದಿರಬೇಕು. ನನ್ನ ಹಿಂದಿನ ಅಪನಂಬಿಕೆಗಾಗಿ ದಯವಿಟ್ಟು ಕ್ಷಮಿಸು ಎನ್ನುತ್ತಾ ನಾರ್ಮನ್ ಒಂದು ಸಾವರಿನ್ ನಾಣ್ಯವನ್ನು ಅವನ ಮುಂದೆ ಹಿಡಿಯುತ್ತಾನೆ. ಆ ಯುವಕ ಆ ನಾಣ್ಯವನ್ನು ತಕ್ಷಣ ತೆಗೆದುಕೊಂಡು ತನ್ನ ಪಾಕೇಟಿಗೆ ಇಳಿಸಿದ. ಈ ಮೊತ್ತವನ್ನು ಈ ವಾರದಲ್ಲಿ ಯಾವಾಗ ಬೇಕಾದರೂ ಹಿಂದಿರುಗಿಸು ಎನ್ನುತ್ತಾ ತನ್ನ ವಿಸಿಟಿಂಗ್ ಕಾರ್ಡನ್ನು ಹಾಗೂ ಆ ಸೋಪು ಪ್ಯಾಕೆಟನ್ನು ಆತನಿಗೆ ನೀಡುತ್ತಾನೆ. ನನ್ನ ಅದೃಷ್ಟ ಚೆನ್ನಾಗಿದೆ, ಆ ಸೋಪು ಪ್ಯಾಕೇಟ್ ಕೊನೆಗೂ ನಿಮಗೆ ಸಿಕ್ಕಿ ನನ್ನನ್ನು ನಂಬುವಂತಾಯಿತಲ್ಲಾ ಎನ್ನುತ್ತಾ ಒಂದೆರಡು ಕೃತಜ್ಞತೆಯ ಮಾತುಗಳನ್ನಾಡುತ್ತಾ ಆತ ಅಲ್ಲಿಂದ ಸರಿದು ಹೋದ.

ಬಡಪಾಯಿ, ಆತ ಕೂಗುವ ಹಂತದಲ್ಲಿದ್ದ, ಆತನಿಗೆ ನನ್ನ ಸಹಾಯ ಒಂದಿಷ್ಟು ನೆಮ್ಮದಿಯನ್ನು ತಂದಿರಬಹುದು. ತಾನೂ ಮುಂದಿನ ದಿನಗಳಲ್ಲಿ ಸನ್ನಿವೇಶವನ್ನು ಅರ್ಥೈಸಿಕೊಳ್ಳುವುದರಲ್ಲಿ ಜಾಗರೂಕನಾಗಿರಬೇಕು. ಇದು ನನಗೆ ಒಂದು ಪಾಠ ಅನ್ನುತ್ತಾ ನಾರ್ಮನ್ ಮತ್ತೆ ಹೈಡ್ ಪಾರ್ಕಿನತ್ತ ಹೆಜ್ಜೆ ಹಾಕಿ ತಾನು ಕುಳಿತ ಬೆಂಚಿನ ಬಳಿಗೆ ಬಂದಾಗ, ಈ ಯುವಕನಿಂದ ಮೊದಲು ಆ ಬೆಂಚಿನ ಇನ್ನೊಂದು ಬದಿಯಲ್ಲಿ ಕೂತು ತೆರಳಿದ್ದ ಆ ಹಿರಿಯ ವ್ಯಕ್ತಿ ಆ ಅರೆ ಬರೆ ಬೆಳಕಿನಲ್ಲಿ ಏನನ್ನೋ ಹುಡುಕುತ್ತಿದ್ದಂತೆ ಕಂಡುಬಂತು. ತಾವೇನಾದರೂ ಕಳೆದುಕೊಂಡಿದ್ದೀರಾ ಸರ್ ಎಂದು ಅವರಲ್ಲಿ ನಾರ್ಮನ್ ಕೇಳಿದಾಗ, ಹೌದು ಸರ್ ಒಂದು ಸೋಪು ಪೊಟ್ಟಣ ಎಂದರು.

[ಬರ್ಮಾದಲ್ಲಿ ಜನಿಸಿ, ಇಂಗ್ಲೆಂಡಿನಲ್ಲಿ ಬೆಳೆದ ಹೆಕ್ಟರ್ ಹೂ ಮುನ್ರೋ ದ್ವಿತೀಯ ವಿಶ್ವಸಮರದಲ್ಲಿ ಮಡಿಯುವ ಮುನ್ನ ಅನೇಕ ಸಣ್ಣ ಕಥೆಗಳನ್ನು ಬರೆದ. ಹಾಗೆ ಬರೆದ ಆಣಾಇ ಎಂಬ ಕಥೆಯ ಕನ್ನಡಾನುವಾದ] ॐ

### ವಿಶ್ವದ ಆರೋಗ್ಯ ಸಮಸ್ಯೆಗಳ ಬಗ್ಗೆ ಗಮನ ಸೆಳೆಯುವ

# ವಿಶ್ವ ಆರೋಗ್ಯ ದಿನ



ಪ್ರತಿ ಏಪ್ರಿಲ್ 7 ರಂದು, ವಿಶ್ವ ಆರೋಗ್ಯ ಸಂಸ್ಥೆಯು ಯೋಗಕ್ಷೇಮ ಮತ್ತು ವೈದ್ಯಕೀಯ ಜಗತ್ತಿನಲ್ಲಿ ಪ್ರಸ್ತುತವಿರುವ ಒಂದು ವಿಶೇಷ ವಿಷಯವನ್ನು ಹೈಲೈಟ್ ಮಾಡಲು ಆಯ್ಕೆ ಮಾಡುತ್ತದೆ. ಮಾನಸಿಕ ಆರೋಗ್ಯದಿಂದ ವಿಮೆಯವರೆಗೆ ಮತ್ತು ಅವುಗಳ ನಡುವಿನ ಎಲ್ಲದರವರೆಗೆ, ಈ ದಿನವು ವಿಶ್ವ ವೇದಿಕೆಯಲ್ಲಿ ಏನಾಗಲಿದೆ ಎಂಬುದರ ಧ್ಯೇಯವಾಕ್ಯವನ್ನು ಹೊಂದಿಸುತ್ತದೆ. ಈ ವರ್ಷದ ವಿಶ್ವ ಆರೋಗ್ಯ ದಿನವು ದಾದಿಯರು ಮತ್ತು ಶುಶ್ರೂಷಕಿಯರ ಮೇಲೆ ಬೆಳಕು ಚೆಲ್ಲುತ್ತದೆ, ಅವರು ಇಂದು ನಮಗೆ ತಿಳಿದಿರುವಂತೆ ಆರೋಗ್ಯ ರಕ್ಷಣಾ ಉದ್ಯಮದಲ್ಲಿ ಕ್ರಾಂತಿಯನ್ನುಂಟು ಮಾಡಿದ ನಿರಂತರ, ಅವಿಶ್ರಾಂತ ಕಾರ್ಯಪಡೆಯ ಮೇಲೆ ಬೆಳಕು ಚೆಲ್ಲುತ್ತಾರೆ.

**ವಿಶ್ವ ಆರೋಗ್ಯ ದಿನದ ಆಚರಣೆ:** ಈ ಆಚರಣೆಯಲ್ಲಿ ಆಯಾ ಸರ್ಕಾರೇತರ ಸಂಸ್ಥೆಗಳು (ಎನ್.ಜಿ.ಓ), ಲಾಭರಹಿತ ಕಾರ್ಯನಿರ್ವಹಿಸುವ ಸಂಸ್ಥೆಗಳು ಭಾಗವಹಿಸಿ ಕಾರ್ಯಕ್ರಮಗಳ ಯಶಸ್ವಿಗೆ ಸಹಕರಿಸುತ್ತವೆ. ಸಾರ್ವಜನಿಕರಿಗೆ ಆರೋಗ್ಯ ಮತ್ತು ವಿವಿಧ ಕೆಡುಕುಗಳ ಬಗ್ಗೆ ಮಾಹಿತಿ ಮತ್ತು ಮಾರ್ಗದರ್ಶನ ನೀಡಲಾಗುತ್ತದೆ. ಇದರಲ್ಲಿ ಭಾಗವಹಿಸುವ ಸಂಸ್ಥೆಗಳು ವಿವಿಧ ಮಾಧ್ಯಮಗಳ ಮೂಲಕ ವ್ಯಾಪಕ ಪ್ರಚಾರ ನೀಡಿ ಹೆಚ್ಚು ಹೆಚ್ಚು ಜನರಿಗೆ ಈ ಮಾಹಿತಿ ಲಭ್ಯವಾಗಲು ನೆರವಾಗುತ್ತವೆ.

ಹೆಚ್ಚಿನವರಿಗೆ ಇದೊಂದು ದುಂದುವೆಚ್ಚದ ಮತ್ತು ಪ್ರಚಾರಕ್ಕಾಗಿ ಮಾಡಿರುವ ಕಾರ್ಯಕ್ರಮವೆಂದೇ ದೂರದಿಂದ ತೋರುತ್ತದೆ. ಆದರೆ ವಾಸ್ತವವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುರವರೆಲ್ಲಾ ಕೇವಲ ಸೇವಾಮನೋಭಾವನೆ ಮತ್ತು ಕೃತಾರ್ಥತೆ ಅನುಭವಿಸುವ ನಿಟ್ಟಿನಲ್ಲಿ ತಮ್ಮ ಕರ್ತವ್ಯವನ್ನು ನಿಭಾಯಿಸುತ್ತಾರೆ. ಅರಿವಿಲ್ಲದೇ ಜನತೆ ಆಚರಿಸುತ್ತಾ ಬಂದಿರುವ ಅನಾರೋಗ್ಯಕರ ಮತ್ತು ಪಿಡುಗುಗಳ ಬಗ್ಗೆ ಮಾಹಿತಿ ನೀಡಿ ಜನರನ್ನು ಸರಿದಾರಿಗೆ ತರಲು ಪ್ರಯತ್ನಪಡುತ್ತಾರೆ. ಕಾಲಕಾಲಕ್ಕೆ ತೆಗೆದುಕೊಳ್ಳಬೇಕಾದ ಔಷಧಿ, ಕಾಪಾಡಬೇಕಾದ ನೈರ್ಮಲ್ಯ, ಸ್ವಚ್ಛತಾ ಅಭ್ಯಾಸಗಳು, ನೀರಿನ ದುಂದುವೆಚ್ಚ, ಪರಿಸರದ ಸ್ವಚ್ಛತೆ, ಮೊದಲಾದ ವಿಷಯಗಳ ಬಗ್ಗೆ ಕಾಳಜಿವಹಿಸುವ ಮಾಹಿತಿಯನ್ನು ನೀಡುತ್ತಾರೆ. ಇದರಿಂದ ಸಮಾಜದ ಆರೋಗ್ಯ ಉತ್ತಮಗೊಳ್ಳುತ್ತದೆ. ಆರೋಗ್ಯಕರ ಸಮಾಜ, ದೇಶದ ಶಕ್ತಿಯಾಗುತ್ತದೆ.

**ವಿಶ್ವ ಆರೋಗ್ಯ ದಿನದ ಇತಿಹಾಸ**

ವಿಶ್ವ ಆರೋಗ್ಯ ದಿನದ ಬಗ್ಗೆ ಮಾತನಾಡಲು, ನಾವು ಒಟ್ಟಾರೆಯಾಗಿ ವಿಶ್ವ ಆರೋಗ್ಯ ಸಂಸ್ಥೆಯ ರಚನೆಯ ಬಗ್ಗೆ ಮಾತನಾಡಬೇಕು. ಡಿಸೆಂಬರ್ 1945 ರಲ್ಲಿ, ಬ್ರೆಜಿಲ್ ಮತ್ತು ಚೀನಾದ ಅಧಿಕಾರಿಗಳು ಅಂತರರಾಷ್ಟ್ರೀಯ ಆರೋಗ್ಯ ಸಂಸ್ಥೆಯ ರಚನೆಯನ್ನು ಪ್ರಸ್ತಾಪಿಸಿದರು, ಅದು ಸರ್ವವ್ಯಾಪಿ ಮತ್ತು ಯಾವುದೇ ಸರ್ಕಾರಿ ಅಧಿಕಾರಗಳಿಂದ ಸಂಪೂರ್ಣವಾಗಿ ಸ್ವತಂತ್ರವಾಗಿದೆ.

ಅರ್ಧ ವರ್ಷದ ನಂತರ, ನ್ಯೂಯಾರ್ಕ್‌ನಲ್ಲಿ, ಜುಲೈ 1946 ರಲ್ಲಿ, ವಿಶ್ವ ಆರೋಗ್ಯ ಸಂಸ್ಥೆಯ ಸಂವಿಧಾನವನ್ನು ಅಂಗೀಕರಿಸಲಾಯಿತು. ಈ ಸಂವಿಧಾನವು ಏಪ್ರಿಲ್ 7, 1948 ರಂದು ಜಾರಿಗೆ ಬಂದಿತು, 61 ದೇಶಗಳು NGO ಸ್ಥಾಪನೆಗೆ ಒಪ್ಪಂದಕ್ಕೆ ಸಹಿ ಹಾಕಿದವು.

WHO ಯ ಮೊದಲ ಅಧಿಕೃತ ಕಾರ್ಯಗಳಲ್ಲಿ ಒಂದಾಗಿ, ಅವರು ವಿಶ್ವ ಆರೋಗ್ಯ ದಿನದ ಆಚರಣೆಯನ್ನು ರಚಿಸಿದರು. ಇದನ್ನು ಮೊದಲು ಜುಲೈ 22, 1949 ರಂದು ಆಚರಿಸಲಾಯಿತು, ಆದರೆ ನಂತರ ವಿದ್ಯಾರ್ಥಿಗಳ ಭಾಗವಹಿಸುವಿಕೆಯನ್ನು ಉತ್ತೇಜಿಸಲು ದಿನಾಂಕವನ್ನು WHO ಸ್ಥಾಪನೆಯಾದ ಏಪ್ರಿಲ್ 7 ಕ್ಕೆ ಬದಲಾಯಿಸಲಾಯಿತು. 1950 ರಿಂದ, ವರ್ತ್ ಹೆಲ್ತ್ ಡೇ ಪ್ರತಿ ವರ್ಷವೂ ಸದಸ್ಯ ಸರ್ಕಾರಗಳು ಮತ್ತು ಸಿಬ್ಬಂದಿಗಳ ಸಲಹೆಗಳ ಆಧಾರದ ಮೇಲೆ ಪ್ರಸ್ತುತ WHO ಮಹಾನಿರ್ದೇಶಕರು ಆಯ್ಕೆ ಮಾಡಿದ ವಿಭಿನ್ನ ಥೀಮ್ ಮತ್ತು ಥೀಮ್ ಅನ್ನು ಬಳಸುತ್ತದೆ.

ವಿಶ್ವ ಆರೋಗ್ಯ ದಿನವು ಅಂತರರಾಷ್ಟ್ರೀಯ ಸಮುದಾಯದ ಮೇಲೆ ಪರಿಣಾಮ ಬೀರುವ ಪ್ರಮುಖ ಸಾರ್ವಜನಿಕ ಆರೋಗ್ಯ ಸಮಸ್ಯೆಗಳ ಮೇಲೆ ಗಮನ ಕೇಂದ್ರೀಕರಿಸಲು ಜಾಗತಿಕ ಅವಕಾಶವನ್ನು ಒದಗಿಸುತ್ತದೆ. ವಿಶ್ವ ಆರೋಗ್ಯ ದಿನದ ಸಂದರ್ಭದಲ್ಲಿ, ಏಪ್ರಿಲ್ 7 ರ ನಂತರ ದೀರ್ಘಕಾಲದವರೆಗೆ ಮುಂದುವರಿಯುವ ಪ್ರಚಾರ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುತ್ತದೆ.

2020 ರ ವಿಶ್ವ ಆರೋಗ್ಯ ದಿನವು ಪ್ರಪಂಚದಾದ್ಯಂತ ಆರೋಗ್ಯ ಸೇವೆ ಒದಗಿಸುವಲ್ಲಿ ದಾದಿಯರು ಮತ್ತು ಶುಶ್ರೂಷಕಿಯರು ವಹಿಸಿರುವ ಪ್ರಮುಖ ಪಾತ್ರದ ಮೇಲೆ ಬೆಳಕು ಚೆಲ್ಲುತ್ತದೆ. ವಿಶ್ವದಾದ್ಯಂತ ವಕಾಲತ್ತು ಕಾರ್ಯಕ್ರಮಗಳು ನಡೆಯಲಿದ್ದು, ನರ್ಸರಿ ಕಾರ್ಯಪಡೆಯ ಕೊಡುಗೆಗಳನ್ನು ಅತ್ಯುತ್ತಮವಾಗಿಸಲು ಯೋಜನೆಯನ್ನು ಒದಗಿಸುವ ವಿಶ್ವದ ಮೊದಲ ಸ್ಟೇಟ್ ಆಫ್ ದಿ ವರ್ಲ್ಡ್ ನರ್ಸಿಂಗ್ ವರದಿಯನ್ನು ಬಿಡುಗಡೆ ಮಾಡಲಾಗುವುದು, 2021 ರಲ್ಲಿ ಮಿಡ್ವೈಫರಿ ಕಾರ್ಯಪಡೆಯ ಕುರಿತು ಇದೇ ರೀತಿಯ ವರದಿಯನ್ನು ಮಾಡಲಾಗುವುದು.

**ವಿಶ್ವ ಆರೋಗ್ಯ ದಿನದ ಮಹತ್ವ:** ವಿಶ್ವ ಆರೋಗ್ಯ ದಿನದ ಮಹತ್ವವು ಆರೋಗ್ಯವನ್ನು ಮಾನವ ಜೀವನದ ಆಧಾರವಾಗಿ ಪರಿಗಣಿಸುವುದರಲ್ಲಿದೆ. ಈ ದಿನವು ಆರೋಗ್ಯವು ಕೇವಲ ರೋಗದ ಅನುಪಸ್ಥಿತಿಯಲ್ಲ, ಆದರೆ ಅದು ದೈಹಿಕವಾಗಿ, ಮಾನಸಿಕವಾಗಿ ಮತ್ತು ಸಾಮಾಜಿಕವಾಗಿ ಆರೋಗ್ಯವಾಗಿರುವುದನ್ನು ನೆನಪಿಸುತ್ತದೆ. ವಿವಿಧ ಆರೋಗ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವು ಒಂದು ಪ್ರಮುಖ ಅವಕಾಶವನ್ನು ಒದಗಿಸುತ್ತದೆ. ಈ ದಿನವು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಜನರನ್ನು ಪ್ರೇರೇಪಿಸುತ್ತದೆ.

### ವಿಶ್ವ ಆರೋಗ್ಯ ದಿನದ ಉದ್ದೇಶಗಳು:

- ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವ ಕ್ರಮಗಳ ಬಗ್ಗೆ ಮುನ್ನೆಚ್ಚರಿಕೆ ವಹಿಸುವುದು  ಸೂಕ್ತ ಕಾಲಕ್ಕೆ ನೀಡಬೇಕಾದ ಆರೋಗ್ಯ ಸೇವೆಗೆ ಪ್ರಾಮುಖ್ಯತೆ ನೀಡುವುದು
- ಪರಿಸರದ ಸ್ವಚ್ಛತೆ ಹಾಗೂ ರಕ್ಷಣಾ ಕ್ರಮಗಳು
- ವಿವಿಧ ರೋಗಗಳಿಗೆ ತುತ್ತಾಗುವ ಕಾರಣಗಳು ಹಾಗೂ ಅವುಗಳನ್ನು ತಡೆಗಟ್ಟುವ ಮುಂಜಾಗ್ರತಾ ಕ್ರಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು
- ದುಶ್ಚಟಗಳಿಂದ ದೂರವಿರಿಸುವ ಕ್ರಮಗಳು ಹಾಗೂ ಅದರಿಂದಾಗುವ ಪರಿಣಾಮಗಳ ಬಗ್ಗೆ ತಿಳುವಳಿಕೆ ನೀಡುವುದು ॐ

**ಮನೆ ಮದ್ದು :**

ಕೀಲುಗಳಲ್ಲಿ ನೋವು ಆದಾಗ ಆ ಸ್ಥಳಕ್ಕೆ ಸುಣ್ಣ ಮತ್ತು ಜೇನುತುಪ್ಪವನ್ನು ಬೆರೆಸಿ ಹಚ್ಚಿದರೆ ಶೀಘ್ರವೇ ನೋವು ಕುಂಠಿತಗೊಳ್ಳುವುದು.

# ಮುಂದೂಡಿಕೆ ಮನೋಭಾವ!

ಕೆ.ಸಿ. ಶಿವಪ್ಪ

'ನಾಳೆ' ಎಂದ ಕೆಲಸ ಹಾಳು! ಇಂಥ ಮನೋಭಾವನೆಗೆ ಕಾರಣ ನಮ್ಮ ಆಲಸ್ಯ ಹೇಗೋ ಮುಂದೂಡಿದರೆ ಆಯಿತು, ಹೊತ್ತು ಆರಾಮಾಗಿ ಇರಬಹುದು.ಏಕೆ ಸಲ್ಲದ ತಲೆನೋವು? ಈ ತೆರೆದ ಅನಿಸಿಕೆ ಮೊದಲೇ ಸೋಮಾರಿ ಮನಸ್ಸಿನ ಸಸಿಗೆ ತಣ್ಣನೆಯ ನೀರರೆಯುತ್ತದೆ.

ಎಷ್ಟೋ ಸಲ ಈ ಮುಂದೂಡಿಕೆ ಮನೋಭಾವ ಪಶ್ಚಾತ್ತಾಪಕ್ಕೆ ಎಡೆಮಾಡಿಕೊಡುತ್ತದೆ. ಆಪ್ತರೊಬ್ಬರು ಆಸ್ಪತ್ರೆ ಸೇರಿದ್ದಾರೆ, ಚಿಂತಾಜನಕ ಸ್ಥಿತಿ, ತಕ್ಷಣ ಹೋಗಿ ನೋಡಬೇಕೆಂಬ ಮನಸ್ಸೇನೋ ಇದೆ, ನಿಜ,ಆದರೆ, ನಾಳೆ ಹೋದರಾಯಿತು ಎನ್ನುವ ಸೋಮಾರಿತನ ಸುಳಿಯುತ್ತದೆ. ಎನ್ನಿ, ಒಂದು ವೇಳೆ ಆ ಆಪ್ತರು ನಿಧನರಾಗುತ್ತಾರೆ ಎಂದುಕೊಳ್ಳೋಣ. ಆಗ ನಮ್ಮ ಮನಸ್ಸಿಗಾಗುವ ನೋವು ಅಪಾರ. ಇದಕ್ಕೇಕೆ ನಾವು ಆಸ್ಪದ ನೀಡಬೇಕು?

ಯಾರೋ ಬೇಕಾದವರೋಬ್ಬರು ತುಂಬ ಕಷ್ಟದಲ್ಲಿದ್ದಾರೆ. ಸಕಾಲಕ್ಕೆ ನೆರವು ಅವರಿಗೆ ಸಾಂತ್ವನ ತರಬಲ್ಲದು. ಆ ಸಮಯದಲ್ಲಿ ನಾವು ಯಾವುದೇ ನೆರವು ನೀಡದೆ ಹೋದರೆ, ಆಮೇಲೆ ನೋಡೋಣ' ಎಂಬ ತೀರ್ಮಾನ ಕೈಗೊಂಡರೆ, ಅದು ಮಾರಕ ಪರಿಣಾಮಕ್ಕೆಡೆಮಾಡಬಹುದು. ಇದೆಲ್ಲ ಸೋಮಾರಿತನದಿಂದಾಗುವ ಕೇಡುಗಳು.

ಇಷ್ಟಾಗಿ ಇಂದು ನಮದು, ನಾಳೆ ಏನೋ! ಏನಾದರೂ ಸಹಾಯ ಮಾಡಬೇಕು, ಆದಷ್ಟು ಒಳ್ಳೆಯದನ್ನು ಮಾಡಬೇಕು, ಪರೋಪಕಾರದಲ್ಲಿ ಪಾಲ್ಗೊಳ್ಳಬೇಕು, ಒಂದಿಷ್ಟು ಇತರರ ಕಣ್ಣೀರನ್ನೊರಸಬೇಕು, ಇನ್ನೊಬ್ಬರ ಮೊಗದಲ್ಲಿ ಆದಷ್ಟು ಮುಗುಳ್ನಗೆ ತರುವ ಪ್ರಯತ್ನ ಮಾಡಬೇಕು – ಈ ಬಗೆಯ ಸದ್ಭಾವಗಳು ನಮ್ಮ ಮನವನ್ನಾಕ್ರಮಿಸಿದಾಗ, ನಾವು ಸುಸಂಸ್ಕೃತರಾಗುತ್ತೇವೆ. ನಮ್ಮ ಸಂತೋಷ ನಮಗರಿವಿಲ್ಲದ ನೂರ್ಮಡಿಯಾಗುತ್ತದೆ. ಒಬ್ಬರಿಗೆ ಒಳತನ್ನು ಮಾಡಿ, ಆಗ ಆನಂದ ನಿಮ್ಮದಾಗುತ್ತದೆ. ಒಬ್ಬರಿಗೆ ಕೆಡಕು ಮಾಡಿ, ಆಗ ಅವ್ಯಕ್ತ ಮಾನಸಿಕ ವೇದನೆ ನಿಮ್ಮನ್ನು ಸದಾ ಕಾಡುತ್ತಿರುತ್ತದೆ.

ಯಾರು ಏನೇ ಹೇಳಲಿ, ಬಿಡಲಿ – ನಮ್ಮ ಆತ್ಮ ಸಾಕ್ಷಿಗೆ ಸಮನಾದದ್ದು ಬೇರೊಂದಿಲ್ಲ, ಈ ಆತ್ಮಸಾಕ್ಷಿ ನಮ್ಮ ಒಪ್ಪುತಪ್ಪುಗಳ, ನೋವುನಲಿವುಗಳ ನಿಜವಾದ ಮಾನಕ, ಮೌಲ್ಯಮಾಪನ, ಎಲ್ಲಿಯತನಕ ಇದು ಕೈಬಿಡುವುದಿಲ್ಲವೊ,ಅಲ್ಲಿಯ ತನಕ ಕೇಮ. ॐ

**ಸಂಪ್ರೀತಿ ಸಮೃದ್ಧಿ** ಮಾಸ ಪತ್ರಿಕೆ

#66, ಸಂಪ್ರೀತಿ – ಸದನ, ಸರ್ಕಾರಿ ಆಸ್ಪತ್ರೆ ಪಕ್ಕದ ರಸ್ತೆ, ಮಾಗಡಿ ಟೌನ್, ಬೆಂಗಳೂರು ದಕ್ಷಿಣ ಜಿಲ್ಲೆ - 562 120

ದೂರವಾಣಿ : 8971608213. ಇ–ಮೇಲ್ : **sampreethisamruddhi@gmail.com**

**ಪತ್ರಿಕೆಯ ಚಂದಾವಿವರ**

10 ವರ್ಷಕ್ಕೆ ರೂ. 2000/– (ಎರಡು ಸಾವಿರ ರೂಗಳು),
05 ವರ್ಷಕ್ಕೆ ರೂ. 1000/– (ಒಂದು ಸಾವಿರ ರೂಗಳು)
02 ವರ್ಷಕ್ಕೆ ರೂ. 500/– (ಐದು ನೂರು ರೂಗಳು)

ಚಂದಾ ಹಣವನ್ನು ಚೆಕ್ ಮೂಲಕ : Publisher Sampreethi Samruddhi monthly magazine,
ಅಥವಾ ಗೂಗಲ್ ಪೇ ಸಂಖ್ಯೆ : 98455 65696 ಮೂಲಕ ಸಂದಾಯ ಮಾಡಬಹುದು.
ಹೆಚ್ಚಿನ ವಿವರಗಳಿಗೆ ಈ ಸಂಖ್ಯೆಯನ್ನು ಸಂಪರ್ಕಿಸಿ : 8971608213

ಮಾನಸಿಕ ಸ್ಥಿತಿಯನ್ನು ಸುಧಾರಿಸುವ, ಸ್ಮರಣೆಯನ್ನು ಉತ್ತಮಗೊಳಿಸುವ ಜಾಗೃತ ಮನಸ್ಸನ್ನು ಕಾದುಕೊಳ್ಳುವ ಅತ್ಯುತ್ತಮ ಸಾಧನ ನಿದ್ದೆ

# ಉತ್ತಮ ಆರೋಗ್ಯಕ್ಕೆ ನಿದ್ರೆ ಮುಖ್ಯ



ಡಾ. ಜ್ಯೋತಿ.ಬಿ

ನಿದ್ರೆ ಪ್ರತಿಯೊಬ್ಬ ಮನುಷ್ಯನಿಗೂ ಮುಖ್ಯವಾಗಿದೆ. ನಿದ್ರೆ ಇದ್ದರೆ ಮಾತ್ರ ಮನುಷ್ಯನು ತಮ್ಮ ಜೀವನವನ್ನು ಸುಖವಾಗಿ ಆರೋಗ್ಯಕರವಾಗಿ ಮಾಡಲು ಸಾಧ್ಯವಾಗುತ್ತದೆ. ನಿದ್ರೆ ಇಲ್ಲದಿದ್ದರೆ ಮನುಷ್ಯನು ಅನಾರೋಗ್ಯಕ್ಕೆ ಒಳಗಾಗಿ ಹಲವು ತೊಂದರೆಗಳನ್ನು ಅನುಭವಿಸುತ್ತಾನೆ.

ಇಂದಿನ ಈ ಯುಗವು ಸ್ಪರ್ಧಾತ್ಮಕ ಯುಗವಾಗಿರುವುದರಿಂದ ಪ್ರತಿಯೊಬ್ಬ ಮನುಷ್ಯನಿಗೆ ಕಣ್ಣು ತುಂಬಾ ನಿದ್ರೆ ಬರುತ್ತಿಲ್ಲ ಇದಕ್ಕೆ ಹಲವು ಕಾರಣಗಳಿವೆ. ಹೇಗೆಂದರೆ ಮನುಷ್ಯನಿಗೆ ಅವರದೇ ಆದ ಒಂದು ಯೋಚನೆ. ಇದರಿಂದ ಮಾನಸಿಕ ಹಾಗೂ ದೈಹಿಕ ತೊಂದರೆಗೆ ಒಳಗಾಗಿ ನಿದ್ರೆ ಬಾರದಿರುವುದಕ್ಕೆ ಕಾರಣವಾಗಬಹುದು.

ನಿದ್ರೆ ಬಾರದಿರುವಿಕೆಗೆ ಹಲವು ಕಾರಣಗಳಿವೆ. ಉದಾ: ಜ್ವರ, ಹೃದಯ ತೊಂದರೆ, ಮೆದುಳಿನ ತೊಂದರೆಯಿಂದ, ಹಲವು ರೋಗಗಳ ಕಾರಣದಿಂದ ನಿದ್ರೆ ಬಾರದಿರುವುದಕ್ಕೆ ಕಾರಣಗಳಾಗಿವೆ. ಇದರ ಜೊತೆಗೆ ಮಾನಸಿಕ ಚಿಂತೆಯು ಕೂಡ ನಿದ್ರೆ ಬಾರದಿರುವುದಕ್ಕೆ ಕಾರಣವಾಗಿದೆ.

ಕೆಲವರಿಗೆ ಆಗಾಗ ನಿದ್ದೆ ಬರುವುದಿಲ್ಲ ಹೇಗೆಂದರೆ ಅವರು ಮಲಗುವ ಕೋಣೆ ಅತಿ ತಣ್ಣನೆ ಅಥವಾ ಬಿಸಿಯಾಗಿರಬಹುದು. ಕಾಲುಗಳು ತಣ್ಣಗಾಗುವುದರಿಂದ ಹೊಟ್ಟೆ ಭಾರವಾಗುವುದರಂದ, ಊಟ ಮಾಡದೇ ಇರುವುದರಿಂದ, ಮಲಗುವಾಗ ಕಾಫೀ, ಟೀ ತೆಗೆದುಕೊಂಡರೆ, ಹೆಚ್ಚಾಗಿ ಚಿಂತೆ ಮಾಡುವುದರಿಂದ ನಿದ್ರೆ ಬಾರದೇ ಇರುವುದಕ್ಕೆ ಕಾರಣವಾಗುತ್ತದೆ. ಇದರಿಂದ ಹಲವು ತೊಂದರೆಗೆ ಒಳಗಾಗಬೇಕಾಗುತ್ತದೆ.

**ದೈಹಿಕ ಕಾರಣಗಳು:**

ಅತಿಯಾದ ರಕ್ತದೊತ್ತಡ, ಶುದ್ದ ರಕ್ತನಾಳಗಳು ಗಟ್ಟಿಯಾಗುವುದರಿಂದ ಅಥವಾ ಶುದ್ಧರಕ್ತನಾಳಕ್ಕೆ ಸೋಂಕು ತಗುಲುವುದರಿಂದ. ಮನುಷ್ಯನ ಮಾನಸಿಕ ಸ್ಥಿತಿ ಕೂಡ ನಿದ್ರೆ ಬಾರದಿರುವುದಕ್ಕೆ ಕಾರಣವಾಗಬಹುದು.

ಹಲವರು ನಿದ್ರೆ ಬಾರದಿರುವಿಕೆಯಿಂದ ಬಳಲುತ್ತಿರುವವರು ನಿದ್ರೆ ಬರುವ ಸಲುವಾಗಿ ಮಾತ್ರೆಗಳನ್ನು ತೆಗೆದುಕೊಳ್ಳುತ್ತಾರೆ. ಇನ್ನು ಕೆಲವರು ವೈದ್ಯರ ಸಲಹೆ ಇಲ್ಲದೇ ನಿದ್ರೆ ಮಾತ್ರೆಗಳನ್ನು ತೆಗೆದುಕೊಂಡು ನಿದ್ರೆ ಮಾಡುತ್ತಿರುತ್ತಾರೆ. ಇದನ್ನೇ ಅವರು ರೂಢಿ ಮಾಡಿಕೊಳ್ಳುವುದರಿಂದ ಹಲವಾರು ಸಮಸ್ಯೆ ಎದುರಿಸುತ್ತಾರೆ. ಮಲಗುವ ಮುಂಚೆ 15ರಿಂದ 20 ನಿಮಿಷಗಳ ಕಾಲ ಒಡಾಡಬೇಕು ಅಥವಾ ಟಿ.ವಿ.ಯಲ್ಲಿ ಹಳೆಯ ಚಲನಚಿತ್ರ ನೋಡಬೇಕು ಅಥವಾ ಯಾವುದಾದರು ಒಳ್ಳೆಯ ಪುಸ್ತಕವನ್ನು ಓದುವುದರಿಂದ ಚೆನ್ನಾಗಿ ನಿದ್ದೆ ಮಾಡಬಹುದು.

ಹೀಗೆ ನಿದ್ರೆ ಬಾರದಿರುವುದರಿಂದ ಹಲವು ತೊಂದರೆಗಳಿಗೆ ಒಳಗಾಗಬಹುದು. ಆದ್ದರಿಂದ ನೀವು ವೈದ್ಯರಿಗೆ ಭೇಟಿ ಮಾಡಿ ವೈದ್ಯರ ಸಲಹೆ ತೆಗೆದುಕೊಂಡು ನಿಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು.

**ಹೋಮಿಯೋಪಥಿ ಉಪಚಾರ:**

ನಿದ್ರೆ ಬಾರದೇ ಇರಲು ಕಾರಣವಾದ ವಸ್ತುಗಳಿಂದ ದೂರವಿರುವುದು ಸೂಕ್ತ. ಅದು ಎಲ್ಲರಿಂದ ಸಾಧ್ಯವಾಗುವುದಿಲ್ಲ. ಏಕೆಂದರೆ ಎಷ್ಟೋ ಸಲ ನಿದ್ರೆ ಬಾರದೇ ಇರುವುದಕ್ಕೆ ಕಾರಣವಾದ ವಸ್ತುಗಳು ನಮ್ಮ ಜೀವನಕ್ಕೆ ಅವಶ್ಯಕತೆವಾಗಿರುತ್ತವೆ. ಆದ್ದರಿಂದ ಇದಕ್ಕೆ ಉತ್ತಮ ಪರಿಹಾರವೆಂದರೆ, ನಮ್ಮ ದೇಹದ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿಕೊಳ್ಳುವುದು. ಇದರಿಂದ ನಿದ್ರೆ ಬಾರದೇ ಇರುವ ವಸ್ತುಗಳಿಗೆ ಪದೇ ಪದೇ ಒಳಪಟ್ಟಾಗ ಕೂಡ ರೋಗದ ಲಕ್ಷಣಗಳ ತೀವ್ರತೆ ಪುನರಾರ್ವತನೆಯನ್ನು ಕಡಿಮೆ ಮಾಡುವುದು.


ಹೋಮಿಯೋಪಥಿಕ ಔಷಧಿಗಳು ದೇಹದ ರೋಗ ನಿರೋಧಕ ಶಕ್ತಿ ಹೆಚ್ಚಿರುತ್ತದೆ. ನಮ್ಮ ದೇಹವು ನಿದ್ರೆ ಬಾರದೇ ಇರಲು ಕಾರಣವಾದ ವಸ್ತುಗಳಿಗೆ ನಿಯಮಿತವಾಗಿ ಪ್ರತಿಕ್ರಿಯಿಸುವಂತೆ ಮಾಡುತ್ತದೆ. ಹೋಮಿಯೋಪಥಿಕ್ ಔಷಧಿಯಿಂದ ನಿದ್ರೆ ಬಾರದಿರುವಿಕೆಯನ್ನು ಸಂಪೂರ್ಣವಾಗಿ ಗುಣಪಡಿಸಬಹುದು. ಇದಕ್ಕೆ ವ್ಯಕ್ತಿಯ ರೋಗದ ವಿವರ ಭೂತಕಾಲದಲ್ಲಿ ರೋಗಿಯು ಅನುಭವಿಸಿರವಹುದಾದ ಲಕ್ಷಣಗಳ ವಿವರ ಪೂರ್ವಿಕರಲ್ಲಿ ಇದ್ದಿರಬಹುದಾದ ಎಲ್ಲಾ ರೋಗದ ಮತ್ತು ಇತರೆ ರೋಗಗಳ ಲಕ್ಷಣಗಳ ವಿವರಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ಔಷಧಿ ನೀಡಲಾಗುವುದು.

ಹೋಮಿಯೋಪಥಿಕ್ ಚಿಕಿತ್ಸೆಯೂ ವ್ಯಕ್ತಿಯಿಂದ ವ್ಯಕ್ತಿಗೆ ಭಿನ್ನವಾಗಿರುವುದು ಹೋಮಿಯೋಪಥಿಕ್ ಚಿಕಿತ್ಸೆಯಿಂದ ನಿದ್ರೆ ಬಾರದಿರುವ ಲಕ್ಷಣಗಳನ್ನು ಕಡಿಮೆಮಾಡುತ್ತಾ ಕ್ರಮೇಣ ಸಂಪೂರ್ಣ ಗುಣವಾಗುತ್ತದೆ.

**ಇದರಿಂದಾಗುವ ತೊಂದರೆಗಳು**

1. ಹಸಿವೆಯಾಗದಿರುವಿಕೆ
2. ತಲೆನೋವು ಕಾಣಿಸಿಕೊಳ್ಳುವಿಕೆ
3. ವಾಂತಿ ಬರುವಿಕೆ
4. ಅಜೀರ್ಣತೆ.
5. ಅರ್ಧ ತಲೆನೋವು ಕಾಣಿಸಿಕೊಳ್ಳುವಿಕೆ
6. ನಿಶಕ್ತತೆ
7.ತಲೆಸುತ್ತು ಬರುವಿಕೆ ॐ






### ಗಣಿತ ಮತ್ತು ಖಗೋಳ ಶಾಸ್ತ್ರಕ್ಕೆ ದಿಕ್ಕು ತೋರಿದ ಮಹಾನ್ ಪಂಡಿತ

# ಆರ್ಯಭಟ

ಭಾರತದ ಮೊದಲ ಉಪಗ್ರಹ ಆರ್ಯಭಟ ಉಡಾವಣೆಯಾಗಿ 50 ವರ್ಷಗಳು ತುಂಬಿವೆ. 1975ರ ಏಪ್ರಿಲ್ 19ರಂದು ರಷ್ಯಾದಿಂದ ಈ ಉಪಗ್ರಹವನ್ನು ಉಡಾವಣೆ ಮಾಡಲಾಯಿತು. ಈ ಉಪಗ್ರಹವನ್ನು ಭಾರತೀಯ ವಿಜ್ಞಾನಿಗಳು ಕೇವಲ 30 ತಿಂಗಳಲ್ಲಿ ನಿರ್ಮಿಸಿದ್ದರು. ಇದು ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಒಂದು ಪ್ರಮುಖ ಮೈಲಿಗಲ್ಲನ್ನು ಸೃಷ್ಟಿಸಿತು. ಈ ಉಪಗ್ರಹದ ಯಶಸ್ಸಿನಿಂದ ಭಾರತವು ಬಾಹ್ಯಾಕಾಶ ಕ್ಷೇತ್ರದಲ್ಲಿ ಮುಂದುವರಿಯಲು ಸಾಧ್ಯವಾಯಿತು.

ಅದು 1975, ಏಪ್ರಿಲ್ 19. ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲನ್ನು ಸಾಧಿಸಿದ ದಿನ. ಭಾರತದ ಮೊಟ್ಟ ಮೊದಲ ಮಾನವ ನಿರ್ಮಿತ ಉಪಗರಹ ಆರ್ಯಭಟ ಅಂದು ಕಕ್ಷೆಗೆ ಹಾರಿದ ದಿನ. ರಷ್ಯಾದ ಸಹಭಾಗಿತ್ವದಲ್ಲಿ ನಡೆದ ಈ ಯಶಸ್ವಿ ಕಾರ್ಯಾಚರಣೆ, ಭಾರತದ ಬಾಹ್ಯಾಕಾಶ ಕ್ಷೇತ್ರದ ದಿಕ್ಕನ್ನೇ ಬದಲಿಸಿತ್ತು. ಭಾರತೀಯ ವಿಜ್ಞಾನಿಗಳ ತಂಡವು ರಷ್ಯಾದಲ್ಲಿ 40 ದಿನಗಳ ಕಾಲ ಶ್ರಮವಹಿಸಿ ಈ ಉಪಗ್ರಹವನ್ನು ನಿರ್ಮಿಸಿತು. 1975ರ ಏಪ್ರಿಲ್ 19ರಂದು ಮಧ್ಯಾಹ್ನ 1:28:55ಕ್ಕೆ ಕಾಸ್ಮೊಸ್–3ಒ ರಾಕೆಟ್ ಮೂಲಕ ಆರ್ಯಭಟವನ್ನು ಉಡಾವಣೆ ಮಾಡಲಾಯಿತು. ಈ ಉಪಗ್ರಹವು ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಒಂದು ಮಹತ್ವದ ತಿರುವು ನೀಡಿತು. ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ ನಡೆದ ಆರ್ಯಭಟ ಉಪಗ್ರಹ ನಿರ್ಮಾಣ ಪ್ರಕ್ರಿಯೆ, ಈ ಯೋಜನೆಯಲ್ಲಿ ತಮ್ಮ ಅನುಪಮ ಸೇವೆ ಸಲ್ಲಿಸಿದ ಭಾರತೀಯ ವಿಜ್ಞಾನಿಗಳ ತಂಡವನ್ನು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯ. ಹಾಗಿದ್ದರೆ ಆರ್ಯಭಟ ಉಪಗ್ರಹ ಕಾರ್ಯಾಚರಣೆ 50ನೇ ವರ್ಷದ ಸಂಭ್ರಮಾಚರಣೆಯಲ್ಲಿ, ಈ ಯೋಜನೆಯ ಇತಿಹಾಸವನ್ನು ಅರಿಯೋಣ ಬನ್ನಿ.

### ಆರ್ಯಭಟ ಉಪಗ್ರಹ ಯೋಜನೆ

50 ವರ್ಷಗಳ ಹಿಂದೆ ಭಾರತವು ತನ್ನ ಮೊಟ್ಟ ಮೊದಲ ಉಪಗ್ರಹವನ್ನು ಉಡಾವಣೆ ಮಾಡಿತು. ಆರ್ಯಭಟ ಎಂಬ ಹೆಸರಿನ ಈ ಉಪಗ್ರಹವನ್ನು ರಷ್ಯಾದ ಸಹಾಯದಿಂದ ಉಡಾವಣೆ ಮಾಡಲಾಯಿತು. ಭಾರತವು 1971ರಲ್ಲಿ 100 ಕೆ.ಜಿ ತೂಕದ ಉಪಗ್ರಹವನ್ನು ನಿರ್ಮಿಸಲು ಯೋಚಿಸುತ್ತಿತ್ತು. ಆಗ ಪ್ರಧಾನಿ ಇಂದಿರಾ ಗಾಂಧಿಯವರು ವಿಕ್ರಮ್ ಸಾರಾಭಾಯ್ ಅವರಿಗೆ ರಷ್ಯಾದಿಂದ ಒಂದು ಪತ್ರವನ್ನು ತಲುಪಿಸಿದರು. ರಷ್ಯಾವು ಭಾರತಕ್ಕೆ ಬಾಹ್ಯಾಕಾಶ ಕ್ಷೇತ್ರದಲ್ಲಿ ಸಹಾಯ ಮಾಡಲು ಸಿದ್ಧವಾಗಿತ್ತು. ಸಾರಾಭಾಯ್ ಅವರು ರಷ್ಯಾದ ರಾಯಭಾರಿ ನಿಕೊಲಾಯ್ ಪೆಗೊವ್ ಅವರೊಂದಿಗೆ ಸಭೆ ಏರ್ಪಡಿಸಿದರು. ಯು.ಆರ್. ರಾವ್ ಅವರು ಭಾರತದ ಯೋಜನೆಯನ್ನು ರಾಯಭಾರಿಗೆ ವಿವರಿಸಿದರು. ಇದಾದ ಬಳಿಕ ಆರ್ಯಭಟ ಯೋಜನೆಯನ್ನು ಭಾರತ ಅಧಿಕೃತವಾಗಿ ಕೈಗೆತ್ತಿಕೊಂಡಿತು. ಭಾರತೀಐ ಬಾಹ್ಯಾಕಾಶ ವಿಜ್ಞಾನಿಗಳು ಹಗಲಿರುಳೆನ್ನದೇ ಈ ಯೋಜನೆಯ ಯಶಸ್ಸಿಗಾಗಿ ದುಡಿದರು.

## ಭಾರತೀಯ ವಿಜ್ಞಾನಿಗಳ ಅನುಪಮ ಸೇವೆ

ಆರ್ಯಭಟ ಉಪಗ್ರಹ ಯೋಜನೆ ನಿರ್ಮಾಣ ಹಂತದಲ್ಲಿರುವಾಗಲೇ 1971ರ ಡಿಸೆಂಬರ್‌ನಲ್ಲಿ ವಿಕ್ರಮ್ ಸಾರಾಭಾಯ್ ಹಠಾತ್ ನಿಧನ ಹೊಂದಿದರು. ಪ್ರೊ. ಎಂ.ಜಿ.ಕೆ. ಮೆನನ್ ಅವರು ಇಸ್ರೋದ ಅಧ್ಯಕ್ಷರಾಗಿ ನೇಮಕಗೊಂಡು, ಆರ್ಯಭಟ ಯೋಜನೆಯನ್ನು ಮುಂದುವರೆಸಿದರು. 1972ರ ಫೆಬ್ರವರಿಯಲ್ಲಿ ತಿರುವನಂತಪುರದಲ್ಲಿ ಭಾರತ ಮತ್ತು ರಷ್ಯಾದ ತಜ್ಞರ ಸಭೆ ನಡೆಯಿತು. ಅದರಲ್ಲಿ ಉಭಯ ದೇಶಗಳ ಬಾಹ್ಯಾಕಾಶ ಸಹಕಾರದ ಬಗ್ಗೆ ಚರ್ಚಿಸಲಾಯಿತು. ಮೆನನ್ ಅವರು ಯು.ಆರ್. ರಾವ್ ಅವರಿಗೆ ಈ ಯೋಜನೆಯ ಜವಾಬ್ದಾರಿವಹಿಸಿದರು. ಮೆನನ್ ಅವರು ದೆಹಲಿಯಲ್ಲಿ ಪ್ರಧಾನಿ ಇಂದಿರಾ ಗಾಂಧಿಯವರಿಗೆ ಈ ಯೋಜನೆಯ ಬಗ್ಗೆ ಮಾಹಿತಿ ನೀಡಿದರು. ಬಳಿಕ ಕೇಂದ್ರ ಸರ್ಕಾರದ ಅನುಮತಿಯೊಂದಿಗೆ ಆರ್ಯಭಟ ಉಪಗ್ರಹದ ನಿರ್ಮಾಣ ಕಾರ್ಯ ಆರಂಭವಾಯಿತು.

## ಬೆಂಗಳೂರಿನ ಶೆಡ್‌ನಲ್ಲಿ ಆರಂಭವಾದ ನಿರ್ಮಾಣ ಕಾರ್ಯ

ಸುಮಾರು 60 ಲಕ್ಷ ರೂ.ಗಳ ಆರ್ಯಭಟ ಉಪ್ರಗ್ರಹ ನಿರ್ಮಾಣ ಕಾರ್ಯ ಆರಂಭವಾಗಿದ್ದು, ಕರ್ನಾಟಕದ ರಾಜಧಾನಿ ಬೆಂಗಳೂರಿನಲ್ಲಿ. ಉಪಗ್ರಹವನ್ನು ಎಲ್ಲಿ ನಿರ್ಮಿಸಬೇಕು ಎಂಬ ಪ್ರಶ್ನೆ ಬಂದಾಗ ಬೆಂಗಳೂರು ಮತ್ತು ಹೈದರಾಬಾದ್ ಬಗ್ಗೆ ಚರ್ಚೆ ನಡೆಸಲಾಗಿತ್ತು. ನಂತರ ಇಸ್ರೋದ ವಿಜ್ಞಾನಿಗಳು ಬೆಂಗಳೂರನ್ನು ಆಯ್ಕೆ ಮಾಡಿಕೊಂಡರು. ಕರ್ನಾಟಕದ ಅಂದಿನ ಕೈಗಾರಿಕಾ ಕಾರ್ಯದರ್ಶಿ ಸತೀಶ್ ಚಂದ್ರನ್ ಅವರ ಸಹಾಯದಿಂದ, ಯು.ಆರ್. ರಾವ್ ಅವರು ಪೀಣ್ಯ ಕೈಗಾರಿಕಾ ಎಸ್ಟೇಟ್‌ನಲ್ಲಿ ನಾಲ್ಕು ಖಾಲಿ ಶೆಡ್ಗಳನ್ನು ಪಡೆದರು. ಈ ಶೆಡ್‌ನಲ್ಲೇ ಉಪಗ್ರಹ ನಿರ್ಮಾಣ ಕಾರ್ಯ ಆರಂಭವಾಯಿತು.ಈ ಶೆಡ್ಗಳನ್ನು ಬಹಳ ಬೇಗನೆ ಪ್ರಯೋಗಾಲಯಗಳಾಗಿ ಪರಿವರ್ತಿಸಲಾಯಿತು. ಅವುಗಳಲ್ಲಿ ಎರಡು ನಿಯಂತ್ರಣ ಎಲೆಕ್ಟ್ರಾನಿಕ್ಸ್ ಲ್ಯಾಬ್ಗಳಾದವು. ಒಂದು 1,500 ಚದರ ಅಡಿ ವಿಸ್ತೀರ್ಣದ ಕ್ಲೀನ್ ರೂಮ್ ಅನ್ನು ಉಪಗ್ರಹ ಜೋಡಣೆಗಾಗಿ ನಿರ್ಮಿಸಲಾಯಿತು. 1972ರ ಸೆಪ್ಟೆಂಬರ್ 11ರಂದು ಗಣೇಶ ಚತುರ್ಥಿಯ ದಿನದಂದು ಅವುಗಳನ್ನು ಅನೌಪಚಾರಿಕವಾಗಿ ಉದ್ಘಾಟಿಸಲಾಯಿತು.

## ಆರ್ಯಭಟ ಉಪಗ್ರಹ ಉಡಾವಣೆ ಕಾರ್ಯಾಚರಣೆ

ಒಟ್ಟು 150 ಭಾರತೀಯ ವಿಜ್ಞಾನಿಗಳ ತಂಡವು ದಿನದ 24 ಗಂಟೆಯೂ ಕೆಲಸ ,ಮಾಡಿ, ಯುರೋಪ್ ಮತ್ತು ಅಮೆರಿಕದಿಂದ ತರಿಸಿಕೊಳ್ಳಲಾದ ಉಪಕರಣಗಳ ಸಹಾಯದಿಂದ ಆರ್ಯಭಟ ಉಪಗ್ರಹವನ್ನು ನಿರ್ಮಾಣ ಮಾಡಿದರು. 1974ರ ಜುಲೈ 11ರಂದು ಪ್ರಧಾನಿ ಇಂದಿರಾ ಗಾಂಧಿ ಅವರು ಪೀಣ್ಯಕ್ಕೆ ಭೇಟಿ ನೀಡಿ, ಆರ್ಯಭಟದ ಮಾದರಿಯನ್ನು ಅಂತಿಮಗೊಳಿಸಿದರು. ಅಲ್ಲದೇ ಉಡಾವಣೆಯ ನೆನಪಿಗಾಗಿ ಒಂದು ವಿಶೇಷ ಅಂಚೆ ಚೀಟಿಯನ್ನು ಮುದ್ರಿಸಲು ಇಂದಿರಾ ಗಾಂಧಿ ಆದೇಶ ನೀಡಿದರು.ಅಂತಿಮವಾಗಿ ಏ.19, 1975ರಂದು ಆರ್ಯಭಟ ಉಪಗ್ರಹವು ರಷ್ಯಾದಿಂದ ಯಶಸ್ವಿ ಉಡಾವಣೆ ಕಂಡಿತು. ಈ ಉಪಗ್ರಹದ ಮೇಲ್ಮೈಗೆ ಸೌರ ಕೋಶಗಳನ್ನು ಅಳವಡಿಸಲಾಗಿತ್ತು. ಅವು ನಿಕಲ್–ಕ್ಯಾಡ್ಮಿಯಮ್ ಬ್ಯಾಟರಿಯಿಂದ ನಿರ್ಮಿಸಲ್ಪಟ್ಟ ಈ ಸೌರ ಕೋಶಗಳು, 46ವ್ಯಾ ವಿದ್ಯುತ್ ಉತ್ಪಾದಿಸುತ್ತಿದ್ದವು. ಈ ಉಪಗ್ರಹ ಅಂದಿನ ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿತ್ತು. ಆರ್ಯಭಟ ಉಪಗ್ರಹವು 91 ನಿಯತಾಂಕಗಳನ್ನು ಮೇಲ್ವಿಚಾರಣೆ ಮಾಡುವ ಸಾಮರ್ಥ್ಯವನ್ನು ಹೊಂದಿತ್ತು. ಪ್ರತಿ ಸೆಕೆಂಡಿಗೆ 256 ಬಿಟ್ಗಳಷ್ಟು ಡೇಟಾವನ್ನು ರವಾನಿಸುವ ಸಾಮರ್ಥ್ಯವನ್ನು ಹೊಂದಿತ್ತು. ಇದು ಆ ಕಾಲಕ್ಕೆ ಒಂದು ದೊಡ್ಡ ಸಾಧನೆಯಾಗಿತ್ತು. ಆರ್ಯಭಟ ಉಪಗ್ರಹವನ್ನು ಭೂಮಿಯ ಕೆಳ ಕಕ್ಷೆಗೆ (LEO) ಉಡಾವಣೆ ಮಾಡಲಾಯಿತು. 1981ರ ಮಾರ್ಚ್‌ವರೆಗೆ ಈ ಉಪಗ್ರಹ ಬಾಹ್ಯಾಕಾಶದಲ್ಲಿ ಕಾರ್ಯಾಚರಣೆ ನಡೆಸಿ ಇತಿಹಾಸ ಬರೆಯಿತು. ಆರ್ಯಭಟ ಉಪಗ್ರಹವು ಭಾರತದ ಬಾಹ್ಯಾಕಾಶ ಕಾರ್ಯಕ್ರಮಕ್ಕೆ ಒಂದು ದೊಡ್ಡ ಕೊಡುಗೆಯನ್ನು ನೀಡಿದೆ. ಇದು ಭಾರತೀಯ ವಿಜ್ಞಾನಿಗಳು ಮತ್ತು ಇಂಜಿನಿಯರ್‌ಗಳ ಸಾಮರ್ಥ್ಯವನ್ನು ಜಗತ್ತಿಗೆ ತೋರಿಸಿದೆ. ॐ

**ಸಮೃದ್ಧಿ ಸುಜ್ಞಾನ**

ಊಟ ಮಾಡಿ ಮಲಗುವವನಿಗೆ ಬೊಜ್ಜು. ನಿಲ್ಲುವವನಿಗೆ ಶಕ್ತಿ, ನಡೆಯುವವನಿಗೆ ಆಯುಷ್ಯದ ಹೆಚ್ಚಳ, ದಿನವೂ ಓಡುವವನ ಬಳಿಯಿಂದ ಮೃತ್ಯುವೇ ಓಡಿಬಿಡುತ್ತದೆ!

ಭೂಮಿಯನ್ನು ಕಾಪಾಡಿ, ಭವಿಷ್ಯವನ್ನು ಉಳಿಸಿ : ಅರ್ಥಪೂರ್ಣ

# ಭೂಮಿಯ ದಿನ

ಭೂ ದಿನವು ಪರಿಸರ ಚಳವಳಿಯ ಸಾಧನೆಗಳನ್ನು ಗೌರವಿಸುವ ಮತ್ತು ಭವಿಷ್ಯದ ಪೀಳಿಗೆಗೆ ಭೂಮಿಯ ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸುವ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸುವ ವಾರ್ಷಿಕ ಆಚರಣೆಯಾಗಿದೆ. ಭೂ ದಿನವನ್ನು ಏಪ್ರಿಲ್ 22 ರಂದು ಯುನೈಟೆಡ್ ಸ್ಟೇಟ್ಸ್‌ನಲ್ಲಿ ಮತ್ತು ಏಪ್ರಿಲ್ 22 ರಂದು ಅಥವಾ ಪ್ರಪಂಚದಾದ್ಯಂತ ವಸಂತ ವಿಷುವತ್ ಸಂಕ್ರಾಂತಿ ಸಂಭವಿಸುವ ದಿನದಂದು ಆಚರಿಸಲಾಗುತ್ತದೆ. ಭೂ ದಿನವು ಪರಿಸರ ಚಳವಳಿಯ ಸಾಧನೆಗಳನ್ನು ಗೌರವಿಸುವ ಮತ್ತು ಭವಿಷ್ಯದ ಪೀಳಿಗೆಗೆ ಭೂಮಿಯ ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸುವ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸುವ ವಾರ್ಷಿಕ ಆಚರಣೆಯಾಗಿದೆ. ಮೊದಲ ಭೂ ದಿನವನ್ನು ಏಪ್ರಿಲ್ 22, 1970 ರಂದು ನಡೆಸಲಾಯಿತು. ಇಲ್ಲಿ, 1970 ರ ಕ್ಲೀನ್ ಏರ್ ಆಕ್ಟ್ನ ಲೇಖಕ ಸೆನೆಟರ್ ಎಡ್ಮಂಡ್ ಮಸ್ಕಿ (ಯುಎಸ್ ರಾಜ್ಯದ ಮೈನೆಯಿಂದ ಬಂದ ಡೆಮೋಕ್ರಾಟ್) ಅಮೆರಿಕದ ಪೆನ್ಸಿಲ್ವೇನಿಯಾದ ಫಿಲಡೆಲ್ಫಿಯಾದಲ್ಲಿ ನಡೆದ ಮೊದಲ ಭೂ ದಿನಾಚರಣೆಯ ಪ್ರಮುಖ ಭಾಷಣಕಾರರಾಗಿ ಅಂದಾಜು 40,000–60,000 ಜನರನ್ನು ಉದ್ದೇಶಿಸಿ ಮಾತನಾಡಿದರು.

ಭೂ ದಿನವು ಪರಿಸರ ಚಳವಳಿಯ ಸಾಧನೆಗಳನ್ನು ಗೌರವಿಸುವ ಮತ್ತು ಭವಿಷ್ಯದ ಪೀಳಿಗೆಗೆ ಭೂಮಿಯ ನೈಸರ್ಗಿಕ ಸಂಪನ್ಮೂಲಗಳನ್ನು ರಕ್ಷಿಸುವ ಅಗತ್ಯತೆಯ ಬಗ್ಗೆ ಜಾಗೃತಿ ಮೂಡಿಸುವ ವಾರ್ಷಿಕ ಆಚರಣೆಯಾಗಿದೆ. ಭೂ ದಿನವನ್ನು ಏಪ್ರಿಲ್ 22 ರಂದು ಯುನೈಟೆಡ್ ಸ್ಟೇಟ್ಸ್‌ನಲ್ಲಿ ಮತ್ತು ಏಪ್ರಿಲ್ 22 ರಂದು ಅಥವಾ ಪ್ರಪಂಚದಾದ್ಯಂತ ವಸಂತ ವಿಷುವತ್ ಸಂಕ್ರಾಂತಿ ಸಂಭವಿಸುವ ದಿನದಂದು ಆಚರಿಸಲಾಗುತ್ತದೆ. 1960 ರ ದಶಕದಲ್ಲಿ ಪರಿಸರ ಚಟುವಟಿಕೆಯು ವಿಸ್ಕಾನ್ಸಿನ್ ಸೆನೆಟರ್ ಗೇಲಾರ್ಡ್ ನೆಲ್ಸನ್ ಅವರನ್ನು ಪರಿಸರ ಚಳವಳಿಯನ್ನು ಒಗ್ಗೂಡಿಸುವ ರಾಷ್ಟ್ರೀಯ ಆಚರಣೆಯನ್ನು ರಚಿಸಲು ಪ್ರೇರೇಪಿಸಿತು. ಹಾರ್ವರ್ಡ್ ವಿಶ್ವವಿದ್ಯಾಲಯದ ಪದವಿ ವಿದ್ಯಾರ್ಥಿ ಡೆನಿಸ್ ಹೇಯ್ಸ್ ಸಹಾಯದಿಂದ, ನೆಲ್ಸನ್ ಏಪ್ರಿಲ್ 22, 1970 ರಂದು ಮೊದಲ ಭೂ ದಿನವನ್ನು ಆಯೋಜಿಸಿದರು, ಪರಿಸರ ಸಂರಕ್ಷಣೆಯ ಮಹತ್ವವನ್ನು ಭಾಗವಹಿಸುವವರಿಗೆ ಶಿಕ್ಷಣ ನೀಡಿದರು . ಯುನೈಟೆಡ್ ಸ್ಟೇಟ್ಸ್ನಾದ್ಯಂತ 20 ಮಿಲಿಯನ್ ಜನರು ಭಾಗವಹಿಸಿದ ಈ ಕಾರ್ಯಕ್ರಮವು ಕ್ಲೀನ್ ಏರ್ ಆಕ್ಟ್ (1970 ರಲ್ಲಿ ನವೀಕರಿಸಲಾಗಿದೆ) ಮತ್ತು ಅಳಿವಿನಂಚಿನಲ್ಲಿರುವ ಪ್ರಭೇದಗಳ ಕಾಯಿದೆ (1973) ನಂತಹ ಶಾಸನಗಳಿಗೆ ಬೆಂಬಲವನ್ನು ಬಲಪಡಿಸಿತು . 1990 ರಲ್ಲಿ, ಹೇಯ್ಸ್ ಜಾಗತಿಕ ಭೂ ದಿನವನ್ನು ಆಯೋಜಿಸಿದರು, 140 ಕ್ಕೂ ಹೆಚ್ಚು ದೇಶಗಳಲ್ಲಿ 200 ಮಿಲಿಯನ್ಗಿಂತಲೂ ಹೆಚ್ಚು ಭಾಗವಹಿಸುವವರು ಭಾಗವಹಿಸಿದರು. ಜಾಗತಿಕ ತಾಪಮಾನ ಏರಿಕೆ ಮತ್ತು ನವೀಕರಿಸಬಹುದಾದ ಇಂಧನದಂತಹ ಪರಿಸರ ಕಾಳಜಿಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಕ್ರಮ ಕೈಗೊಳ್ಳಲು ಭೂ ದಿನವು ಈಗ ಪ್ರಪಂಚದಾದ್ಯಂತದ ನಾಗರಿಕರು ಮತ್ತು ಕಾರ್ಯಕರ್ತರನ್ನು ಒಟ್ಟುಗೂಡಿಸುತ್ತದೆ . ಇಂದು, 190 ದೇಶಗಳಲ್ಲಿ 20,000 ಕ್ಕೂ ಹೆಚ್ಚು ಪಾಲುದಾರರು ಮತ್ತು ಸಂಸ್ಥೆಗಳನ್ನು ಒಟ್ಟುಗೂಡಿಸುವ ಭೂ ದಿನದ ಜಾಲ (EDN) , ವರ್ಷಪೂರ್ತಿ ಭೂ ದಿನದ ಧ್ಯೇಯವನ್ನು ಬೆಂಬಲಿಸುತ್ತದೆ. ಜನಾಂಗ , ಲಿಂಗ , ಆದಾಯ ಅಥವಾ ಭೌಗೋಳಿಕತೆಯನ್ನು ಲೆಕ್ಕಿಸದೆ ಎಲ್ಲಾ ಜನರು ಆರೋಗ್ಯಕರ, ಸುಸ್ಥಿರ ಪರಿಸರಕ್ಕೆ ನೈತಿಕ ಹಕ್ಕನ್ನು ಹೊಂದಿದ್ದಾರೆ ಎಂಬ ಪ್ರಮೇಯದ ಮೇಲೆ ಈ ಧ್ಯೇಯವನ್ನು ಸ್ಥಾಪಿಸಲಾಗಿದೆ. ಭೂ ದಿನದ ಜಾಲವು ಶಿಕ್ಷಣ, ಸಾರ್ವಜನಿಕ ನೀತಿ ಮತ್ತು ಕ್ರಿಯಾಶೀಲತಾ ಅಭಿಯಾನಗಳ ಮೂಲಕ ಈ ಧ್ಯೇಯವನ್ನು ಅನುಸರಿಸುತ್ತದೆ. ಈ ಅಭಿಯಾನಗಳು ಪ್ರತಿವರ್ಷ ಒಂದು ಶತಕೋಟಿಗೂ ಹೆಚ್ಚು ಭಾಗವಹಿಸುವವರನ್ನು ಒಟ್ಟುಗೂಡಿಸುತ್ತವೆ, ಇದು ವಿಶ್ವದ ಅತಿದೊಡ್ಡ ಸಾರ್ವಜನಿಕ, ಜಾತ್ಯತೀತ ಕಾರ್ಯಕ್ರಮಗಳಲ್ಲಿ ಒಂದಾಗಿದೆ.

**ಭೂ ದಿನದ ಜಾಲವು ಪ್ರಮುಖ ಗುರಿಗಳ ಗುಂಪನ್ನು ಅನುಸರಿಸುತ್ತದೆ:**

- ಹವಾಮಾನ ಬದಲಾವಣೆ, ಹಸಿರು ಶಾಲೆಗಳು ಮತ್ತು ಪರಿಸರ ಪಠ್ಯಕ್ರಮ, ಹಸಿರು ಉದ್ಯೋಗಗಳು ಮತ್ತು ನವೀಕರಿಸಬಹುದಾದ ಇಂಧನದಂತಹ ವಿಷಯಗಳನ್ನು ಸೇರಿಸಲು ಪರಿಸರದ ಅರ್ಥವನ್ನು ವಿಸ್ತರಿಸಿ ;
- ಪ್ರಪಂಚದಾದ್ಯಂತ ಸ್ಥಳೀಯ, ರಾಜ್ಯ, ರಾಷ್ಟ್ರೀಯ ಮತ್ತು ಜಾಗತಿಕ ಮಟ್ಟದಲ್ಲಿ ನಾಗರಿಕ ತೊಡಗಿಸಿಕೊಳ್ಳುವಿಕೆ ಅವಕಾಶಗಳನ್ನು ಒದಗಿಸುವ ಮೂಲಕ ಚಳುವಳಿಯನ್ನು ವೈವಿಧ್ಯಗೊಳಿಸಿ. ಹವಾಮಾನ ಬದಲಾವಣೆಯು ನಮ್ಮ ಅತ್ಯಂತ ದುರ್ಬಲ ನಾಗರಿಕರ ಮೇಲೆ ಮೊದಲು ಮತ್ತು ಹೆಚ್ಚು ತೀವ್ರವಾಗಿ ಪರಿಣಾಮ ಬೀರುತ್ತದೆ ಎಂಬುದನ್ನು ಗುರುತಿಸಿ, EDN ಸಾಮಾನ್ಯವಾಗಿ ಕಡಿಮೆ ಆದಾಯದ ಸಮುದಾಯಗಳೊಂದಿಗೆ ಕೆಲಸ ಮಾಡಿ ಅವರ ಧ್ವನಿ ಮತ್ತು ಸಮಸ್ಯೆಗಳನ್ನು ಚಳುವಳಿಗೆ ತರುತ್ತದೆ.
- ಎಲ್ಲಾ ನಾಗರಿಕರು ಪರಿಸರ ಚಳವಳಿಯಲ್ಲಿ ಸಕ್ರಿಯರಾಗಲು ಅವಕಾಶಗಳನ್ನು ಒದಗಿಸಲು ಪಾಲುದಾರ ಸಂಸ್ಥೆಗಳೊಂದಿಗೆ ಕೆಲಸ ಮಾಡುವ ಮೂಲಕ ಸಮುದಾಯಗಳನ್ನು ಸಜ್ಜುಗೊಳಿಸಿ .

**ಭೂದಿನಗಳ ಪ್ರಮುಖ ಸಮಸ್ಯೆಗಳು:**

ಈ ಗುರಿಗಳ ಸೆಟ್ ಪ್ರಪಂಚದಾದ್ಯಂತದ ಭೂದಿನದ ಕಾರ್ಯಕ್ರಮಗಳು ಮತ್ತು ಕ್ರಿಯೆಗಳನ್ನು ಒತ್ತಿಹೇಳುತ್ತದೆ, ಇದನ್ನು ಹತ್ತು ಪ್ರಮುಖ ವಿಷಯಗಳಾಗಿ ಸಂಘಟಿಸಬಹುದು. ಪರಿಸರ ಸಮಸ್ಯೆಗಳನ್ನು ಚರ್ಚಿಸಲು ಚುನಾಯಿತ ಅಧಿಕಾರಿಗಳನ್ನು ಭೇಟಿ ಮಾಡಲು ಬೆಂಬಲಿಗರು ವ್ಯಕ್ತಿಗಳು ಮತ್ತು ಸಂಸ್ಥೆಗಳನ್ನು ಪ್ರೋತ್ಸಾಹಿಸುತ್ತಾರೆ. ಉದಾಹರಣೆಗೆ, "ಮಿಲಿಯನ್ ಆಕ್ಟ್ಸ್ ಆಫ್ ಗ್ರೀನ್" ಎಂಬ ಆನ್ಲೈನ್ ಕಾರ್ಯಕ್ರಮವು ಸಂದರ್ಶಕರನ್ನು ಮಿಶ್ರಗೊಬ್ಬರ ಮಾಡುವುದು, ನಿಮ್ಮ ಇಂಗಾಲದ ಹೆಜ್ಜೆಗುರುತನ್ನು ಕಡಿಮೆ ಮಾಡುವುದು ಅಥವಾ ಇ–ತ್ಯಾಜ್ಯವನ್ನು ಮರುಬಳಕೆ ಮಾಡುವಂತಹ ಜೀವನಶೈಲಿಯ ಬದಲಾವಣೆಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹಿಸುತ್ತದೆ.

**ಹವಾಮಾನ ಬದಲಾವಣೆ :** ಬೆಂಬಲಿಗರು ಹವಾಮಾನ ಬದಲಾವಣೆ , ಆ ಬದಲಾವಣೆಗಳಿಗೆ ಮಾನವ ಕೊಡುಗೆ ಮತ್ತು ಈ ವಿದ್ಯಮಾನವನ್ನು ನಿಧಾನಗೊಳಿಸುವ ಅವಕಾಶಗಳ ಬಗ್ಗೆ ಜಾಗೃತಿ ಮೂಡಿಸುತ್ತಾರೆ . ಉದಾಹರಣೆಗೆ, ಅನೇಕ ಭೂ ದಿನದ ಬೆಂಬಲಿಗರು, 2016 ರ ಭೂ ದಿನದಂದು ಸಹಿ ಹಾಕಲಾಗುವ ಹೆಗ್ಗುರುತು ಪ್ಯಾರಿಸ್ ಹವಾಮಾನ ಒಪ್ಪಂದವನ್ನು ಬೆಂಬಲಿಸಲು ನಾಗರಿಕರನ್ನು ಪ್ರೋತ್ಸಾಹಿಸುತ್ತಾರೆ .

**ಸಂರಕ್ಷಣೆ ಮತ್ತು ಜೀವಶಾಸ್ತ್ರ :** ವಿಶ್ವದ ಜೀವವೈವಿಧ್ಯತೆಯನ್ನು ಸಂರಕ್ಷಿಸಲು ಬೆಂಬಲಿಗರು ಕೆಲಸ ಮಾಡುತ್ತಾರೆ . ಉದಾಹರಣೆಗೆ, 2010 ರ ಭೂ ದಿನದಂದು, ಶ್ರೀಲಂಕಾದಲ್ಲಿ ಭಾಗವಹಿಸುವವರು ಯಗಿರಾಲಾ ಅರಣ್ಯ ಮೀಸಲು ಪ್ರದೇಶದ ಉಷ್ಣವಲಯದ ಮಳೆಕಾಡಿನಾದ್ಯಂತ 100 ಕ್ಕೂ ಹೆಚ್ಚು ಔಷಧೀಯ ಸಸ್ಯಗಳನ್ನು ನೆಟ್ಟರು . ಈ ಸಸ್ಯಗಳನ್ನು ಸ್ಥಳೀಯ ಜನಸಂಖ್ಯೆಯು ಬಳಸಬಹುದು ಮತ್ತು ವಿವಿಧ ಜೀವಿಗಳಿಗೆ ಆವಾಸಸ್ಥಾನಗಳನ್ನು ಸೃಷ್ಟಿಸುತ್ತದೆ, ದ್ವೀಪ ರಾಷ್ಟ್ರದ ಜೀವವೈವಿಧ್ಯತೆಯನ್ನು ಹೆಚ್ಚಿಸುತ್ತದೆ .

**ಶಿಕ್ಷಣ :** ಭೂ ದಿನದ ಶಿಕ್ಷಣ ಕಾರ್ಯಕ್ರಮಗಳು ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಆರೋಗ್ಯಕರ, ಹೆಚ್ಚು ಸುಸ್ಥಿರ ಗ್ರಹವನ್ನು ರಚಿಸಲು ಸಂಪನ್ಮೂಲಗಳು ಮತ್ತು ಪರಿಹಾರಗಳನ್ನು ಒದಗಿಸುತ್ತವೆ. ಉದಾಹರಣೆಗೆ, 2010 ರ ಭೂ ದಿನದಂದು, ಫಿಲಿಪೈನ್ಸ್ನ ಕಾಂಪೋಸ್ಟೆಲಾ ಕಣಿವೆ ಪ್ರದೇಶದ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ದಿನವಿಡೀ ಸಮ್ಮೇಳನದಲ್ಲಿ ಭಾಗವಹಿಸಿದರು. ಸಮ್ಮೇಳನದಲ್ಲಿ, ಅವರು ಮರ ನೆಡುವಿಕೆ ಮತ್ತು ಆರೈಕೆಯ ಬಗ್ಗೆ ಕಲಿತರು, ಪ್ರಕೃತಿ ಪಾದಯಾತ್ರೆಗಳಲ್ಲಿ ಭಾಗವಹಿಸಿದರು ಮತ್ತು ಸಮುದಾಯಕ್ಕೆ ತಮ್ಮ ಪರಿಸರ ಕ್ರಿಯಾ ಯೋಜನೆಗಳನ್ನು ಪ್ರಸ್ತುತಪಡಿಸಿದರು.

**ಶಕ್ತಿ :** ಕಲ್ಲಿದ್ದಲು ಮತ್ತು ತೈಲದಂತಹ ನವೀಕರಿಸಲಾಗದ ಮೂಲಗಳನ್ನು ಪರಿವರ್ತಿಸುವ ಸಾಧನವಾಗಿ ನವೀಕರಿಸಬಹುದಾದ ಇಂಧನ ಮೂಲಗಳು ಮತ್ತು ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ಯೋಜನೆಗಳನ್ನು ವಕೀಲರು ಬೆಂಬಲಿಸುತ್ತಾರೆ. ಉದಾಹರಣೆಗೆ, ಕತಾರ್ನ ನಾಗರಿಕರು ಜಾಗತಿಕ ತಾಪಮಾನ ಏರಿಕೆಗೆ ಮಾನವ ಕೊಡುಗೆಗಳ ವಿರುದ್ಧ ಸಾಂಕೇತಿಕ ನಿಲುವಿನಲ್ಲಿ ಭೂ ದಿನದಂದು ಒಂದು ಗಂಟೆ ತಮ್ಮ ವಿದ್ಯುತ್ ಅನ್ನು ಆಫ್ ಮಾಡಲು ಆಹ್ವಾನಿಸಲಾಗಿದೆ. ಆಹಾರ ಮತ್ತು **ಕೃಷಿ :** ಪರಿಸರ ನಾಶಕ್ಕೆ ಕಾರಣವಾಗುವ ರಾಸಾಯನಿಕ ಕೀಟನಾಶಕಗಳ ಬಳಕೆಯಂತಹ ಕೆಲವು ಕೃಷಿ ಪದ್ಧತಿಗಳ ಬಗ್ಗೆ ಬೆಂಬಲಿಗರು ಜಾಗೃತಿ ಮೂಡಿಸುತ್ತಾರೆ . ಸಾವಯವ , ಸ್ಥಳೀಯ ಮತ್ತು ಸುಸ್ಥಿರ ಕೃಷಿ ತಂತ್ರಗಳಿಗೆ ಹೆಚ್ಚಿನ ಬೆಂಬಲವನ್ನು ಬೆಂಬಲಿಗರು ಪ್ರತಿಪಾದಿಸುತ್ತಾರೆ. ಈ ಸಂಚಿಕೆ ಗುಂಪಿನ ಸದಸ್ಯ ಸಂಸ್ಥೆಗಳಲ್ಲಿ ಅರ್ಜೆಂಟೀನಾದ ಬ್ಯೂನಸ್ ಐರಿಸ್ ಮೂಲದ ಆರ್ಟಿಕ್ಯುಲ್ಟೋರ್ಸ್ ಸೇರಿದೆ, ಇದು ನಗರ ತೋಟಗಾರಿಕೆಯ ಬಗ್ಗೆ ಜಾಗೃತಿ ಮೂಡಿಸುತ್ತದೆ ಮತ್ತು ನಗರಗಳಲ್ಲಿನ ಕೈಬಿಟ್ಟ ಸ್ಥಳಗಳಲ್ಲಿ ನೆಡಲು ನಾಗರಿಕರು ಮತ್ತು ಯುವಕರನ್ನು ಒಟ್ಟುಗೂಡಿಸುತ್ತದೆ. **ಹಸಿರು ಆರ್ಥಿಕತೆ :** ನವೀಕರಿಸಬಹುದಾದ ಇಂಧನ ಮೂಲಗಳಿಗೆ ಸಂಪರ್ಕ ಹೊಂದಿದ ಹಸಿರು ಕೈಗಾರಿಕೆಗಳು ಮತ್ತು ಉದ್ಯೋಗಗಳ ಸೃಷ್ಟಿಗೆ ಬೆಂಬಲಿಗರು ಪ್ರತಿಪಾದಿಸುತ್ತಾರೆ. ಉದಾಹರಣೆಗೆ, ಕೆನಡಾದ ಸಾಸ್ಕಾಚೆವನ್ನಲ್ಲಿರುವ ಸ್ಟೂಡೆಂಟ್ಸ್ ಇನ್ ಫ್ರೀ ಎಂಟರ್ಪ್ರೈಸ್ ಗ್ರೂಪ್, ಮರುಬಳಕೆಯ ವಸ್ತುಗಳನ್ನು ಉತ್ತಮವಾಗಿ ಬಳಸಿಕೊಳ್ಳುವ ವಿದ್ಯಾರ್ಥಿ ಯೋಜನೆಗಳಿಗೆ ಬಹುಮಾನವನ್ನು ಪ್ರಾಯೋಜಿಸುತ್ತದೆ. **ಹಸಿರು ಶಾಲೆಗಳು :** ಅರ್ಥ್ ಡೇ ನೆಟ್ವರ್ಕ್ ರಾಷ್ಟ್ರೀಯ ಹಸಿರು ಶಾಲೆಗಳ ಅಭಿಯಾನವನ್ನು ಪ್ರಾಯೋಜಿಸುತ್ತದೆ. ಹಸಿರು ಶಾಲೆಗಳ ಅಭಿಯಾನವು ಆರೋಗ್ಯಕರ ಶಾಲಾ ಊಟಗಳು, ಪರಿಸರ ತರಗತಿ ಚಟುವಟಿಕೆಗಳು, ಸ್ಥಳೀಯ ಮತ್ತು ರಾಷ್ಟ್ರೀಯ ನಾಯಕರಿಗೆ ತಲುಪುವಿಕೆ ಮತ್ತು ಸುಸ್ಥಿರ ಕಟ್ಟಡ ತಂತ್ರಗಳ ಮೇಲೆ ಒತ್ತು ನೀಡುತ್ತದೆ. **ಮರುಬಳಕೆ ಮತ್ತು ತ್ಯಾಜ್ಯ ಕಡಿತ :** ಜನರು ಉತ್ಪಾದಿಸುವ ತ್ಯಾಜ್ಯದ ಪ್ರಮಾಣವನ್ನು ಕಡಿಮೆ ಮಾಡಲು ಮತ್ತು ನಾವು ಮರುಬಳಕೆ ಮಾಡುವ ಮತ್ತು ಮರುಬಳಕೆ ಮಾಡುವ ಪ್ರಮಾಣವನ್ನು ಹೆಚ್ಚಿಸಲು ಬೆಂಬಲಿಗರು ಕೆಲಸ ಮಾಡುತ್ತಾರೆ.

Printed by Arvind, Published Edited and Owned by Dr. D.C. Ramachandra, No.66, Doddasomanahalli, Magadi Tq, Bengaluru South Dist. and Printed at Computer World, Near G.T. Mall, Mallige Thota, Magadi Road, Bengaluru - 560 023. **Editor: Dr. C. Nanjundaiah.**





# ಸಮೃದ್ಧಿ ಭೈರವ ಭವನ

T.M. ರೋಡ್, ಚುಂಚನಹಳ್ಳಿ, ಶ್ರೀ ಆದಿಚುಂಚನಗಿರಿ ಕ್ಷೇತ್ರ




ಶ್ರೀ ಭೈರವೇಶ್ವರ ಸ್ವಾಮಿ ಭುಕ್ತಿ ಸೇವೆ, ಮದುವೆ, ನಾಮಕರಣ, ಆರತಕ್ಷತೆ,
ಭೀಗರ ಔತಣ, ಮುಂತಾದ ಶುಭ-ಸಮಾರಂಭಗಳಿಗೆ ಸಂಪರ್ಕಿಸಿ

**7795808178, 8722127146**



Registered with Registrar of News Papers for India No.KARKAN/2018/76081, **Sampreethi Samruddhi,** April - 2026.
License to post without prepayment. License No.**KA/BG/CNA/119/2025-2027,**
Date of publication: **28.03.2026.** Posted at **Magadi Sub Post Office-562120** on **29th** of every month




To,

If undelivered please return to :
The Editor
**Sampreethi Sadan**
Govt. Hospital Parallel Road,
Magadi Town, Magadi - 562120